RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 98 ಪುಟ: 06 ಗುರುವಾರ 13-03-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

ಬೆಂಗಳೂರು | ಬೆಂ.ಗ್ರಾಮಾಂತರ ತುಮಕೂರು ಚಿತ್ರದುರ್ಗ ಮೈಸೂರು ಮಂಡ್ಯ ರಾಮನಗರ ಚಾ.ನಗರ ಹಾಸನ ಚಿಕ್ಕಬಳ್ಳಾಪುರ ಕೋಲಾರ

Honourary Editor: Venkatesh



‘ಎಸ್‌ಎಸ್‌ಎಂಬಿ29’ ಸಿನಿಮಾ ರಾಮಾಯಣದ ಆಧಾರಿತವೇ?

ಯಶ್ ಗುಣಗಾನ ಮಾಡಿದ ಹಾಲಿವುಡ್ ತಂತ್ರಜ್ಞ

ಬೆತ್ತಲೆ ಬೆನ್ನು ತೋರಿಸಿದ ಪ್ರಾಣಸಖಿ ಪುಟ 6

# ಸದನದಲ್ಲಿ ಪ್ರತಿಧ್ವನಿಸಿದ ಸಾಲ

## ಆಡಳಿತ-ಪ್ರತಿಪಕ್ಷಗಳ ನಡುವೆ ವಾಕ್ಸಮರ; ಸಾಲ ಸಮರ್ಥಿಸಿಕೊಂಡ ಸಿಎಂ, ದಾಖಲೆ ವೀರ ಎಂದ ಅಶೋಕ್

**ಬೆಂಗಳೂರು:** ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಈ ಬಾರಿ 1.16 ಲಕ್ಷ ಕೋಟಿ ಸಾಲ ವಿಷಯ ಪ್ರಸ್ತಾಪಿಸಿರುವ ರಾಜ್ಯ ಸರ್ಕಾರದ ನಡೆಗೆ ವಿಧಾನಸಭೆಯಲ್ಲಿ ಗುರುವಾರ ತೀವ್ರ ವಿರೋಧಕ್ಕೆ ಕಾರಣವಾಯಿತು.

ಬಜೆಟ್ ಮೇಲಿನ ಚರ್ಚೆ ವೇಳೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ಬಜೆಟ್ ಬಗ್ಗೆಮಾಡಿದ ಟೀಕೆ ಆಡಳಿತ ಮತ್ತು ಪ್ರತಿಪಕ್ಷಗಳನಡುವಿನ ವಾಕ್ಸಮರಕ್ಕೆ ಕಾರಣವಾಯಿತು.

ಶೂನ್ಯ ವೇಳೆಯಲ್ಲಿ ಸಭಾಧ್ಯಕ್ಷ ಯು.ಟಿಖಾದರ್ ಅವರ ಅನುಮತಿ ಮೇರೆಗೆ ಚರ್ಚೆ ಆರಂಭಿಸಿದ ವಿಪಕ್ಷ ನಾಯಕ ಆರ್. ಅಶೋಕ್, ರಾಜ್ಯ ಸರ್ಕಾರ ಪಡೆಯುತ್ತಿರುವ ಸಾಲದ ಬಗ್ಗೆ ತೀವ್ರ ವಿರೋಧ ವ್ಯಕ್ತಪಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಲ ಮಾಡುವುದರಲ್ಲಿ ಹೊಸ ದಾಖಲೆ ನಿರ್ಮಿಸಿದ್ದಾರೆ. ಅವರಿಗೆ ಸಾಲದ ವೀರ ಎಂದು ಬಿರುದು ಕೊಟ್ಟಿದ್ದೇವೆ ಎಂದು ಕಿಚಾಯಿಸಿದರು.

ಸಿದ್ದರಾಮಯ್ಯ ಅವರು ಆಡಳಿತಕ್ಕೆ ಬಂದ ನಂತರ ಸುಮಾರು 4ಲಕ್ಷ91 ಸಾವಿರ ಕೋಟಿ ಸಾಲ ಮಾಡಿದ್ದಾರೆ. ಇವರ ಅವದಿಯಲ್ಲಿ ಶೇ.63% ರಷ್ಟು ಸಾಲ ಹೆಚ್ಚಳವಾಗಿದೆ. ರಾಜ್ಯವನ್ನು ಸಾಲದ ಕೂಪಕ್ಕೆ ತಳ್ಳುತ್ತಿದ್ದಾರೆ. ಒಟ್ಟಾರೆಯಾಗಿ



ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯ ಸರ್ಕಾರದ ಸಾಲ 7ಲಕ್ಷ 81 ಸಾವಿರ ಕೋಟಿಯಿದೆ. 2023-2024ರಲ್ಲಿ 105246 ಕೋಟಿಯಿದ್ದ ಸಾಲ 2025-26ರಲ್ಲಿ 1ಲಕ್ಷ 16 ಸಾವಿರ ಕೋಟಿಗೆ ತಲುಪಿದೆ ಎಂದು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಎಲ್ಲಾ ಸರ್ಕಾರಗಳು ಸಾಲ ಮಾಡುವುದು ಅಭಿವೃದ್ಧಿಗಾದರೇ ರಾಜ್ಯ ಸರ್ಕಾರಕ್ಕೆ ಬಡ್ಡಿ ಕಟ್ಟಲುಸಾಲ ಮಾಡುವ ಪರಿಸ್ಥಿತಿ ಆಗಿದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ ಎಂದು ಲೇವಡಿ ಮಾಡಿದರು.

ಇದಕ್ಕೆ ಉತ್ತರಿಸಿದ ಸಿಎಂ ಸಿದ್ದರಾಮಯ್ಯ ಅವರು ನಾವು ಅಭಿವೃದ್ಧಿಗಾಗಿ ಸಾಳ ಮಾಡಿದ್ದೇಬವೆ.ನಿಮ್ಮ ಕೇಂದ್ರ ಸರ್ಕಾರ ಸಾಲ ಮಾಡಿಲ್ಲವೇ? ಕೇಂದ್ರ ಸರ್ಕಾರ ಸುಮಾರು 2 ಲಕ್ಷದ50 ಸಾವಿರ ಕೋಟಿ ಸಾಲ ಮಾಡಿದೆ. ನೀವು ಪ್ರಶ್ನಿಸುವುದಾದರೇ ಕೇಂದ್ರ ಸರ್ಕಾರವನ್ನು ಪ್ರಶ್ನಿಸಿ ಎಂದು ಎದುರೇಟು ನೀಡಿದರು.

ನಿಮ್ಮದು ಭಂಡತನ, ನಿಮ್ಮ ಭಂಡತನವನ್ನು ಇಲ್ಲಿ ಪ್ರದರ್ಶಿಸಬೇಡಿ ಎಂದು ಪ್ರತಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡರು. ಸರ್ಕಾರಗಳ ಸಾಲ 25% ಅಷ್ಟೇ ಇರಬೇಕು. ಅದು ಅಭಿವೃದ್ಧಿಗೆ ಬಳಕೆಯಾಗಬೇಕು. ಆಗ ಮಾತ್ರ ಆರ್ಥಿಕ ಸಮತೋಲನ ಸಾಧ್ಯ ಎಂದು 2007ರಲ್ಲಿ ನೀಡಿದ್ದ ಹೇಳಿಕೆಗೆ ನಾನು ಈಗಲೂ ಬದ್ಧನಾಗಿದ್ದೇನೆ ಎಂದು ಸಭೆಗೆ ಉತ್ತರಿಸಿದರು. ಪುಟ 2

## ಸಚಿವರ ಗೈರು ಸರ್ಕಾರಕ್ಕೆ ವಿಪಕ್ಷ ತರಾಟೆ

**ಬೆಂಗಳೂರು:** ರಾಜ್ಯ ಬಜೆಟ್ ಕುರಿತು ವಿಪಕ್ಷ ನಾಯಕರು ಮಾತನಾಡುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ, ಸರ್ಕಾರದ ಆರ್ಥಿಕ ಮುಖ್ಯ ಕಾರ್ಯದರ್ಶಿ, ಪ್ರಮುಖ ಸಚಿವರು ಸದನದಲ್ಲಿ ಇಲ್ಲ ಎಂದು ವಿಪಕ್ಷ ಸದ್ಯಸರು ಗರಂ ಆಗಿ ಸರ್ಕಾರಕ್ಕೆ ತೀವ್ರ ತರಾಟೆಗೆ ತೆಗೆದುಕೊಂಡರು.ವಿಧಾನಸಭೆಯಲ್ಲಿ ಗುರುವಾರ ಬಜೆಟ್ ಕುರಿತು ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಲು ಮುಂದಾದರು. ಈ ವೇಳೆ ಮಧ್ಯ ಪ್ರವೇಶಿಸಿದ ಬಿಜೆಪಿ ಸದಸ್ಯರಾದ ಅರಗ ಜ್ಞಾನೇಂದ್ರ, ಡಾ.ಸಿ.ಎನ್. ಅಶ್ವಥ್ ನಾರಾಯಣ ಸೇರಿದಂತೆ ಪ್ರಮುಖರು ಮುಖ್ಯಮಂತ್ರಿ ಗಳು ಎಲ್ಲಿ, ಫೈನಾನ್ಸ್ ಕಾರ್ಯದರ್ಶಿ ಎಲ್ಲಿ ಎಂದು ಸರ್ಕಾರಕ್ಕೆ ಖಾರ ವಾಗಿ ಪ್ರಶ್ನಿಸಿದರು.ಈ ವೇಳೆ ಪೀಠದಲ್ಲಿದ್ದ ಉಪ ಸಭಾಪತಿ ರುದ್ರಪ್ಪ ಲಮಾಣಿ, ಮುಖ್ಯಮಂತ್ರಿಗೆ ಆರೋಗ್ಯ ಸರಿಯಲ್ಲ.ನಾಳೆ ಉತ್ತರಿಸುತ್ತಾರೆ ಎಂದು ಈಗಾಗಲೇ ಹೇಳಿದ್ದಾರೆ. ಹಾಗಾಗಿ, ಮಾತು ಮುಂದುವರೆಸಿ ಎಂದರು. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಸದಸ್ಯರು, ವಿರೋಧ ಪಕ್ಷದ ನಾಯಕರು ಮಾತನಾಡುವಾಗ ಮುಖ್ಯಮಂತ್ರಿ, ಪ್ರಮುಖ ಸಚಿವರು ಇರಲೇ ಬೇಕು. ಆದರೆ, ಇಂದು ಅಗೌರವ ತೋರಲಾಗಿದೆ. ಹಾಗಾಗಿ,ವಿಪಕ್ಷ ನಾಯಕರು ಮಾತು ನಿಲ್ಲಿಸಿ, ಸದನ ಬಹಿಷ್ಕಾರಿಸೋಣ ಜತೆಗೆ ಹೊರ ಹೋಗೋಣ ಎಂದು ಉಲ್ಲೇಖಿಸಿದರು. ಈ ವೇಳೆ ಸರ್ಕಾರದ ಪರವಾಗಿ ಉತ್ತರಿಸಿದ ಸಚಿವ ಕೆ.ಜೆ.ಜಾರ್ಜ್ ಅವರು, ಪ್ರತಿಪಕ್ಷ ನಾಯಕರು ಹೇಳಿವ ಪ್ರತಿಯೊಂದು ಮಾತುಗಳನ್ನು ಖುದ್ದು ನಾನೇ ಬರೆದುಕೊಳ್ಳುತ್ತಿದ್ದೇನೆ.ಆನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉತ್ತರ ಕೊಡಿಸಲಾಗುವುದು ಎಂದರು. ಪುಟ 2



ವಿಧಾನಸಭೆಯಲ್ಲಿ ಅಂಗೀಕೃತವಾದ ರೂಪದಲ್ಲಿರುವ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ 2024 ಅನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ವಿಧಾನ ಪರಿಷತ್ತಿನಲ್ಲಿ ಮಂಡಿಸಿ, ವಿಧೇಯಕದ ಉದ್ದೇಶವನ್ನು ವಿವರಿಸಿದರು.

## ನಕಲಿ ಔಷಧ ಮಾರಾಟಕ್ಕೆ ಅಂಕುಶ

ಬೆಂಗಳೂರು:ರಾಜ್ಯದಲ್ಲಿ ನಕಲಿ ಔಷಧ ಮಾರಾಟ ಜಾಲವನ್ನು ಹತ್ತಿಕ್ಕಲು ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಅವರು ಗುರುವಾರ ವಿಧಾನಸಭೆಗೆ ತಿಳಿಸಿದರು.

ನಕಲಿ ಔಷಧ ಮಾರಾಟಗಾರರ ವಿರುದ್ಧ ಕಾರ್ಯಾಚರಣೆಯನ್ನು ನಡೆಸಿ ಮೊಕದ್ದಮೆಗಳನ್ನು ದಾಖಲು ಮಾಡಲಾಗುತ್ತಿದೆ ಎಂದರು.

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಡಾ. ಅಶ್ವತ್ಥ್‌ನಾರಾಯಣ ರವರ ಪ್ರಶ್ನೆಗೆ ಉತ್ತರ ನೀಡಿದ ಅವರು, ನಕಲಿ ಔಷಧ ಜಾಲವನ್ನು ಪತ್ತೆಹಚ್ಚಿ ಕೆಲಸ ಮಾಡುತ್ತಿದ್ದೇವೆ. ಉತ್ತರ ಪ್ರದೇಶ, ಹಿಮಾಚಲ ಪ್ರದೇಶ, ಉತ್ತರಖಂಡಗಳಲ್ಲಿ ಈ ನಕಲಿ ಔಷಧ ತಯಾರಿಕಾ ಘಟಕಗಳು ಇವೆ. ಈ ನಕಲಿ ಔಷಧಿ ರಾಷ್ಟ್ರಮಟ್ಟದ ಸಮಸ್ಯೆಯಾಗಿದೆ. ಇದನ್ನು ಹತ್ತಿಕ್ಕುವ ಪ್ರಯತ್ನವನ್ನು ಸರ್ಕಾರ ನಡೆಸಿದೆ ಎಂದರು.

ನಕಲಿ ಔಷಧ ಮಾರಾಟ ಮಾಡುತ್ತಿದ್ದ 87 ಔಷಧಿ




ಅಂಗಡಿಗಳ ಲೈಸೆನ್ಸ್ ಅಮಾನತ್ತು ಮಾಡಿದ್ದೇವೆ. 3 ಅಂಗಡಿಗಳನ್ನು ಬಂದ್ ಮಾಡಿಸಿದ್ದೇವೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ರಾಜ್ಯದಲ್ಲಿ ಪ್ರಸ್ತುತ 772 ಅನುಮೋದಿತ ಔಷಧಗಳಿದ್ದು, ಈ ಪೈಕಿ 475 ಔಷಧಗಳ ದಾಸ್ತಾನು ಇದೆ. ಈ ವರ್ಷದಿಂದ ಅನುಮೋದಿತ ಔಷಧಿಗಳ ಸಂಖ್ಯೆಯನ್ನು 1032ಕ್ಕೆ ಹೆಚ್ಚಿಸುವ ತೀರ್ಮಾನವನ್ನು ಪುಟ 2

## ತ್ರಿಭಾಷಾ ಸೂತ್ರಕ್ಕೆ ಸಂಸದೆ ಸುಧಾಮೂರ್ತಿ ಬೆಂಬಲ

**ಬೆಂಗಳೂರು:** ದೇಶದಲ್ಲಿ ತ್ರಿಭಾಷಾ ಸೂತ್ರ ಬೇಡ ಎನ್ನುವ ಬಗ್ಗೆ ಪರ-ವಿರೋಧ ಚರ್ಚೆಗಳು ಜೋರಾಗಿ ನಡೆದಿವೆ. ಈ ರೀತಿ ಇರುವಾಗಲೇ ರಾಜ್ಯ ಸಭಾ ಸಂಸದೆ ಸುಧಾಮೂರ್ತಿ ಅವರು ತ್ರಿಭಾಷಾ ಸೂತ್ರಕ್ಕೆ ತಮ್ಮ ಬೆಂಬಲವನ್ನು ಸೂಚಿಸಿದ್ದಾರೆ.



ಯಾರು ಬೇಕಾದರೂ ಬಹು ಭಾಷೆಗಳನ್ನು ಕಲಿಯಬಹುದು. ನನಗೆ 7ರಿಂದ 8 ಭಾಷೆಗಳು ಬರುತ್ತವೆ. ಹೀಗಾಗಿ ನಾನು ಕಲಿಯುವುದನ್ನು ಆನಂದಿಸುತ್ತೇನೆ. ಬಹುಭಾಷೆಗಳಿಂದ ವಿದ್ಯಾರ್ಥಿಗಳು ಸಹ ಸಾಕಷ್ಟು ಕಲಿಯುವುದಕ್ಕೆ ಅವಕಾಶಗಳು ಇವೆ ಎಂದಿದ್ದಾರೆ. ನೂತನ ಶಿಕ್ಷಣ ನೀತಿಯ ಬಗ್ಗೆ ಭಾರತದಲ್ಲಿ ಮತ್ತೊಮ್ಮೆ ಚರ್ಚೆಯಾಗುತ್ತಿದೆ. ಸಂಸತ್ತಿನಲ್ಲೂ ಈ ವಿಚಾರದ ಬಗ್ಗೆ ಚರ್ಚೆಗಳು ನಡೆದಿದೆ. ನೂತನ ಶಿಕ್ಷಣ ನೀತಿ ಹಾಗೂ ತ್ರಿಭಾಷಾ ಸೂತ್ರವನ್ನು ಕರ್ನಾಟಕ ಹಾಗೂ ಪುಟ 2

## 158 ನ್ಯಾಯಾಧೀಶರ ನೇಮಕಾತಿಗೆ ತಡೆ

**ನವದೆಹಲಿ:** ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ 158 ಸಿವಿಲ್ ನ್ಯಾಯಾಧೀಶರ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಹೊರಡಿಸಿದ್ದ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆಯಾಜ್ಞೆ ವಿಧಿಸಿದೆ. ಈ ಕುರಿತು ಪೂರಕ ಅಧಿಸೂಚನೆ ಹೊರಡಿಸಿರುವ ಹೈಕೋರ್ಟ್ ಸಿವಿಲ್ ನ್ಯಾಯಾಧೀಶರುಗಳ ನೇಮಕಾತಿ ಸಮಿತಿ ಮಹಾವಿಲೇಖನಾಧಿಕಾರಿ ಹಾಗೂ ಕಾರ್ಯದರ್ಶಿ ಕೆ.ಎಸ್ ಭರತ್ ಕುಮಾರ್ ಅವರು, ಪುಟ 2

## ಸ್ಮಗ್ಲಿಂಗ್ ಕೇಸ್: ಇಡಿ ಅಧಿಕಾರಿಗಳಿಂದ 8 ಕಡೆ ದಾಳಿ, ಪರಿಶೀಲನೆ

**ಬೆಂಗಳೂರು:** ನಟಿ ರನ್ಯಾರಾವ್ ಚಿನ್ನ ಕಳ್ಳಸಾಗಾಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಇಡಿ ಅಧಿಕಾರಿಗಳ ಎಂಟ್ರಿ ಕೊಟ್ಟಿದ್ದು ಬೆಂಗಳೂರಿನ 8 ಕಡೆಗಳಲ್ಲಿ ದಾಳಿ ನಡೆಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಗೋಲ್ಡ್ ಸ್ಮಗ್ಲಿಂಗ್ ಕೇಸ್ ನಲ್ಲಿ ಸಿಲುಕಿ ನಟಿ ರನ್ಯಾರಾವ್ ನ್ಯಾಯಾಂಗ ಬಂಧನದಲ್ಲಿದ್ದು ಇದೀಗ ಪ್ರಕರಣ ಸಂಬಂಧ ಪುಟ 2

## ಕರೆಂಟ್ ಶಾಕ್; ಬಲಿ

**ಬೆಂಗಳೂರು:** ನೀರು ತರಲು ಹೋದಾಗ ವಿದ್ಯುತ್ ಪ್ರವಹಿಸಿ ಮಹಿಳೆಯೊಬ್ಬರು ಸಾವನ್ನಪ್ಪಿರುವ ಘಟನೆ ಚಾಮರಾಜಪೇಟೆಯ ಕೆ.ಆರ್. ಮಾರ್ಕೆಟ್ ರಸ್ತೆಯ ಆನಂದಪುರದಲ್ಲಿ ಗುರುವಾರ ನಡೆದಿದೆ. ಸೆಲ್ವಿ ಮೃತಪಟ್ಟ ಮಹಿಳೆ. ಈ ಏರಿಯಾದಲ್ಲಿರುವ ಯಾವ ಮನೆಗೂ ನೀರಿನ ಸಂಪರ್ಕ ಇಲ್ಲ. ದೊಡ್ಡ ಪೈಪ್‌ನಲ್ಲಿ ಅಲ್ಲಲ್ಲಿ ಮೋಟರ್ ಕನೆಕ್ಷನ್ ನೀಡಲಾಗಿದೆ. ಮೋಟರ್ ಸ್ಟಾರ್ಟ್ ಮಾಡುವಾಗ ಕರೆಂಟ್ ತಗುಲಿ ಮಹಿಳೆ ಮೃತಪಟ್ಟಿದ್ದಾರೆ ಎನ್ನಲಾಗಿದೆ. ಪುಟ 2

## ಗುತ್ತಿಗೆ ಅವ್ಯವಹಾರದ ತನಿಖಾ ವರದಿ; ಕ್ರಮದ ಬಗ್ಗೆ ಸಿಎಂ, ಕ್ಯಾಬಿನೆಟ್ ನಿರ್ಧಾರ

ಬೆಂಗಳೂರು: ಗುತ್ತಿಗೆ ಅವ್ಯವಹಾರದ ತನಿಖಾ ವರದಿ ಸಲ್ಲಿಕೆ ಆಗಿದ್ದು ವರದಿಯಾನುಸಾರ ಮುಂದೆ ಕ್ರಮ ಕೈಗೊಳ್ಳುವ ಬಗ್ಗೆ ಮುಖ್ಯಮಂತ್ರಿಯವರು ಹಾಗೂ ಮಂತ್ರಿಮಂಡಲ ನಿರ್ಧರಿಸಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಂತಹ ಹಗರಣಗಳು ಒಂದೆರಡಲ್ಲ; ಅದರಲ್ಲೂ ಪಿಎಸ್ ಐ ನೇಮಕಾತಿ, ಉಪನ್ಯಾಸಕರ ನೇಮಕ, ಕೊರೋನಾ ಉಪಕರಣ ಖರೀದಿ, ಹೀಗೆ ಸಾಕಷ್ಟು ಹಗರಣಗಳು



ನಡೆದಿದ್ದು, ಇವೆಲ್ಲದರ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರು ಸಮಗ್ರ ತನಿಖೆ ನಡೆಸಿ, ಸರ್ಕಾರಕ್ಕೆ ವರದಿ ಒಪ್ಪಿಸಿದ್ದಾರೆ. ವರದಿಯು ಸಚಿವ ಸಂಪುಟದ ಮುಂದೆ ಚರ್ಚೆ ಆಗಲಿದೆ. ಮುಖ್ಯಮಂತ್ರಿಯವರು ಮತ್ತು ಸಚಿವ ಸಂಪುಟ ಮುಂದೆ ನಿರ್ಧಾರ ಕೈಗೊಳ್ಳುತ್ತದೆ, ಅದರ ಮೇಲೆ ಕ್ರಮ ಆಗಲಿದೆ ಎಂದು ಸಚಿವರು ಹೇಳಿದರು.

**ಶಾಮೀಲಾಗಿದ್ದರೆ ಯಾರನ್ನೂ ಬಿಡುವುದಿಲ್ಲ**

ಚಿತ್ರ ನಟಿ ರನ್ಯಾ ರಾವ್ ಕೇಸ್ ಸಿಐಡಿ ವಿಚಾರಣೆ ವಾಪಸ್ ಕುರಿತಂತೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ನಟಿ ರನ್ಯಾ ರಾವ್ ಕೇಸಿನ ಬಗ್ಗೆ ಮಾಧ್ಯಮದವರು (ನೀವು) ಏನ್ನೆಲ್ಲ ತೋರಿಸುತ್ತಿದ್ದೀರೋ ಅಷ್ಟೇ ನಮಗೆ ಗೊತ್ತು. ನನ್ನ ಇಲಾಖೆಯಲ್ಲೇನು ಇಂಟೆಲಿಜೆನ್ಸಿ ಇಲ್ಲ. ಪುಟ 2

## ಶೀಘ್ರ ಬೋಧಕ-ಬೋಧಕೇತರ ಹುದ್ದೆ ಭರ್ತಿ

**ಬೆಂಗಳೂರು:** ರಾಜ್ಯದ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳಲ್ಲಿ 2 ಸಾವಿರ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಭರ್ತಿಗೆ ಈ ಆಯವ್ಯಯದಲ್ಲಿ ಮುಖ್ಯಮಂತ್ರಿಗಳು ಅವಕಾಶ ನೀಡಿದ್ದು, ಅತಿ ಶೀಘ್ರದಲ್ಲೇ ಈ ಹುದ್ದೆಗಳನ್ನು ನೇಮಕಾತಿ ಪ್ರಕ್ರಿಯೆಗಳನ್ನು ಆರಂಭಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ವಿಧಾನಸಭೆಯಲ್ಲಿ ಗುರುವಾರ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ರಾಘವೇಂದ್ರ ಬಸವರಾಜು ಹಿಟ್ನಾಳ್ ರವರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದ ಹಲವು



ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಹುದ್ದೆಗಳ ಕೊರತೆ ಇದೆ. ಈ ಹುದ್ದೆಗಳನ್ನು ಸದ್ಯದಲ್ಲೇ ಭರ್ತಿ ಮಾಡಲಾಗುವುದು. ಈ ಬಜೆಟ್‌ನಲ್ಲಿ ಕಾಲೇಜು ಶಿಕ್ಷಣ ಇಲಾಖೆ ಪುಟ 2

## ರೈಲುಗಳಲ್ಲಿ ಮೆನು, ಬೆಲೆಯ ಪಟ್ಟಿ ಕಡ್ಡಾಯ

**ನವದೆಹಲಿ:** ರೈಲುಗಳಲ್ಲಿ ಆಹಾರದ ಮೆನು ಮತ್ತು ದರಗಳ ಪ್ರದರ್ಶನ ಕಡ್ಡಾಯವಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಗುರುವಾರ ಲೋಕಸಭೆಗೆ ತಿಳಿಸಿದರು.

ಪ್ರಯಾಣಿಕರು ಆಹಾರದ ಬೆಲೆಗಳನ್ನು ವಿವರಿಸುವ ಮೆನು ಕಾರ್ಡ್‌ಗಳು, ದರ ಪಟ್ಟಿಗಳು ಮತ್ತು ಡಿಜಿಟಲ್ ಅಲರ್ಟ್ ಪಡೆಯಲು ಲಾಗಿನ್ ಆಗಬೇಕು ಎಂದು ಅವರು ಹೇಳಿದರು.

“ಪ್ರಯಾಣಿಕರ ಮಾಹಿತಿಗಾಗಿ ಎಲ್ಲಾ ಆಹಾರ ಪದಾರ್ಥಗಳ ಮೆನುವಿನ ಜೊತೆಗೆ ದರಗಳು ಲಭ್ಯವಿದೆ. ಎಲ್ಲಾ ವಿವರಗಳೊಂದಿಗೆ ಮುದ್ರಿತ ಮೆನು ಕಾರ್ಡ್‌ಗಳನ್ನು ವೇಟರ್‌ಗಳೊಂದಿಗೆ ಲಭ್ಯವಾಗುವಂತೆ ಮಾಡಲಾಗುತ್ತದೆ. ಬೇಡಿಕೆಯ ಮೇರೆಗೆ ಪ್ರಯಾಣಿಕರಿಗೆ ಅದನ್ನು ನೀಡಲಾಗುತ್ತದೆ” ಎಂದು ಅಶ್ವಿನಿ ವೈಷ್ಣವ್ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ದರ ಪಟ್ಟಿಯನ್ನು ಪ್ಯಾಂಟ್ರಿ ಕಾರುಗಳಲ್ಲಿ ಪ್ರದರ್ಶಿಸಲಾಗುತ್ತದೆ ಮತ್ತು ಉತ್ತಮ ಪಾರದರ್ಶಕತೆಗಾಗಿ ಪ್ರಯಾಣಿಕರು ಇನ್ನು



ಮೆನುಗಳು ಮತ್ತು ಸುಂಕಗಳ ಲಿಂಕ್‌ಗಳೊಂದಿಗೆ ಖಖಖ ಎಚ್ಚರಿಕೆಗಳನ್ನು ಸ್ವೀಕರಿಸಲಿದ್ದಾರೆ ಎಂದು ಅವರು ಹೇಳಿದರು. ರೈಲುಗಳಲ್ಲಿ ಆಹಾರದ ಗುಣಮಟ್ಟ ಮತ್ತು ನೈರ್ಮಲ್ಯವನ್ನು ಹೆಚ್ಚಿಸಲು ತೆಗೆದುಕೊಂಡ ಕ್ರಮಗಳನ್ನು ಅಶ್ವಿನಿ ವೈಷ್ಣವ್ ವಿವರಿಸಿದ್ದಾರೆ. ಉತ್ತಮ ಗುಣಮಟ್ಟದ ಅಡುಗೆಮನೆಗಳಿಂದ ಊಟವನ್ನು ಪೂರೈಸಲಾಗುತ್ತದೆ, ಪ್ರಮುಖ ಸ್ಥಳಗಳಲ್ಲಿ ಆಧುನೀಕೃತ ಸೌಲಭ್ಯಗಳನ್ನು ಸ್ಥಾಪಿಸಲಾಗಿದೆ. ಆಹಾರ ತಯಾರಿಕೆಯನ್ನು ಮೇಲ್ವಿಚಾರಣೆ ಮಾಡಲು ಅಡುಗೆಮನೆಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪುಟ 2

## ಮೈಸೂರಿನಲ್ಲಿ ಅವೈಜ್ಞಾನಿಕ ಘನತ್ಯಾಜ್ಯ ಘಟಕ ತೆರವಿಗೆ ಆಗ್ರಹ

**ನವದೆಹಲಿ:** ಮೈಸೂರು ಸಮೀಪ ಹಳೆ ಕೆಸರೆ ಗ್ರಾಮದ ಅವೈಜ್ಞಾನಿಕ ಘನತ್ಯಾಜ್ಯ ಘಟಕ ವಿಚಾರಕ್ಕೆ ಸಂಬಂಧಿಸಿದಂತೆ ಸಂಸತ್ ಅಧಿವೇಶನದಲ್ಲಿ ಮಾತೃಭಾಷೆ ಕನ್ನಡದಲ್ಲಿ ವಿಷಯ ಮಂಡಿಸುವ ಮೂಲಕ ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಗಮನ ಸೆಳೆದಿದ್ದಾರೆ.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸಿದ್ಧಲಿಂಗಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಹಳೆ ಕೆಸರೆ ಗ್ರಾಮದಲ್ಲಿ ಅವೈಜ್ಞಾನಿಕ ಘನತ್ಯಾಜ್ಯ ಘಟಕ ನಿರ್ಮಾಣದಿಂದ ಜನರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸಂಸತ್ ಅಧಿವೇಶನದಲ್ಲಿ ನಿನ್ನೆ ಪ್ರಸ್ತಾಪ ಮಾಡಿದ ಸಂಸದ ಯದುವೀರ್, ನನ್ನ ಕ್ಷೇತ್ರ ವ್ಯಾಪ್ತಿಯ ಹಳೇ ಕೆಸರೆ ಗ್ರಾಮದಲ್ಲಿ ಘನತ್ಯಾಜ್ಯ ಘಟಕ



ನಿರ್ಮಾಣದ ವೇಳೆ ಕಾನೂನು ರೀತಿ ಕ್ರಮಗಳನ್ನು ತೆಗೆದುಕೊಂಡಿಲ್ಲ, ಯಾವುದೇ ನೀತಿ-ನಿಯಮಗಳನ್ನು ಪಾಲಿಸಿಲ್ಲ. ಘನತ್ಯಾಜ್ಯ ನಿರ್ಮಾಣಕ್ಕೆ ಶಾಸನಬದ್ಧ ಅನುಮತಿಗಳನ್ನು ಪಡೆಯದೇ ನಿರ್ಮಾಣ ಮಾಡಲಾಗಿದೆ. ಅವೈಜ್ಞಾನಿಕವಾಗಿ ನಿರ್ವಹಣಾ ಘಟಕವನ್ನು ಸ್ಥಾಪಿರುವುದರಿಂದ ಕೊಳೆತ ದುರ್ವಾಸನೆ ಹೊರ ಹೊಮ್ಮುತ್ತಿದ್ದು, ಘನ ತ್ಯಾಜ್ಯದಿಂದ ಪರಿಸರದ ಮೇಲೆ ಭಾರಿ ಪುಟ 2

## ‘ನಮಗೆ ಯಾವ ಒತ್ತಡ?’

**ಬೆಂಗಳೂರು:** ‘ಪೊಲೀಸ್ ಪ್ರೊಟೊಕಾಲ್ ಉಲ್ಲಂಘನೆ ಬಗ್ಗೆ ತಿಳಿದುಕೊಳ್ಳಲು ಸಿಐಡಿ ತನಿಖೆಗೆ ಆದೇಶಿಸಿದ್ದೆ. ಅಷ್ಟರೊಳಗಾಗಲೇ ಸಿಎಂ ಕಚೇರಿಯಿಂದ ಮೇಲ್ಮಟ್ಟದ ತನಿಖೆಗೆ ಆದೇಶ ನೀಡಲಾಗಿತ್ತು. ಒಂದೇ ವಿಚಾರಕ್ಕೆ ಎರಡು ಕಡೆ ತನಿಖೆ ಆಗೋದು ಬೇಡ ಎಂಬ ಕಾರಣಕ್ಕೆ ನಾವು ಸಿಐಡಿ ತನಿಖೆಯನ್ನು ಹಿಂಪಡೆದಿದ್ದೇವೆ ಎಂದು ಗೃಹ ಸಚಿವ



ಜಿ.ಪರಮೇಶ್ವರ್ ಗುರುವಾರ ಹೇಳಿದ್ದಾರೆ. ರನ್ಯಾ ಅವರ ಪ್ರಕರಣದಲ್ಲಿ ಪೊಲೀಸ್ ಪ್ರೋಟೋಕಾಲ್ ಉಲ್ಲಂಘನೆ ಸಂಬಂಧ ರಾಜ್ಯ ಸರ್ಕಾರ ಸಿಐಡಿ ತನಿಖೆಗೆ ಆದೇಶಿಸಿತ್ತು. ಇದನ್ನು 24 ಗಂಟೆಯಲ್ಲಿ ಹಿಂಪಡೆಯಲಾಗಿದೆ. ಈ ಬಗ್ಗೆ ರಾಜ್ಯ ಗೃಹಸಚಿವ ಜಿ. ಪರಮೇಶ್ವರ್ ಅವರು ಮಾತನಾಡಿದ್ದಾರೆ. ಮಾಧ್ಯಮಗಳ ಎದುರು ಮಾತನಾಡಿದ ಪರಮೇಶ್ವರ್, ‘ತನಿಖೆಗೆ ಆದೇಶ ನೀಡಲೂ ಯಾರು ಒತ್ತಡ ಹೇರಿರಲಿಲ್ಲ. ಹಿಂದಕ್ಕೆ ಪಡೆಯಲೂ ಯಾರೂ ಒತ್ತಡ ಹೇರಿಲ್ಲ. ಎರಡು ತನಿಖೆ ಬೇಡ ಎಂಬ ಕಾರಣಕ್ಕೆ ನಾವು ಹಿಂಪಡೆದಿದ್ದೇವೆ ಅಷ್ಟೇ. ಇಲ್ಲಿ ಯಾವುದೇ ಗೊಂದಲ ಬೇಡ’ ಎಂದು ಪರಮೇಶ್ವರ್ ಹೇಳಿದ್ದಾರೆ.

# ಗುತ್ತಿಗೆದಾರರ 40 ಪರ್ಸೆಂಟ್ ಕಮಿಷನ್ ಪ್ರಕರಣದ ವಿಚಾರಣೆ 'ಚಾಲೆಂಜಿಂಗ್ ಟಾಸ್ಕ್' ಆಗಿತ್ತು

**ಬೆಂಗಳೂರು:** ಗುತ್ತಿಗೆದಾರರ ಶೇಕಡಾ 40ರಷ್ಟು ಕಮಿಷನ್ ಆರೋಪ ಪ್ರಕರಣದ ವಿಚಾರಣೆ ಬಹುದೊಡ್ಡ "ಚಾಲೆಂಜಿಂಗ್ ಟಾಸ್ಕ್" ಆಗಿತ್ತು ಎಂದು ಗುತ್ತಿಗೆದಾರರ ಪ್ರಕರಣದ ನ್ಯಾಯಾಂಗ ವಿಚಾರಣಾ ಆಯೋಗ ಅಧ್ಯಕ್ಷ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬುಧವಾರ ಸಂಜೆ ಗುತ್ತಿಗೆದಾರರ ಸಂಘದ ಕಮಿಷನ್ ಆರೋಪಗಳ ಬಗ್ಗೆ ತನಿಖೆ ನಡೆಸಿ 20 ಸಾವಿರ ಪುಟಗಳ (ಅನುಬಂಧ ಸೇರಿದಂತೆ) ವರದಿ ಸಲ್ಲಿಸಿದ ಬಳಿಕ 'ಈಟಿವಿ ಭಾರತ' ಜೊತೆ ಅವರು ಮಾತನಾಡಿದರು.

ಗುತ್ತಿಗೆದಾರರ ಕಮಿಷನ್ ಆರೋಪಗಳ ಬಗ್ಗೆ ತನಿಖೆ ನಡೆಸುವುದು, ಸಾಕ್ಷಿಗಳ ವಿಚಾರಣೆ ನಡೆಸಿ ನ್ಯಾಯಾಂಗ ವಿಚಾರಣಾ ಆಯೋಗವು ಸೂಕ್ತ ತೀರ್ಮಾನ ತೆಗೆದುಕೊಂಡು ಸರ್ಕಾರಕ್ಕೆ ವರದಿ ಸಲ್ಲಿಸುವುದು ಬಿಗ್ ಟಾಸ್ಕ್ ಎಂದರು.

ಆಯೋಗದ ಅಧಿಕಾರಿಗಳ ಸಹಕಾರ, ಸಿಬ್ಬಂದಿಯ ಪರಿಶ್ರಮದಿಂದ ಸುದೀರ್ಘ ತನಿಖಾ ವರದಿ ತಯಾರಿಸಿ ಸರ್ಕಾರ ವಹಿಸಿದ ಗುರುತರ ಜವಾಬ್ದಾರಿಯನ್ನು ನಿಭಾಯಿಸಲಾಗಿದೆ ಎಂದು ನ್ಯಾ.ನಾಗಮೋಹನದಾಸ್ ಹೇಳಿದರು. ಗುತ್ತಿಗೆದಾರರ ಸಂಘ ಸರ್ಕಾರದ ಟೆಂಡರ್ ಕಾಮಗಾರಿಗಳಲ್ಲಿ ಶೇ.40ಕ್ಕಿಂತ ಅಧಿಕ ಕಮಿಷನ್ ನೀಡುವ ಪದ್ಧತಿ ಜಾರಿಯಲ್ಲಿದೆ ಎಂದು ಸಲ್ಲಿಸಿದ್ದ ದೂರುಗಳು,



ಪ್ಯಾಕೇಜ್ ಪದ್ಧತಿ ಕೈಬಿಡುವುದು, ಎಸ್‌ಆರ್ ದರಪಟ್ಟಿ ನಿಗದಿ, ಸ್ಟಾರ್ ರೇಟ್ ಪದ್ಧತಿ ಜಾರಿ, ಪಾರದರ್ಶಕತೆ ಕಾಪಾಡಿಕೊಳ್ಳುವುದು, ಸೀನಿಯಾರಿಟಿ ಮೇಲೆ ಬಿಲ್ ಪಾವತಿ, ಕೆಆರ್‌ಐಡಿಎಲ್‌ನಿಂದ ಗುತ್ತಿಗೆದಾರರಿಗೆ ನೇರವಾಗಿ ಕಾಮಗಾರಿಗಳ ನೀಡಿಕೆ ತಪ್ಪಿಸುವುದು ಸೇರಿದಂತೆ ಹಲವಾರು ಆರೋಪಗಳ ಸತ್ಯಾಸತ್ಯತೆ ಬಗ್ಗೆ ವಿವರವಾದ ಅಧ್ಯಯನ ನಡೆಸಿರುವ ಆಯೋಗ ಸರ್ಕಾರಕ್ಕೆ ವರದಿ ಸಲ್ಲಿಸಿದೆ.

ಕಮಿಷನ್ ಆರೋಪಗಳು ಸಾರ್ವಜನಿಕ ಕಾಮಗಾರಿಗಳಿಗೆ ಸಂಬಂಧಪಟ್ಟಿರುವ ಆರೋಪಗಳಾಗಿದ್ದರಿಂದ ಸಾರ್ವಜನಿಕರ ಹೇಳಿಕೆಗಳು ಮತ್ತು ವಿವರಗಳು ಬಹಳ ಮುಖ್ಯ. ಸಾರ್ವಜನಿಕರಿಂದ ಬಂದ ದೂರುಗಳ ಬಗ್ಗೆ ಆಯೋಗ ಕೂಲಂಕಷವಾಗಿ ತನಿಖೆ ನಡೆಸಿದ್ದು, ಸಲಹೆ ಮತ್ತು ವಿಚಾರಣಾ ಆಯೋಗದ ಅಭಿಪ್ರಾಯಗಳನ್ನು ವರದಿಯಲ್ಲಿ ತಿಳಿಸಲಾಗಿದೆ.

ಆಯೋಗ ತನಿಖೆ ನಡೆಸುವ ಸಂದರ್ಭದಲ್ಲಿಯೇ ರಾಜ್ಯ ಸರ್ಕಾರ ಜಲಸಂಪನ್ಮೂಲ, ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಸೇರಿದಂತೆ 5 ಪ್ರಮುಖ ಇಲಾಖೆಗಳಲ್ಲಿ ದಿನಾಂಕ 16–7–2019ರಿಂದ 31–3–2023ರ ಅವಧಿಯಲ್ಲಿ ನಡೆದ ಎಲ್ಲಾ ಕಾಮಗಾರಿಗಳ ತನಿಖೆ ನಡೆಸಿ ವರದಿ ನೀಡಲು ತಿಳಿಸಿತ್ತು. ಈ ಬಗ್ಗೆ ವಿಚಾರಣೆ ಆಯೋಗ ವೈಜ್ಞಾನಿಕವಾಗಿ ಯಾರ್ಂಡಮ್ ಮಾದರಿಯಲ್ಲಿ ಕೆಲವು ಪೂರ್ಣಗೊಂಡ ಕಾಮಗಾರಿಗಳನ್ನು ಆಯ್ಕೆ ಮಾಡಿಕೊಂಡು ತನಿಖೆ ನಡೆಸಿದೆ ಎಂದು ನ್ಯಾ.ನಾಗಮೋಹನದಾಸ್ ತಿಳಿಸಿದ್ದಾರೆ.

ತನಿಖಾ ಸಂದರ್ಭದಲ್ಲಿ ಸ್ಥಳ, ಕಡತ ಹಾಗೂ ಲೆಕ್ಕ ಪತ್ರಗಳ ಪರಿಶೀಲನೆ ನಡೆಸಲಾಗಿದೆ. ತನಿಖಾ ವರದಿ ಅನುಬಂಧಗಳೂ ಸೇರಿದಂತೆ ಸುಮಾರು 20 ಸಾವಿರ ಪುಟಗಳನ್ನು ಹೊಂದಿದೆ ಎಂದು ತಿಳಿಸಿರುವ ನ್ಯಾ.ನಾಗಮೋಹನದಾಸ್ ಅವರು ವರದಿಯ ಶಿಫಾರಸುಗಳನ್ನು ತಾವು ಬಹಿರಂಗಪಡಿಸುವುದು ನೈತಿಕವೆನಿಸದು ಎಂದು ಹೇಳಿದ್ದಾರೆ.

ಇದೇ ವೇಳೆ ನ್ಯಾಯಾಂಗ ತನಿಖಾ ಆಯೋಗವು ರಾಜ್ಯ ಸರ್ಕಾರಕ್ಕೆ ನಾರಾಯಣಪುರ ಬಲದಂಡೆ ಮುಖ್ಯ ಕಾಲುವೆಗಳಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಉಪ ಕಾಲುವೆಗಳ ಆಧುನೀಕರಣ ಅಂದಾಜು ಪಟ್ಟಿ ಬಗ್ಗೆಯೂ 2,800 ಪುಟಗಳ ತನಿಖಾ ವರದಿಯನ್ನು ಸಲ್ಲಿಸಿದೆ.

# ಹಣ, ಚಿನ್ನಾಭರಣಕ್ಕೆ ಆಸೆ; ವೃದ್ಧೆಯನ್ನೇ ಹತ್ಯೆಗೈದ ಮಹಿಳೆ ಅರೆಸ್ಟ್

**ಮೈಸೂರು:** ಹಣ ಮತ್ತು ಚಿನ್ನಾಭರಣಕ್ಕಾಗಿ ಮಹಿಳೆಯೊಬ್ಬಳು ನೆರೆಮನೆಯ ವೃದ್ಧೆಯನ್ನು ತನ್ನ ಮನೆಗೆ ಕರೆಸಿಕೊಂಡು ಹತ್ಯೆಗೈದಿರುವ ಘಟನೆ ಮೈಸೂರಿನ ಜೆ.ಸಿ.ನಗರ ಬಡಾವಣೆಯಲ್ಲಿ ಮಾರ್ಚ್ 5ರಂದು ರಾತ್ರಿ ಸಂಭವಿಸಿದೆ.

ಜೆ.ಸಿ.ನಗರದ 1ನೇ ಮೇನ್, 7ನೇ ಕ್ರಾಸ್ ನಿವಾಸಿ, ಗಂಗಣ್ಣ ಅವರ ಪತ್ನಿ ಸುಲೋಚನಾ (62) ಕೊಲೆಯಾದ ವೃದ್ಧೆ. ಅದೇ ಬಡಾವಣೆಯ ಶಕುಂತಲಾ (45) ಎಂಬ ಮಹಿಳೆ ಮಾ.5ರಂದು ರಾತ್ರಿ ಸುಮಾರು 7 ಗಂಟೆ ಸಮಯದಲ್ಲಿ ದೂರವಾಣಿ ಕರೆ ಮಾಡಿ, ಸುಲೋಚನಾ ಅವರನ್ನು ತಮ್ಮ ಮನೆಗೆ ಕರೆಸಿಕೊಂಡಿದ್ದ ಶಕುಂತಲಾ, ಅವರನ್ನು ಕೊಠಡಿಯಲ್ಲಿ ಕೂಡಿ ಹಾಕಿ, ದಿಂಬಿನಿಂದ ಅದುಮಿ ಉಸಿರುಗಟ್ಟಿಸಿ ಹತ್ಯೆಗೈದಿದ್ದಾಳೆ. ನಂತರ ಸುಲೋಚನಾ ಮೈಮೇಲಿದ್ದ 50 ಗ್ರಾಂ ತೂಕದ ಚಿನ್ನದ ಸರವನ್ನು ತೆಗೆದುಕೊಂಡು ಮೃತದೇಹವನ್ನು ತನ್ನ ಮನೆಯಲ್ಲೇ ಇರಿಸಿ, ಟೆರೇಷಿಯನ್ ಕಾಲೇಜು ಬಳಿ ಹೋಗಿ ಅಲ್ಲಿನ ದುರ್ಗಾ ಜ್ಯುವೆಲ್ಲರಿಯಲ್ಲಿ ಗಿರವಿ ಇಟ್ಟು 1.5 ಲಕ್ಷ ರೂ. ಹಣ ತಂದು ತನ್ನ ಮನೆ ಮಾಲೀಕನಿಗೆ ಬಾಕಿ ಉಳಿಸಿಕೊಂಡಿದ್ದ 36 ಸಾವಿರ ರೂ. ಬಾಡಿಗೆ ಹಣವನ್ನು ತಲುಪಿಸಿದ್ದಾಳೆ.

ಇಷ್ಟೆಲ್ಲಾ ಕೇವಲ ಒಂದೂವರೆ ಗಂಟೆಯೊಳಗೆ ನಡೆದಿದ್ದು, ನಂತರ ಆಕೆಯೇ ಸುಲೋಚನಾ ಅವರ ಮಗ ರವಿಚಂದ್ರನಿಗೆ ಕರೆ ಮಾಡಿ ನಿಮ್ಮ ತಾಯಿ ನಮ್ಮ ಮನೆಗೆ ಬಂದರು. ಮಾತನಾಡುತ್ತಿರುವಾಗಲೇ ಬೆವರಿ, ಕುಸಿದು ಬಿದ್ದರು. ಈಗ ನೋಡಿದರೆ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದಾರೆ ಎಂದು ಹೇಳಿ ಕರೆಸಿಕೊಂಡಿದ್ದಾಳೆ. ಗಾಬರಿಯಿಂದ ರವಿಚಂದ್ರ ಹಾಗೂ ಅವರ ಸಂಬಂಧಿಕರು ತಕ್ಷಣ ಶಕುಂತಲಾ ಅವರ ಮನೆಗೆ ಬಂದು ಸುಲೋಚನಾ ಅವರನ್ನು ಸಮೀಪದ ಖಾಸಗಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಪರೀಕ್ಷಿಸಿದ ವೈದ್ಯರು, ಅವರು ಈಗಾಗಲೇ ಸಾವನ್ನಪ್ಪಿರುವುದಾಗಿ ದೃಢಪಡಿಸಿದರು. ತದನಂತರ ಆಸ್ಪತ್ರೆ ಸಿಬ್ಬಂದಿಗಳು ಈ ವಿಷಯದ ಬಗ್ಗೆ ನಜರ್ ಬಾದ್ ಪೊಲೀಸರಿಗೆ ಡೆತ್‌ಮೆಮೋ ಕಳುಹಿಸಿದ್ದರು. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಪೊಲೀಸರು, ಮೃತ ದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶವಾಗಾರಕ್ಕೆ ಸಾಗಿಸಿ, ಪ್ರಕರಣ ದಾಖಲಿಸಿಕೊಂಡಿದ್ದರು.

ಸುಲೋಚನಾ ಅವರ ಸಾವಿನ ಬಗ್ಗೆ ಅನುಮಾನವಿದ್ದ ಪೊಲೀಸರಿಗೆ ಮೃತದೇಹದ ಮರಣೋತ್ತರ ಪರೀಕ್ಷೆ ಬಳಿಕ ಆಕೆಯದ್ದು ಸಹಜ ಸಾವಲ್ಲ. ಉಸಿರುಗಟ್ಟಿಸಿ ಕೊಲೆ ಮಾಡಲಾಗಿದೆ ಎಂದು ತಿಳಿದುಬಂದಿದೆ. ತನಿಖೆ ಆರಂಭಿಸಿದ ನಜರ್‌ಬಾದ್ ಠಾಣೆ ಇನ್ ಸ್ಪೆಕ್ಟರ್ ಎಂ.ಮಹದೇವಸ್ವಾಮಿ, ಮರುದಿನವೇ ಬೆಳಗ್ಗೆ ಶಕುಂತಲಾ ಮನೆಗೆ ತೆರಳಿ ಮಹಜರು ನಡೆಸಿದ ಬಳಿಕ ಆಕೆಯನ್ನು ಠಾಣೆಗೆ ಕರೆತಂದು ವಿಚಾರಣೆ ನಡೆಸಿದ್ದಾರೆ. ಆರಂಭದಲ್ಲಿ ಅವರು ನನ್ನ ಮನೆಗೆ ಬಂದು ಕುಳಿತುಕೊಂಡು ಮಾತನಾಡುವ ವೇಳೆ ನಿತ್ರಾಣಗೊಂಡರು. ಸ್ವಲ್ಪ ಹೊತ್ತಿನಲ್ಲೇ ಪ್ರಜ್ಞಾಹೀನ ಸ್ಥಿತಿಗೆ ತಲುಪಿದರು. ಆಗ ನಾನು ಅವರಿಗೆ ನೀರು ಕುಡಿಸಿ, ಗಾಳಿ ಬೀಸಿದೆ. ಅವರು ಎಚ್ಚರಗೊಳ್ಳದ ಕಾರಣ ಅವರ ಮನೆಯವರಿಗೆ ವಿಷಯ ತಿಳಿಸಿದೆ ಎಂದು ಹೇಳಿದರು.

ನಂತರ ಆಕೆಯನ್ನು ತೀವ್ರ ವಿಚಾರಣೆಗೊಳಪಡಿಸಿದಾಗ ಮನೆ ಬಾಡಿಗೆ ಬಾಕಿ ಇದ್ದು, ಹಣಕಾಸಿನ ಸಮಸ್ಯೆಯಿದ್ದ ಕಾರಣ ನಾನೇ ಸುಲೋಚನಾ ಅವರನ್ನು ಮನೆಗೆ ಕರೆಸಿಕೊಂಡು, ರೂಮ್ ನಲ್ಲಿ ಕೂಡಿ ಹಾಕಿ, ದಿಂಬಿನಿಂದ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾಗಿ ಶಕುಂತಲಾ ಒಪ್ಪಿಕೊಂಡಳು. ತಕ್ಷಣ ಆಕೆಯನ್ನು ಬಂಧಿಸಿದ ಪೊಲೀಸರು, ಅಂಗಡಿಯಿಂದ ಶಕುಂತಲಾ ಗಿರಿವಿ ಇಟ್ಟಿದ್ದ ಚಿನ್ನದ ಸರವನ್ನು ಪೊಲೀಸರು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಕಾನೂನಿನ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ, ನ್ಯಾಯಾಧೀಶರ ಮುಂದೆ ಹಾಜರುಪಡಿಸಿದಾಗ ಮಾ.6ರಂದು ಸಂಜೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು. ಇನ್ನು ಶಕುಂತಲಾ ತನ್ನ ಪತಿ ಕೆ.ಸಿ.ಬಡಾವಣೆಯ ಹೋಟೆಲ್ ವೊಂದರಲ್ಲಿ ಕುಕ್ ಕೆಲಸ ಮಾಡುತ್ತಿದ್ದು, ಇಬ್ಬರೂ ಪುತ್ರಿಯರೊಂದಿಗೆ ಜೀವನ ಸಾಗಿಸುವುದು ಕಷ್ಟವಾಗಿತ್ತು. ಅದಕ್ಕಾಗಿ ನಾನು ವಿಪರೀತ ಸಾಲ ಮಾಡಿಕೊಂಡಿದ್ದಲ್ಲದೆ, ಬಾಕಿ ಉಳಿಸಿಕೊಂಡಿದ್ದ ಮನೆ ಬಾಡಿಗೆ ಕೊಡುವಂತೆ ಒತ್ತಾಯಿಸುತ್ತಿದ್ದ ಕಾರಣ ನಾನು ನೆರೆ ಮನೆಯವರಾದ ಸುಲೋಚನಾ ಅವರ ಮೈಮೇಲೆ ಆಭರಣ ಇದ್ದುದು ಗೊತ್ತಿದ್ದರಿಂದ ಅವರನ್ನು ಕರೆಸಿಕೊಂಡು ಉಸಿರುಗಟ್ಟಿಸಿ ಕೊಲೆ ಮಾಡಿದೆ ಎಂದು ಆರೋಹಲವು ವರ್ಷಗಳಿಂದ ಸುಲೋಚನಾ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದ ನನ್ನನ್ನು ಅವರು ಸಂಪೂರ್ಣವಾಗಿ ನಂಬಿದ್ದರು. ಈ ಹಿಂದೆಯೂ ಒಮ್ಮೆ 40 ಗ್ರಾಂ ಚಿನ್ನದ ಬಳೆಗಳನ್ನು ಅವರಿಂದ ಪಡೆದು ಮುತ್ತೂಟ್ ಫೈನಾನ್ಸ್ ನಲ್ಲಿ ಗಿರವಿ ಇಟ್ಟು ಹಣ ಪಡೆದಿದ್ದೇನೆ. ಈ ಮತ್ತೆ ಕೇಳಿದರೆ ಅವರು ಬೇಜಾರು ಮಾಡಿಕೊಳ್ಳಬಹುದೆಂದು ಭಾವಿಸಿ ಕೊಲೆ ಮಾಡಲು ನಿರ್ಧರಿಸಿದೆ. ಅಲ್ಲದೆ ಇನ್ನಿತರ ಕಷ್ಟದ ಸಮಯದಲ್ಲೂ ಸುಲೋಚನಾ ಅವರು ಹಣ ನೀಡಿದ್ದರು. ನನ್ನನ್ನು ಸಂಪೂರ್ಣವಾಗಿ ನಂಬಿದ್ದ ಸುಲೋಚನಾ ಅವರನ್ನು ಕೊಲೆ ಮಾಡಿಬಿಟ್ಟೆನಲ್ಲ ಎಂಬ ನೋವು ಕಾಡುತ್ತಿದೆ. ಆದರೆ ಅನಿವಾರ್ಯ ಕಾರಣಗಳಿಂದ ಈ ಕೃತ್ಯವೆಸಬೇಕಾಯಿತು ಎಂದು ಆಕೆ ಪೊಲೀಸರ ಬಳಿ ಹೇಳಿದ್ದಾಳೆ.

ನಾನು ಕೊಲೆ ಮಾಡುವಾಗ ಮನೆಯಲ್ಲಿ ಯಾರೂ ಇರಲಿಲ್ಲ. ಪತಿ ಹೋಟೆಲ್ ಕೆಲಸಕ್ಕೆ ಹೋಗಿದ್ದರು. ನನ್ನಿಬ್ಬರು ಪುತ್ರಿಯರು ನಮ್ಮ ಅಮ್ಮನ ಮನೆಗೆ ಹೋಗಿದ್ದರು. ಅದೇ ಸೂಕ್ತ ಸಮಯ ಎಂದು ನಾನು ಸುಲೋಚನಾ ಅವರನ್ನು ನಯವಾಗಿ ಕರೆಸಿಕೊಂಡು ಹತ್ಯೆಗೈದಿರುವುದಾಗಿಯೂ ಆರೋಪಿ ಶಕುಂತಲಾ ಹೇಳಿಕೊಂಡಿದ್ದಾಳೆ. ಮತ್ತೊಂದೆಡೆ ಸುಲೋಚನಾ ಅವರ ಪತಿ ಗಂಗಣ್ಣ ಅವರು ಮೌಂಟೆಡ್ ಪೊಲೀಸ್ ಘಟಕದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದು, ಅನಾರೋಗ್ಯದ ನಿಮಿತ್ತ ಹಾಸಿಗೆ ಹಿಡಿದಿದ್ದಾರೆ. ಪುತ್ರ ರವಿಚಂದ್ರ ಗುಂಡ್ಲುಪೇಟೆಯಲ್ಲಿ ಸರ್ವೆಯರ್ ಆಗಿ ಕೆಲಸ ಮಾಡುತ್ತಿದ್ದಾರೆ. ಸುಲೋಚನಾ ಅವರು ಹತ್ಯೆಯಾಗಿರುವುದೂ ಅವರ ಪತಿ ಗಂಗಣ್ಣ ಅವರಿಗೆ ತಿಳಿದಿಲ್ಲ.

# ಪರಪ್ಪನ ಅಗ್ರಹಾರ ಜೈಲಿನಲ್ಲಿ ಡ್ರಗ್ಸ್ ಪತ್ತೆಗೆ ವಿಶೇಷ ಶ್ವಾನದಳ ಸ್ಥಾಪನೆ

**ಬೆಂಗಳೂರು:** ಪರಪ್ಪನ ಅಗ್ರಹಾರ ಜೈಲಿನಲ್ಲಿ ಅವ್ಯಾಹತವಾಗಿ ಸರಬರಾಜು ಆಗುವ ಮಾದಕ ವಸ್ತುಗಳನ್ನು ಪತ್ತೆ ಹಚ್ಚಲು ಮೊದಲ ಬಾರಿಗೆ ವಿಶೇಷ ಶ್ವಾನದಳ ಸ್ಥಾಪಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಮಾಹಿತಿ ನೀಡಿದ್ದಾರೆ. ಜೈಲಿನಲ್ಲಿ ಕಾನೂನುಬಾಹಿರ ಚಟುವಟಿಕೆ ನಡೆಯುವುದು ಹೊಸದೇನಲ್ಲ. ಒಂದಲ್ಲ ಒಂದು ರೀತಿ ನಿರಂತರ ಅಕ್ರಮ ಚಟುವಟಿಕೆ ನಡೆಯುತ್ತಿದೆ. ಜೈಲು ವಾರ್ಡನ್‌ಗಳು ನಿರಂತರ ತಪಾಸಣೆ ನಡೆಸಿದರೂ ಅನಿರೀಕ್ಷಿತವಾಗಿ ಡ್ರಗ್ಸ್ ಸರಬರಾಜು ಆಗುತ್ತಿದೆ. ಸಿಬ್ಬಂದಿಗಳ ವಿರುದ್ಧ ಕರ್ತವ್ಯಲೋಪದ ಬಗ್ಗೆ ದೂರುಗಳು ಬಂದಿದ್ದರಿಂದ ಬಿಗಿ ತಪಾಸಣೆ ನಡೆಸುವ ಸಂಬಂಧ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆ (ಕೆಎಸ್‌ಐಎಫ್) ಸಿಬ್ಬಂದಿಯನ್ನ ನಿಯೋಜಿಸಲಾಗಿದೆ. ಅದೇ ರೀತಿ ಜೈಲಿನಲ್ಲಿ ಮಾದಕ ವಸ್ತು ಪತ್ತೆ ಹಚ್ಚಲು ಬೆಲ್ಜಿಯಂ ತಳಿಯ ಎರಡು ಶ್ವಾನ ಖರೀದಿಸಿ ತರಬೇತಿ ನೀಡಿ ಶ್ವಾನದಳ ಸ್ಥಾಪಿಸಲಾಗಿದೆ ಎಂದು ವಿಧಾನ ಪರಿಷತ್ತಿನಲ್ಲಿ ಬಿಜೆಪಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಕಾರಾಗೃಹದಲ್ಲಿ ಬಂದಿಗಳು ಮೊಬೈಲ್ ಹಾಗೂ ನಿಷೇಧಿತ ವಸ್ತುಗಳನ್ನು ಬಳಸದಂತೆ ತಡೆಯಲು ರಾಜ್ಯದ ಕೇಂದ್ರ ಕಾರಾಗೃಹಗಳಾದ ಬೆಂಗಳೂರು, ಮೈಸೂರು, ಬೆಳಗಾವಿ, ಬಳ್ಳಾರಿ, ಧಾರವಾಡ, ವಿಜಯಪುರ, ಕಲಬುರ್ಗಿ, ಶಿವಮೊಗ್ಗ ಮತ್ತು ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ಈಗಾಗಲೇ ಕೆಎಸ್‌ಎಫ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದರು.

ಬೆಂಗಳೂರು ಸೆಂಟ್ರಲ್ ಜೈಲಿನಲ್ಲಿ ಅತ್ಯಾಧುನಿಕ 280 ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಕೇಂದ್ರದ ಕಾರಾಗೃಹ ಆಧುನೀಕರಣ ಯೋಜನೆಯಡಿ ಭದ್ರತೆ ಹಾಗೂ ತಪಾಸಣೆಗಾಗಿ 9 ಬ್ಯಾಗೇಜ್ ಸ್ಕ್ಯಾನರ್, 350 ವಾಕಿಟಾಕಿಗಳನ್ನು ಖರೀದಿಸಲಾಗಿದೆ. ಮೊಬೈಲ್ ಫೋನ್ ಬಳಕೆ ತಡೆಯಲು ಹೈರೆಸ್ಯೂಲೇಷನ್ ಹೊಂದಿರುವ 3 ಟವರ್ ಹಾಕಲಾಗಿದೆ. ಬೇರೆ ಕಾರಾಗೃಹಗಳಲ್ಲಿ 66 ಮೊಬೈಲ್ ಜಾಮರ್‌ಗಳನ್ನ ದುರಸ್ತಿ ಹಾಗೂ 2ಜಿಯಿಂದ 4/5 ಜಿಗೆ ಮೇಲ್ದರ್ಜೇಗೇರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಜೈಲಿನಲ್ಲಿ ನಿಷೇಧಿತ ವಸ್ತುಗಳನ್ನು ಇಟ್ಟುಕೊಂಡಿದ್ದವರ ವಿರುದ್ಧ 248 ಪ್ರಕರಣಗಳನ್ನು ಸಂಬಂಧಿಸಿದ ಪೊಲೀಸ್ ಠಾಣೆಗಳಲ್ಲಿ ದಾಖಲಿಸಲಾಗಿದೆ. ಈ ಪೈಕಿ 9 ಪ್ರಕರಣಗಳಿಂದ 22 ಮಂದಿ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಾಗಿದೆ ಸಚಿವರು ತಿಳಿಸಿದರು.

# 'ಅಭ್ಯರ್ಥಿಯ ಚುನಾವಣಾ ಪ್ರಮಾಣಪತ್ರದಲ್ಲಿನ ದೋಷಗಳ ಕುರಿತು ದೂರು ದಾಖಲಿಸಲು ಖಾಸಗಿ ವ್ಯಕ್ತಿಗೆ ಅವಕಾಶವಿಲ್ಲ'

**ಬೆಂಗಳೂರು:** ಚುನಾವಣಾ ಸಂದರ್ಭದಲ್ಲಿ ಸಲ್ಲಿಕೆಯಾಗುವ ಪ್ರಮಾಣಪತ್ರದಲ್ಲಿನ ದೋಷಗಳ ಕುರಿತಂತೆ ಪ್ರಜಾಪ್ರತಿನಿಧಿ ಕಾಯಿದೆಯಡಿ ದೂರು ಸಲ್ಲಿಸುವ ಹಕ್ಕು ಚುನಾವಣಾ ಆಯೋಗಕ್ಕೆ ಮಾತ್ರ ಇರಲಿದೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಮಹದೇವಪುರ ವಿಧಾನಸಭಾ ಕ್ಷೇತ್ರದ ಶಾಸಕಿ ಮಂಜುಳಾ ಲಿಂಬಾವಳಿ ಮತ್ತು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಶೈಲೇಂದ್ರ ಬೆಳ್ದಾಳೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈ ಸ್ಪಷ್ಟನೆ ನೀಡಿದ್ದು, ಅರ್ಜಿದಾರರ ವಿರುದ್ಧದ ಪ್ರಕರಣ ರದ್ದುಪಡಿಸಿ ಆದೇಶಿಸಿದೆ. ಪ್ರಕರಣ ಸಂಬಂಧ ದಾಖಲೆಗಳು ಹಾಗೂ ವಾದ–ಪ್ರತಿವಾದ ಆಲಿಸಿದ ನ್ಯಾಯಪೀಠ, ಜನಪ್ರತಿನಿಧಿ ಕಾಯಿದೆಯ ಸೆಕ್ಷನ್ 125ಎ ಅಡಿಯಲ್ಲಿ ಚುನಾವಣಾ ಪ್ರಮಾಣ ಪತ್ರದಲ್ಲಿನ ದೋಷಗಳನ್ನು ಪ್ರಶ್ನಿಸಲು ಚುನಾವಣಾ ಆಯೋಗವೇ ದೂರು ದಾಖಲಿಸಬೇಕು. ಖಾಸಗಿ ವ್ಯಕ್ತಿಗಳು ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸುವುದಕ್ಕೆ ಅವಕಾಶವಿಲ್ಲ ಎಂದು ಪೀಠ ತನ್ನ ಆದೇಶದಲ್ಲಿ ತಿಳಿಸಿ, ಅರ್ಜಿದಾರರ ವಿರುದ್ಧದ ವಿಚಾರಣೆಯನ್ನು ರದ್ದುಗೊಳಿಸಿ ಆದೇಶಿಸಿದೆ.

ಮೊದಲ ಪುಟದಿಂದ

## ಸದನದಲ್ಲಿ ಪ್ರತಿಧ್ವನಿಸಿದ ಸಾಲ

ಈ ವೇಳೆ ಸಿದ್ದಾರಮಯ್ಯ ಅವರ ಬೆನ್ನಿಗೆ ಆಡಳಿತ ಪಕ್ಷದ ಸದಸ್ಯರು ನಿಂತರೇ, ಅಶೋಕ್ ಅವರ ಬೆನ್ನಿಗೆ ಪ್ರತಿ ಪಕ್ಷಗಳ ಸದಸ್ಯರು ನಿಂತಾಗ ಎರಡೂ ಸಾಲಿನ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

ಈ ನಡುವೆ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರನ್ನು ಸುಮ್ಮನಿರುವಂತೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ತಾಕೀತು ಮಾಡಿದರಾದರೂ ಕೆಲ ಸಮಯ ವಾಕ್ಸಮರ ನಡೆದೇ ಇತ್ತು. ಮುಂದುವರಿದ ಭಾಗವಾಗಿ ಮಾತನಾಡುತ್ತಾ ಅಶೋಕ್, ಕೇಂದ್ರಸರ್ಕಾರದ ಸಾಲದ ಬಗ್ಗೆ ನೀವು ಪ್ರಸ್ತಾಪ ಮಾಡಬೇಕಾದರೆ ನಿಮ್ಮ ಸಂಸದರಿಗೆ ಲೋಕಸಭೆಯಲ್ಲಿಮಾತನಾಡಲು ಸೂಚಿಸಿ. ಇಲ್ಲಿ ನಾವು ಕೇಳುತ್ತಿರುವುದು ರಾಜ್ಯದ ಸರ್ಕಾರದ ಸಾಲದ ಬಗ್ಗೆ ಅಷ್ಟೇ ಅದಕೆ ಉತ್ತರಿಸಿ ಎಂದು ಹೇಳಿದರು.

ಈ ಬಾರಿ ಬಜೆಟ್ ಅನ್ನು ಎಚ್ಚರಿಕೆಯಿಂದ ಮಂಡನೆ ಮಾಡಿದ್ದೀರಿ. ಬಜೆಟ್‌ನಲ್ಲಿ ಯಾವುದೇ ತೆರಿಗೆಯನ್ನು ಹೆಚ್ಚಿಸದೇ ಶಹಬ್ಬಾಷ್ ಗಿರಿ ಪಡೆದು, ನಂತರ ಒಂದೊಂದಾಗಿ ತೆರಿಗೆ ಹೆಚ್ಚಳ ಮಾಡುತ್ತಾ ಅಲ್ಲಿಂದ ಸುಲಿಗೆ ಮಾಡುವುದು ನಿಮ್ಮ ಉದ್ದೇಶವಾಗಿದೆ. ಹಾಲು, ಪೆಟ್ರೋಲ್, ಎಣ್ಣೆ, ಕುಡಿಯುವ ನೀರು, ವಿದ್ಯುತ್ ಹೀಗೆ ಎಲ್ಲಾ ದಿನಬಳಕೆ ವಸ್ತುಗಳ ಮೇಲೆ ತೆರಿಗೆ ಹೇರಿ ಖಜಾನೆ ತುಂಬಿಸಿಕೊಳ್ಳುವುದು ತಮ್ಮ ಉದ್ದೇಶವಾಗಿದೆ ಎಂದು ಹೇಳಿದರು.

## ಸರ್ಕಾರಕ್ಕೆ ವಿಪಕ್ಷ ತರಾಟೆ

ಇದಕ್ಕೂ ಒಪ್ಪದ ಬಿಜೆಪಿ ಸದಸ್ಯರು, ಏನೇ ಆಗಲಿ ಯಾರೋ ಇಬ್ಬರು ಇಲ್ಲಿ ಇರಲೇ ಬೇಕಿತ್ತು. ಇಲ್ಲವೆಂದರೆ, ನಾವು ಹೇಳುವ ಅಂಶಗಳು ಸರ್ಕಾರಕ್ಕೆ ಹೇಗೆ ತಲುಪುತ್ತದೆ ಎಂದು ಕೇಳಿದರು. ಆಗ ಸಭಾಪತಿ ಯು.ಟಿ.ಖಾದರ್, ಮುಖ್ಯಮಂತ್ರಿ ಹಾಜರಾಗುತ್ತಿದ್ದಾರೆ ಎಂದು ವಿಷಯ ತಿಳಿಗೊಳಿಸಿದರು.

## ಔಷಧ ಮಾರಾಟಕ್ಕೆ ಅಂಕುಶ

ಮಾಡಿದ್ದೇವೆ. ಔಷಧಿಗಳು ಕೊರತೆಯಾದರೆ ಅವುಗಳನ್ನು ಬೇರೆ ಜಿಲ್ಲೆಯಿಂದ ಸರಬರಾಜು ಮಾಡುವ ವ್ಯವಸ್ಥೆಯನ್ನು ಮಾಡಿದ್ದೇವೆ ಎಂದು ಅವರು ಹೇಳಿದರು.

ಕೆಲವೊಂದು ಔಷಧಿಗಳ ಕೊರತೆಗೆ ಕಾರಣ ಟೆಂಡರ್‌ಗಳಲ್ಲಿ ಯಾರೂ ಭಾಗವಹಿಸದೇ ಇರುವುದು. ಈ ಔಷಧಿಗಳ ಮೌಲ್ಯ ಮತ್ತು ಪ್ರಮಾಣ ಕಡಿಮೆ ಇರುವುದರಿಂದ ಹಲವಾರು ಬಾರಿ ಟೆಂಡರ್ ಆಹ್ವಾನಿಸಿದರೂ ಯಾರೂ ಸ್ಪಂದಿಸಿಲ್ಲ. ಆದರೂ ಸರ್ಕಾರ ನಿಯಮಾನುಸಾರ ಔಷಧಿಗಳ ಖರೀದಿ ಮಾಡುತ್ತಿದೆ ಎಂದು ಅವರು ಹೇಳಿದರು.

ಔಷಧ ಅಂಗಡಿಗಳಲ್ಲಿ ಔಷಧಗಳನ್ನು ಪಡೆದು ಅದನ್ನು ಪರಿಶೀಲಿಸುವ ಕೆಲಸವನ್ನು ನಡೆಸಿದ್ದೇವೆ. ಕೇಂದ್ರಕ್ಕೂ ನಕಲಿ ಔಷಧ ಉತ್ಪಾದಕರ ಬಗ್ಗೆಯೂ ಪತ್ರ ಬರೆದು ಮಾಹಿತಿ ನೀಡಿದ್ದೇವೆ. ರಾಜ್ಯದಲ್ಲೂ ಔಷಧ ನಿಯಂತ್ರಣ ಇಲಾಖೆ ನಕಲಿ ಔಷಧ ತಯಾರಕರು ಹಾಗೂ ಮಾರಾಟಗಾರರ ವಿರುದ್ಧ ಕ್ರಮಗಳನ್ನು ಕೈಗೊಂಡಿದೆ. ಜತೆಗೆ ಪ್ರಕರಣಗಳನ್ನು ದಾಖಲಿಸಿದೆ ಎಂದು ಅವರು ಹೇಳಿದರು.

104 ಹುದ್ದೆಗಳು ಖಾಲಿ ಇವೆ. ಈ ಪೈಕಿ 83 ಔಷಧ ಪರಿವೀಕ್ಷಕರ ಹುದ್ದೆಗಳ ಭರ್ತಿಗೆ 2018 ರಲ್ಲಿ ಲೋಕಸೇವಾ ಆಯೋಗವು ಅಧಿಸೂಚನೆ ಹೊರಡಿಸಿ 67 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ 23–06–2021 ರಂದು ಇಲಾಖೆಗೆ ಆಯ್ಕೆ ಪಟ್ಟಿಯನ್ನು ಕಳುಹಿಸಿತ್ತು. ಆದರೆ ಸದರಿ ಆಯ್ಕೆ ಪಟ್ಟಿಯನ್ನು ವಿವಿಧ ನ್ಯಾಯಾಲಯಗಳಲ್ಲಿ ಪ್ರಶ್ನಿಸಿದ್ದು, ಪ್ರಸ್ತುತ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಬಾಕಿಯಿದೆ. ಈ ತಿಂಗಳ 20 ರಂದು ಅಂತಿಮ ವಿಚಾರಣೆ ನಡೆಯಲಿದ್ದು, ನ್ಯಾಯಾಲಯದ ತೀರ್ಮಾನದಂತೆ ಸರ್ಕಾರ ಮುಂದಿನ ಕ್ರಮ ಕೈಗೊಳ್ಳುತ್ತದೆ ಎಂದರು. ರಾಜ್ಯದಲ್ಲಿ ಔಷಧ ಪರಿವೀಕ್ಷಕರ ಹುದ್ದೆ ಖಾಲಿ ಇದ್ದರೂ ಎಡಿಸಿಗಳಿಗೆ ಜವಾಬ್ದಾರಿ ನೀಡಿ ಔಷಧಿ ಪರಿವೀಕ್ಷಕರ ಕೆಲಸಗಳನ್ನು ನಿರ್ವಹಿಸಲು ಸೂಚನೆ ನೀಡಿದ್ದೇವೆ ಎಂದು ಅವರು ಹೇಳಿದರು. ರಾಜ್ಯದ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಇಲ್ಲ. ಅಗತ್ಯ ಇರುವ ಔಷಧವನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

## ತ್ರಿಭಾಷಾ ಸೂತ್ರಕ್ಕೆ ಬೆಂಬಲ

ತಮಿಳುನಾಡು ಸೇರಿದಂತೆ ದಕ್ಷಿಣ ಭಾರತ ರಾಜ್ಯಗಳು ವಿರೋಧಿಸುತ್ತಿವೆ. ಹೊಸ ಶಿಕ್ಷಣ ನೀತಿಯನ್ನು ಸಮರ್ಥಿಸಿಕೊಂಡಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು, ತಮಿಳುನಾಡಿನ ಆಡಳಿತರೂಢ ಡಿಎಂಕೆ ಪಕ್ಷವು ರಾಜಕೀಯ ಲಾಭಕ್ಕಾಗಿ ಭಾಷೆ ವಿಷಯವನ್ನು ಬಳಸಿಕೊಳ್ಳುತ್ತಿದೆ ಎಂದು ದೂರಿದ್ದಾರೆ.

ಸುಧಾಮೂರ್ತಿ ಅವರೊಂದಿಗಿನ ಮಾತನಾಡಿದ್ದ, ವಿಷಯವನ್ನು ಅವರು ಸದನದಲ್ಲಿ ಉಲ್ಲೇಖಿಸಿದ್ದಾರೆ. ಇಲ್ಲಿ ಯಾರೂ ಸಹ ಯಾರ ಮೇಲೆಯೂ ಏನನ್ನೂ ಹೇರುತ್ತಿಲ್ಲ ಎಂದಿದ್ದಾರೆ. ಇನ್ನು ಸುಧಾಮೂರ್ತಿ ಅವರಿಗೆ ಎಷ್ಟು ಭಾಷೆಗಳು ಬರುತ್ತವೆ ಎಂದು ನಾನು ಕೇಳಿದೆ. ಅದಕ್ಕೆ ಅವರು ನಾನು ಹುಟ್ಟಿದಾಗಿನಿಂದ ಕನ್ನಡತಿ, ವೃತ್ತಿಯಿಂದ ಇಂಗ್ಲಿಷ್ ಕಲಿತೆ, ಅಭ್ಯಾಸದಿಂದಾಗಿ ಹಿಂದಿ, ಒಡಿಯಾ, ತೆಲುಗು, ಮರಾಠಿ ಹಾಗೂ ಸಂಸ್ಕೃತ ಭಾಷೆಗಳನ್ನು ಕಲಿತಿದ್ದೇನೆ ಅಂತ ಹೇಳಿದ್ದಾರೆ ಎಂದು ಧರ್ಮೇಂದ್ರ ಪ್ರಧಾನ್ ಅವರು ಹೇಳಿದ್ದಾರೆ.

ಅಲ್ಲದೇ ಇದರಲ್ಲಿ ತಪ್ಪೇನಿದೆ. ಸುಧಾಮೂರ್ತಿ ಅವರ ಮೇಲೆ ಈ ಭಾಷೆಗಳನ್ನು ಕಲಿಯಿರಿ ಎಂದು ಯಾರು ಒತ್ತಡ ಹೇರಿದ್ದಾರೆ. ಇಲ್ಲಿ ಯಾರೂ ಯಾರ ಮೇಲೆ ಸಹ ಯಾವುದೇ ಹೇರಿಕೆಯನ್ನು ಮಾಡುತ್ತಿಲ್ಲ. ಪ್ರಜಾಪ್ರಭುತ್ವ ಸಮಾಜದಲ್ಲಿ ನೀವು ಬಹುಭಾಷಿಕರಾಗಿರಬೇಕು ಎಂದಿದ್ದಾರೆ. ಕರ್ನಾಟಕವೂ ಸೇರಿದಂತೆ ದಕ್ಷಿಣ ಭಾರತದಲ್ಲಿ ತ್ರಿಭಾಷಾ ಸೂತ್ರದ ಬಗ್ಗೆ ಭಾರೀ ಚರ್ಚೆಗಳು ನಡೆದಿವೆ. ಹಿಂದಿ ಹೇರಿಕೆಯನ್ನು ನಿಲ್ಲಿಸುವಂತೆ ತಮಿಳುನಾಡು ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ಆಗ್ರಹಿಸಿವೆ.

## ಬೋಧಕೇತರ ಹುದ್ದೆ ಭರ್ತಿ

ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಒಟ್ಟು 2 ಸಾವಿರ ಹುದ್ದೆಗಳ ಭರ್ತಿಗೆ ಮುಖ್ಯಮಂತ್ರಿಗಳು ಅವಕಾಶ ಕಲ್ಪಿಸಿದ್ದಾರೆ ಎಂದರು.

ಕೊಪ್ಪಳದಲ್ಲಿ ಹೊಸ ಸರ್ಕಾರಿ ಎಂಜಿನಿಯರಿಂಗ್ ಕಾಲೇಜನ್ನು ಆರಂಭಿಸುವ ಪ್ರಸ್ತಾಪ ಇಲ್ಲ. ಪ್ರಸ್ತುತ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ತಳಕಲ್ ಗ್ರಾಮ ಹಾಗೂ ಗಂಗಾವತಿಯಲ್ಲಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ತಳಕಲ್‌ನಲ್ಲಿ ವಿಟಿಯುನೊಂದಿಗೆ ಒಪ್ಪಂದ ಮಾಡಿಕೊಂಡು ದೊಡ್ಡಮಟ್ಟದ ಕೌಶಲ್ಯಾಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಒಟ್ಟು 18 ಹೊಸ ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳು ಮಂಜೂರಾಗಿರುತ್ತವೆ. ಇದರಲ್ಲಿ 16 ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳ ಕಟ್ಟಡ ಕಾಮಗಾರಿ ಪೂರ್ಣಗೊಂಡು ಶೈಕ್ಷಣಿಕ ಚಟುವಟಿಕೆ ಪ್ರಾರಂಭಗೊಂಡಿದೆ. ಅರಸೀಕೆರೆ ಮತ್ತು ದೇವದುರ್ಗ ಎಂಜಿನಿಯರಿಂಗ್ ಕಾಲೇಜುಗಳ ಕಟ್ಟಡ ನಿರ್ಮಾಣ ಪ್ರಗತಿಯಲ್ಲಿದೆ ಎಂದರು.

ಹೊಸ ಎಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಸರ್ಕಾರಿ ಕಾಲೇಜುಗಳನ್ನು ಸ್ಥಾಪಿಸಲು 2024ರ ಜುಲೈನಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯ ವರದಿಯನ್ನು ನೋಡಿಕೊಂಡು ಹೊಸ ಎಂಜಿನಿಯರಿಂಗ್ ಕಾಲೇಜುಗಳ ಆರಂಭದ ಬಗ್ಗೆ ತೀರ್ಮಾನ ಮಾಡುತ್ತೇನೆ ಎಂದು ಅವರು ಹೇಳಿದರು.

## ನೇಮಕಾತಿಗೆ ತಡೆ

ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ 158 ಸಿವಿಲ್ ನ್ಯಾಯಾಧೀಶರ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಆನ್ ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲು 10.02.2025 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ. ಊಅಖಃ/ಅಎಖ–1/2024 ಮತ್ತು ಅದರ ಮೇಲಿನ ಮುಂದಿನ ಕ್ರಮಗಳನ್ನು ಭಾರತದ ಗೌರವಾನ್ವಿತ ಸುಪ್ರೀಂ ಕೋರ್ಟ್ ರಿಟ್ ಅರ್ಜಿ (ಸಿವಿಲ್) ಸಂಖ್ಯೆ 1022/1989 ರಲ್ಲಿನ ಖಂ ಸಂಖ್ಯೆ 72900/2021, 73015/2021, 40695/2021, 50269/2022, 201893/2022, 93974/2019 (ಅಖಿಲ ಭಾರತ ನ್ಯಾಯಾಧೀಶರ ಸಂಘ ಮತ್ತು ಇತರರು ಗಿ. ಭಾರತ ಸರ್ಕಾರ ಮತ್ತು ಇತರರು) ನಲ್ಲಿ ತೀರ್ಪು ನೀಡುವವರೆಗೆ ತಡೆಹಿಡಿಯಲಾಗಿದೆ ಎಂದು ಈ ಮೂಲಕ ಅಧಿಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಉಚ್ಚ ನ್ಯಾಯಾಲಯವು ಅಗತ್ಯ ಸಿವಿಲ್ ನ್ಯಾಯಾಧೀಶರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನೇಮಕ ಅಧಿಸೂಚನೆ ಬಿಡುಗಡೆ ಮಾಡಿತ್ತು. ಒಟ್ಟು 158 ಸಿವಿಲ್ ಜಡ್ಜ್ ಹುದ್ದೆಗಳಿಗೆ ಅರ್ಹ ಮತ್ತು ಆಸಕ್ತರಿಂದ ಅರ್ಜಿ ಆಹ್ವಾನಿಸಿ ಫೆಬ್ರವರಿ 10 ರಂದು ಅಧಿಸೂಚನೆ ಹೊರಡಿಸಿತ್ತು. ಮಾರ್ಚ್ 12ಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿತ್ತು.

## ಕರೆಂಟ್ ಶಾಕ್; ಬಲಿ

ಘಟನೆ ಬೆನ್ನಲ್ಲೆ ಮೈಸೂರು ರಸ್ತೆ ಎರಡೂ ಕಡೆ ಸಂಪೂರ್ಣ ಬಂದ್ ಆಗಿದ್ದು, ನ್ಯಾಯ ಬೇಕು ಎಂದು ಘೋಷಣೆ ಕೂಗಿ ಸ್ಥಳೀಯರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಹಾಗೆಯೇ ಸಚಿವ ಜಮೀರ್ ಅಹ್ಮದ್ ಖಾನ್ ಸ್ಥಳಕ್ಕೆ ಆಗಮಿಸುವಂತೆ ಆಗ್ರಹಿಸಿದರು.

ಸ್ಥಳಕ್ಕೆ ಸಚಿವ ಜಮೀರ್ ಅಹ್ಮದ್ ಖಾನ್ ಭೇಟಿ ನೀಡಿದ್ದು ಈ ಮಧ್ಯೆ ಮೃತ ಮಹಿಳೆ ಸೆಲ್ವಿ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ವಿತರಿಸಿದ್ದು, ನಂತರ ಮಾತನಾಡಿದ ಅವರು, ಅಕ್ರಮವಾಗಿ ಮೂರ್ನಾಲ್ಕು ಅಂತಸ್ತು ಮನೆಕಟ್ಟಿ ನೀರು ಮೇಲೆ ಹತ್ತದ ಕಾರಣ ಅಕ್ರಮವಾಗಿ ಮೋಟಾರಗಳನ್ನು ಬಳಸಿ ವಿದ್ಯುತ್ ಕಂಬದಿಂದ ಮೋಟಾರುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿ ನೀರು ಪಡೆದುಕೊಳ್ಳುತ್ತಿದ್ದಾರೆ ಎಂದು ಅವರು ಹೇಳಿದರು.

## ಬೆಲೆಯ ಪಟ್ಟಿ ಕಡ್ಡಾಯ

ಆಹಾರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಡುಗೆ ಎಣ್ಣೆ, ಗೋಡಂಬಿ, ಅಕ್ಕಿ, ಬೇಳೆಕಾಳುಗಳು, ಮಸಾಲಾ, ಪನೀರ್ ಮತ್ತು ಡೈರಿ ಉತ್ಪನ್ನಗಳಂತಹ ಬ್ರಾಂಡ್ ಕಚ್ಚಾ ವಸ್ತುಗಳ ಬಳಕೆಯನ್ನು ರೈಲ್ವೆ ಕಡ್ಡಾಯಗೊಳಿಸಿದೆ ಎಂದಿದ್ದಾರೆ.

ನೈರ್ಮಲ್ಯವನ್ನು ಕಾಪಾಡಿಕೊಳ್ಳಲು, ಸ್ವಚ್ಛತೆ ಮತ್ತು ನಿರ್ವಹಣೆಯನ್ನು ಮೇಲ್ವಿಚಾರಣೆ ಮಾಡಲು ಅಡುಗೆಮನೆಗಳಲ್ಲಿ ಆಹಾರ ಸುರಕ್ಷತಾ ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಆನ್–ಬೋರ್ಡ್ ಖಖಅಖಿಅ ಮೇಲ್ವಿಚಾರಕರು ರೈಲುಗಳಲ್ಲಿ ಅಡುಗೆ ಸೇವೆಗಳನ್ನು ಮೇಲ್ವಿಚಾರಣೆ ಮಾಡುತ್ತಾರೆ. ಆಹಾರ ಪ್ಯಾಕೆಟ್‌ಗಳಲ್ಲಿನ ಕ್ಯೂಆರ್ ಕೋಡ್‌ಗಳು ಈಗ ಅಡುಗೆಮನೆಯ ಹೆಸರು ಮತ್ತು ಪ್ಯಾಕೇಜಿಂಗ್ ದಿನಾಂಕದಂತಹ ಪ್ರಮುಖ ವಿವರಗಳನ್ನು ಪ್ರದರ್ಶಿಸುತ್ತವೆ. ಇದು ಪ್ರಯಾಣಿಕರು ತಮ್ಮ ಊಟವನ್ನು ಪರಿಶೀಲಿಸಲು ಅನುವು ಮಾಡಿಕೊಡುತ್ತದೆ ಎಂದಿದ್ದಾರೆ.

ಕಾರ್ಗಿಲ್ ರೈಲು ಸಂಪರ್ಕ:

ಕಾರ್ಗಿಲ್ ಇಲ್ಲಿಯವರೆಗೆ ರೈಲ್ವೆ ಸಂಪರ್ಕದಿಂದ ಹೊರಗುಳಿದಿದೆ. ಕಾರ್ಗಿಲ್‌ಗೆ ರೈಲ್ವೆ ಹಳಿಗಳನ್ನು ಹಾಕಲು ಸರ್ಕಾರ ಪ್ರಯತ್ನಗಳನ್ನು ಮಾಡುತ್ತಿದೆ, ಇದು ಭಾರತಕ್ಕೆ ಉನ್ನತ ಪ್ರದೇಶದಲ್ಲಿ ಕಾರ್ಯತಂತ್ರದ ಪ್ರಯೋಜನವನ್ನು ನೀಡುತ್ತದೆ ಎಂದು ಬಿಲಾಸ್ಪುರ್–ಮನಾಲಿ–ಲೇಹ್ ರೈಲ್ವೆ ಮಾರ್ಗದ ಸಮೀಕ್ಷೆಯ ಕುರಿತ ಪ್ರಶ್ನೆಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಉತ್ತರಿಸಿದರು. ಕಾರ್ಗಿಲ್‌ಗೆ ಸಂಪರ್ಕವನ್ನು ಒದಗಿಸುವ ಹೊಸ ಬಿಲಾಸ್ಪುರ್–ಮನಾಲಿ–ಲೇಹ್ ರೈಲ್ವೆ ಮಾರ್ಗದ ನಿರೀಕ್ಷಿತ ವೆಚ್ಚ 1,31,000 ಕೋಟಿ ರೂ. ಎಂದು ಅವರು ತಿಳಿಸಿದ್ದಾರೆ.

ಕಾಶ್ಮೀರದ ಗಂಡೇರ್‌ಬಲ್ ಅನ್ನು ಕಾರ್ಗಿಲ್‌ನೊಂದಿಗೆ ಸಂಪರ್ಕಿಸಲು ಸಮೀಕ್ಷೆ ನಡೆಸಲು ಸರ್ಕಾರ ಯಾವುದೇ ಯೋಜನೆಯನ್ನು ಹೊಂದಿದೆಯೇ ಎಂಬ ಬಗ್ಗೆ ಲೋಕಸಭೆಯಲ್ಲಿ ಕೇಳಲಾದ ಪ್ರಶ್ನೆಗೆ ಲಿಖಿತ ಉತ್ತರದಲ್ಲಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೊಸ ಬಿಲಾಸ್ಪುರ್–ಮನಾಲಿ–ಲೇಹ್ ಮಾರ್ಗದ ವಿವರವಾದ ಯೋಜನಾ ವರದಿಯನ್ನು ಸಿದ್ಧಪಡಿಸಲಾಗಿದೆ ಎಂದು ಹೇಳಿದರು.

## ಘಟಕ ತೆರವಿಗೆ ಆಗ್ರಹ

ಪರಿಣಾಮ ಬೀರಿದೆ. ಇದರಿಂದ ಸುತ್ತಮುತ್ತಲ ಗ್ರಾಮದ ನಿವಾಸಿಗಳು ನಿರಂತರ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಈಗಾಗಲೇ ಹೊರಡಿಸಿರುವ ಮಾರ್ಗಸೂಚಿಗಳಲ್ಲಿ ಯಾವುದನ್ನೂ ಪಾಲಿಸಿಲ್ಲ ಎಂದು ಸಮಸ್ಯೆಗಳ ಬಗ್ಗೆ ವಿವರಿಸಿದರು. ಹಾಗೆಯೇ ಈ ಪ್ರದೇಶದ ಬಳಿಯೇ ಕಾವೇರಿ ನೀರಾವರಿ ನಿಗಮಕ್ಕೆ ಸೇರಿದ ಜಾಗವಿದ್ದು, ಇಲ್ಲಿಯೂ ಅವೈಜ್ಞಾನಿಕವಾಗಿ ತ್ಯಾಜ್ಯವನ್ನು ಸುಡುವುದು ಹೆಚ್ಚಾಗಿದೆ. ಇದರಿಂದ ಹೊರ ಹೊಮ್ಮುತ್ತಿರುವ ಹೊಗೆ ಹಾಗೂ ವಾಸನೆಯಿಂದ ಜನರಿಗೆ ತೊಂದರೆಯಾಗಿದೆ. ಈ ಬಗ್ಗೆ ಜನರು ಪ್ರತಿಭಟನೆ ನಡೆಸಿ, ಹಿರಿಯ ಅಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದರೂ ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗುತ್ತಿದೆ. ಈ ಅವೈಜ್ಞಾನಿಕ ಘಟಕಗಳನ್ನು ಕೂಡಲೇ ತೆರವುಗೊಳಿಸಬೇಕು. ನಮ್ಮ ಕ್ಷೇತ್ರ ವ್ಯಾಪ್ತಿಯ ಸಾವಿರಾರು ಜನರ ಆರೋಗ್ಯ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸಂಸದ ಯದುವೀರ್ ಸಂಸತ್ ಅಧಿವೇಶನದಲ್ಲಿ ಆಗ್ರಹಿಸಿದ್ದಾರೆ.

## ಕಡೆ ದಾಳಿ, ಪರಿಶೀಲನೆ

ರನ್ಯಾರಾವ್ ಮತ್ತು ಪತಿ ಜತಿನ್ ಗೆ ಸೇರಿದ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಎನ್ನಲಾಗಿದೆ.ಬೆಂಗಳೂರಿನ ಕೋರಮಂಗಲ, ಇಂದಿರಾನಗರ ಸೇರಿದಂತೆ 8 ಕಡೆಗಳಲ್ಲಿ ಇಡಿ ಅಧಿಕಾರಿಗಳು ದಾಳಿ ನಡೆಸಿದ ಪರಿಶೀಲಿಸಿದ್ದಾರೆ. ಪ್ರಕರಣ ಸಂಬಂಧ ಸಿಬಿಐ ಬಳಿಕ ಇದೀಗ ಇಡಿಯಿಂದಲೂ ತನಿಖೆ ಆರಂಭವಾಗಿದೆ.

## ಸಿಎಂ, ಕ್ಯಾಬಿನೆಟ್ ನಿರ್ಧಾರ

ಮುಖ್ಯಮಂತ್ರಿಯವರು ಮತ್ತು ಗೃಹಮಂತ್ರಿಯವರಿಗೆ ಈ ಪ್ರಕರಣದ ಬಗ್ಗೆ ಸವಿಸ್ತಾರವಾಗಿ ಗೊತ್ತು. ಈ ಪ್ರಕರಣದಲ್ಲಿ ಯಾರೇ ಶಾಮೀಲಾಗಿದ್ದರೂ ಕೂಡ ತನಿಖೆಯಿಂದ ಹೊರಬೀಳುತ್ತದೆ. ನಂತರದಲ್ಲಿ ಏನೆಲ್ಲ ಕ್ರಮ ಎನ್ನುವುದು ನಿರ್ಧಾರವಾಗುತ್ತದೆ ಎಂದರು.

**ಸಿಎಂ ಅವರಿಂದ ಉತ್ತಮ ಆಡಳಿತ :** ಈ ಅವಧಿ ನಾನೇ ಪೂರ್ಣಗೊಳಿಸುವೆ ಎಂದು ಸಿಎಂ ಸಿದ್ದರಾಮಯ್ಯನವರು ಹೇಳಿರುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಸಚಿವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಮ್ಮ ಪಕ್ಷದ ಹಿರಿಯ ನಾಯಕರು, ದೊಡ್ಡ ಮಾಸ್ ಲೀಡರ್. ಅವರು ನಮ್ಮ ಸರ್ಕಾರವನ್ನು ಬಹಳ ಚೆನ್ನಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಅವರು ಏನು ಮಾತನಾಡುತ್ತಾರೆಯೋ ಅದು ನಮಗೆ ಆಶೀರ್ವಾದ ಎಂದು ಸಚಿವರು ಹೇಳಿದರು.

**ಮೀಸಲಾತಿ ಕೇಳುವ ಅಧಿಕಾರ ಎಲ್ಲರಿಗೂ ಇದೆ**

ಮುಸ್ಲಿಮರು ಮೀಸಲಾತಿಯನ್ನು ಹೆಚ್ಚಳ ಮಾಡಬೇಕೆಂದು ಬೇಡಿಕೆ ಸಲ್ಲಿಸಿರುವ ಕುರಿತು ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು, ನಾವು ಪಂಚಮಸಾಲಿಗಳು 2ಎ ಕೇಳುತ್ತಿದ್ದೇವೆ. ಬೇರೆಯವರು ಬೇರೆ ಮೀಸಲಾತಿ ಕೇಳುತ್ತಿದ್ದಾರೆ. ಕೇಳುವಂತಹ ಅಧಿಕಾರ, ಹಕ್ಕು ಎಲ್ಲರಿಗೂ ಇರುತ್ತದೆ ಎಂದು ಸಚಿವರು ಹೇಳಿದರು.

**ಬಾಗಲಕೋಟೆ ಮಗು ಸಾವು; ಕ್ರಮಕ್ಕೆ ಸೂಚನೆ**

ಬಾಗಲಕೋಟೆಯಲ್ಲಿ ವೈದ್ಯರ ನಿರ್ಲಕ್ಷ್ಯಕ್ಕೆ ಮಗು ಸಾವನ್ನಪ್ಪಿರುವ ಬಗ್ಗೆ ಕೇಳಿದ ಪ್ರಶ್ನೆಗೆ, ನನಗೆ ಚಾಮರಾಜನಗರದಲ್ಲಿ ನಡೆದಂತಹ ಘಟನೆ ಬಗ್ಗೆ ಮಾಹಿತಿ ಬಂದಿದ್ದು, ಈ ಬಗ್ಗೆ ಕೂಡಲೇ ತುರ್ತು ಕ್ರಮ ವಹಿಸಲಾಗಿತ್ತು. ಆದರೆ, ಬಾಗಲಕೋಟೆಯಲ್ಲಿ ಮಗು ಸಾವನ್ನಪ್ಪಿರುವ ಬಗ್ಗೆ ಸಂಬಂಧಪಟ್ಟವರಿಂದ ಮಾಹಿತಿ ಪಡೆದು ಈ ಬಗ್ಗೆ ಕೂಡಲೇ ಅಗತ್ಯ ಕ್ರಮ ವಹಿಸಬೇಕೆಂದು ಸೂಚನೆ ನೀಡುವುದಾಗಿ ಸಚಿವರು ತಿಳಿಸಿದರು.

# ಕೆಐಎಡಿಬಿ ಸ್ವಾಧೀನಪಡಿಸಿಕೊಳ್ಳುವ ಭೂಮಿಗೆ ಉತ್ತಮ ಬೆಲೆ ನೀಡಲು ರಾಮಾಂಜಿ ಒತ್ತಾಯ

**ಶಿಡ್ಲಘಟ್ಟ:** ತಾಲ್ಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ವ್ಯಾಪ್ತಿಯ ಸುಮಾರು 2 ಸಾವಿರದ 8 ನೂರ 23 ಎಕರೆ ಜಮೀನನ್ನು ಕೆಐಎಡಿಬಿ ಸ್ವಾದೀನಪಡಿಸಿಕೊಳ್ಳಲು ಈಗಾಗಲೇ ಅಧಿಸೂಚನೆ ಹೊರಡಿಸಿದ್ದು ಸುಮಾರು 1200 ರೈತರ ಪೈಕಿ 860 ಕ್ಕೂ ಹೆಚ್ಚು ಮಂದಿ ರೈತರು ಜಮೀನು ನೀಡಲು ಒಪ್ಪಿ ಒಪ್ಪಿಗೆ ಪತ್ರವನ್ನು ಸಹ ಬರೆದುಕೊಟ್ಟಿದ್ದಾರೆ ಎಂದು ಕೆಐಎಡಿಬಿ ಜಮೀನುಗಳ ರೈತರ ಹೋರಾಟ ಸಮಿತಿಯ ಮುಖಂಡರಾದ ರಾಮಾಂಜಿ ಒತ್ತಾಯಿಸಿದರು.

ನಗರದ ತಾಲ್ಲೂಕು ಕಛೇರಿ ಮುಂಭಾಗ ಜಂಗಮಕೋಟೆ ಭಾಗದ ಕೆಐಎಡಿಬಿ ಜಮೀನುಗಳ ರೈತರ ಹೋರಾಟ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

ಕೆಐಎಡಿಬಿಗೆ ಜಮೀನು ನೀಡಲು ಮುಂದಾಗಿರುವ ರೈತರ ಕುಟುಂಬದವರಿಗೆ ಒಂದು ಉದ್ಯೋಗ ಸೇರಿದಂತೆ ಭೂಮಿಗೆ ಉತ್ತಮ ಬೆಲೆ ಹಾಗೂ ಒಂದೇ ಕಂತಿನಲ್ಲಿ ಭೂ ಪರಿಹಾರ ನೀಡಬೇಕು ಎಂದರು.

ಕೆಐಎಡಿಬಿ ನಮ್ಮನ್ನು ರೈತರು ಎಂದು ಗುರುತಿಸಿ ನೋಟಿಸ್ ನೀಡಿರುವ ಕಾರಣ ನಾವು ಒಪ್ಪಿಗೆ ಪತ್ರ ಬರೆದುಕೊಟ್ಟಿದ್ದೇವೆ, ನಮ್ಮ ಜಮೀನಿಗೆ ಸಂಬಂದಿಸಿದ ಫಹಣಿಗಳಲ್ಲಿ ಕೆಐಎಡಿಬಿ ಹೆಸರು ನಮೂದಿಸಿರುವುದರಿಂದ ನಮಗೆ ಯಾವುದೇ ಬ್ಯಾಂಕುಗಳಲ್ಲಿ ಸಾಲ ದೊರೆಯುತ್ತಿಲ್ಲ, ಇದೀಗ ನಮಗೆ ಹಣದ ಅಗತ್ಯತೆಯಿದ್ದು ಆದಷ್ಟು ಬೇಗ ತಾವು ಸ್ವಾಧೀನಪಡಿಸಿಕೊಳ್ಳುವ ರೈತರ ಭೂಮಿಗೆ ಉತ್ತಮ ಬೆಲೆ ಹಾಗೂ ಒಂದೇ ಕಂತಿನಲ್ಲಿ ಭೂ ಪರಿಹಾರ ನೀಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ, ಪಂಗಡಕ್ಕೆ ಸೇರಿದವರ ಜಮೀನಿಗೂ ಸಾಮಾನ್ಯ ವರ್ಗದವರ ಜಮೀನಿಗೂ ಸಮಾನವಾಗಿ ಹಣ ಸಿಗುತ್ತದೆ ಎಂಬ ಒಂದೇ ಒಂದು ಕಾರಣದಿಂದ ಕೆಐಎಡಿಬಿ ಭೂ ಸ್ವಾದೀನಕ್ಕೆ ಕೆಲವರು ವಿರೋಧ ವ್ಯಕ್ತ ಪಡಿಸುತ್ತಿದ್ದು ಅಂತಹವರಿಗೆ ಇಷ್ಟವಿಲ್ಲದಿದ್ದರೆ ಅವರ ಭೂಮಿ ಕೊಡಬೇಡಿ, ನಮ್ಮ ಭೂಮಿ ಕೊಡುವುದು, ಬಿಡುವುದು ನಮಗೆ ಸೇರಿದ್ದು ಇದರಲ್ಲಿ ಬೇರೆಯವರ ಹಸ್ತಕ್ಷೇಪ ಬೇಕಾಗಿಲ್ಲ ಎಂದರು.

ಕೆಐಎಡಿಬಿಗೆ ಭೂಮಿ ನೀಡುವ ರೈತರ ಕುಟುಂಬದವರಿಗೆಂದು ಉದ್ಯೋಗ, ಭೂಮಿಗೆ ಉತ್ತಮ ಬೆಲೆ,ಒಂದೇ ಕಂತಿನಲ್ಲಿ ಭೂ ಪರಿಹಾರ, ಈಗಾಗಲೇ ನಮೂನೆ 51, 53 ಹಾಗು 57 ಅರ್ಜಿ ಸಲ್ಲಿಸಿ ಸ್ವಾಧೀನಾನುಭವದಲ್ಲಿರುವ ರೈತರಿಗೂ ಭೂ ಪರಿಹಾರ ನೀಡುವುದು ಸೇರಿದಂತೆ ಈವರೆಗೂ ಕೆಐಎಡಿಬಿ ಯಿಂದ ನೋಟೀಸ್ ಬಾರದ ನಡಿಪಿನಾಯಕನಹಳ್ಳಿ ಹಾಗೂ ಯಣ್ಣಂಗೂರು ಗ್ರಾಮದ ರೈತರಿಗೆ ತುರ್ತಾಗಿ ನೋಟೀಸ್ ಜಾರಿ ಮಾಡಬೇಕು ಎಂದು ಒತ್ತಾಯಿಸಿ ಚಿಕ್ಕಬಳ್ಳಾಪುರ ಉಪ ವಿಭಾಗಾಧಿಕಾರಿ ಆಶ್ವಿನ್ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯರೈತ ಸಂಘದ ರಾಜ್ಯ ಉಪಾದ್ಯಕ್ಷ ಬೆಳ್ಳೂಟಿ ಮುನಿಕೆಂಪಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಪ್ರತೀಶ್, ತಾಲ್ಲೂಕು ಅಧ್ಯಕ್ಷ ಮುನೇಗೌಡ, ಪ್ರಧಾನ ಕಾರ್ಯದರ್ಶಿ ಅರಿಕೆರೆ ಸಂತೋಷ್,ಕಾರ್ಯದರ್ಶಿ ನವೀನ್ ಕುಮಾರ್, ಹೋರಾಟ ಸಮಿತಿಯ ಮುಖಂಡರಾದ ಬಸವಪಟ್ಟಣ ಆಂಜಿನಪ್ಪ,ತಿಪ್ಪೇಗೌಡ, ಪ್ರಭು,ವೆಂಕಟೇಶ್, ಅರಿಕರೆ ಸತೀಶ್, ನಡಿಪಿನಾಯಕನಹಳ್ಳಿ ವಾಸುದೇವಮೂರ್ತಿ, ಸುಬ್ರಮಣಿ, ವೆಂಕಟೇಶ್,ಯಣ್ಣಂಗೂರು ನರಸಿಂಹಮೂರ್ತಿ, ಯೋಗಾನಂದ,ಈರಣ್ಣ, ಬಾಬು,ಚೆನ್ನಪ್ಪ, ಮುನಿರಾಜು ಮುಂತಾದವರು ಹಾಜರಿದ್ದರು.



# ನೀರಿನ ಸಮಸ್ಯೆಯಾಗದಂತೆ ಕ್ರಮಕೈಗೊಳ್ಳಿ

**ಹನೂರು:** ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತೆ ಕ್ರಮಗಳನ್ನು ಕೈಗೊಂಡು ಸಮರ್ಪಕ ನೀರಿನ ಪೂರೈಕೆಗೆ ಹೆಚ್ಚಿನ ಗಮನ ನೀಡಬೇಕು ಎಂದು ಶಾಸಕ ಎಂಆರ್ ಮಂಜುನಾಥ್ ಅವರು ತಿಳಿಸಿದರು.

ಹನೂರು ಪಟ್ಟಣದ ಪಶುಪಾಲನೆ ಇಲಾಖೆಯ ಸಭಾಂಗಣದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು. ಗ್ರಾಮ ಲೆಕ್ಕಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಕಾಡಂಚಿನ ಗ್ರಾಮಗಳಲ್ಲಿ ಈಗಾಗಲೇ ನೀರಿನ ಸಮಸ್ಯೆ ಎದುರಾಗಿದೆ. ಈ ಅಲ್ಲಿನ ಪಿಡಿಒ ಅವರು ಜನರಿಗೆ ನೀರನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಈಗಾಗಲೇ ಹೂಗ್ಯಂ, ಮಿಣ್ಯಂ, ಕೌದಳ್ಳಿ ಕುರಟ್ಟಿ ಹೊಸೂರು ಈ ಭಾಗದಲ್ಲಿ ನೀರಿನ ಸಮಸ್ಯೆಗಳು ಉದ್ಭವವಾಗಿದೆ. ಮಾರ್ಟಳ್ಳಿ ಭಾಗದಲ್ಲಿ ನೀರಿಗಾಗಿ ಅತೀ ಹೆಚ್ಚಿನ ಸಮಸ್ಯೆ ತಲೆದೂರಿದೆ. ಗ್ರಾಮ ಪಂಚಾಯಿತಿ ಪಿಡಿಒಗಳು ಖಾಸಗಿ ಬೋರ್ವೆಲ್ ಗಳು . ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ವ್ಯವಸ್ಥೆ ಮಾಡಬೇಕು. ಮಾರ್ಟಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸದಸ್ಯರು ಸಾರ್ವಜನಿಕರ ಸಭೆ ನಡೆಸಲು ದಿನಾಂಕ ನಿಗದಿ ಮಾಡಿ ಎಂದು ಇಒ ಉಮೇಶ್ ಅವರಿಗೆ ಶಾಸಕ ಸೂಚಿಸಿದರು.

ಗ್ರಾಮ ಪಂಚಾಯಿತಿ 15ನೇ ಹಣಕಾಸು ಯೋಜನೆಯ ಹಣವನ್ನು ಯಾವುದಕ್ಕೂ ಬಳಸದೆ ತುರ್ತು ಸಮಯಕ್ಕಾಗಿ ಕಾಯ್ದಿರಿಸಬೇಕು. ಅಗತ್ಯವಿದ್ದಲ್ಲಿ ಬೋರ್ವೆಲ್ ಕೊರೆಯಲು ಈ ಹಣವನ್ನು ಬಳಕೆ ಮಾಡಿಕೊಳ್ಳಬೇಕು. ಬೇಸಿಗೆಯ ಸಮಯ ಮುಂದಿನ ಎರಡು ತಿಂಗಳುಗಳಲ್ಲಿ ನೀರಿನ ಅಭಾವ ಉಂಟಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ನೀರಿನ ಸಮಸ್ಯೆಗಳು. ಹಾಗೂ ನೀರನ್ನು ಪೂರೈಸಲು ಅಗತ್ಯ ಕ್ರಮ ಕೈಗೊಂಡಿರುವ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ತಾಲೂಕು ತಹಶೀಲ್ದಾರ್ ಗುರುಪ್ರಸಾದ್, ತಾಲೂಕು ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಪಟ್ಟಣ ಪಂ. ಮುಖ್ಯಾಧಿಕಾರಿ ಮಹೇಶ್ ಕುಮಾರ್, ವೈದ್ಯಾಧಿಕಾರಿ ಪ್ರಕಾಶ್ ಸೇರಿದಂತೆ ಗ್ರಾಮ ಪಂಚಾಯತ್ ಪಿಡಿಒಗಳು, ವಿ.ಎ ಗಳು ಇನ್ನಿತರರು ಹಾಜರಿದ್ದರು.



# ಶ್ರೀಪೂಜಮ್ಮದೇವಿ ಅಮ್ಮನವರ ಅದ್ದೂರಿ ಕರಗ ಮಹೋತ್ಸವ



**ಶಿಡ್ಲಘಟ್ಟ:** ನಗರದ ವಾರ್ಡ್ ನಂ.09ರ ಬೈಪಾಸ್ ರಸ್ತೆಯಲ್ಲಿ ಆನಾಧಿ ಕಾಲದಿಂದಲೂ ನೆಲೆಸಿರುವ ಶ್ರೀಪೂಜಮ್ಮದೇವಿ ಅಮ್ಮನವರ ಸುಪ್ರಸಿದ್ಧ ಕರಗ ಮಹೋತ್ಸವವು ಎದ್ದಿನಂತೆ ಹೋಳಿ ಹುಣ್ಣಿಮೆಯ ಪ್ರಯುಕ್ತ ಆಚರಿಸಲಾಗುತ್ತಿದೆ.


ಈ ಮಹೋತ್ಸವದ ಅಂಗವಾಗಿ ದಿನಾಂಕ 11–03–2025 ರಂದು ಮಂಗಳವಾರ ರಾತ್ರಿ 11 ಘಂಟೆ ಸುಮಾರಿಗೆ ಆಯೋಜಿಸಿದ್ದ ಹಸಿ ಕರಗವು ನಗರದ ಎಸ್.ವಿ.ಗಣೇಶ್ ನಗರದ ಶ್ರೀಆಂಜನೇಯ ಸ್ವಾಮಿ ದೇವಾಲಯದಲ್ಲಿ ವಿಶೇಷವಾಗಿ ಪೂಜೆ ಸಲ್ಲಿಸಿ ಹಸಿ ಕರಗ ಹೊತ್ತು ಹೊರ ಬಂದ ಕರಗ ಪೂಜಾರಿ ವೇಮಗಲ್ ನ ಎಸ್. ಅಗ್ರಹಾರ ಗ್ರಾಮದ ಶಿವರಾಜು ಅವರು ಬಸ್ ನಿಲ್ದಾಣದಿಂದ ಸಿದ್ದಾರ್ಥ ನಗರದ ಶ್ರೀ ಪೂಜಮ್ಮ ದೇವಾಲಯದ ವರೆಗೂ ಮಾರ್ಗದಲ್ಲಿ ಇರುವ ದೇವಾಲಯಗಳ ಹತ್ತಿರ ಪೂಜೆಯನ್ನು ಸ್ವೀಕರಿಸಿತು.

ಬಂಗಾರಪೇಟೆಯ ಆನಂತ್ ತಮಟೆ ಕಲಾವಿದರ ತಂಡದ ತಮಟೆ ಸದ್ದಿಗೆ ಕರಗ ಹೊತ್ತ ಪೂಜಾರಿ ಶಿವರಾಜು ಅವರು ವಿವಿಧ ಭಂಗಿಗಳಲ್ಲಿ ನೃತ್ಯ ಮಾಡುವ ಮೂಲಕ ನೇರದಿದ್ದ ಜನರ ಮನ ತಣಿಸಿದರು.

# ನ್ಯಾಯಯುತವಾಗಿ ಅಧಿಕಾರ ಸದುಪಯೋಗಪಡಿಸಿಕೊಳ್ಳಬೇಕು

**ಮುಳಬಾಗಿಲು:** ಅಧಿಕಾರ ಸಿಕ್ಕಾಗ ಆಯಾ ಕ್ಷೇತ್ರದಲ್ಲಿ ಗಣನೀಯ ಸೇವೆಯನ್ನು ಸಲ್ಲಿಸಿದಾಗ ಮಾತ್ರ ಅಧಿಕಾರಕ್ಕೆ ನಾವು ನ್ಯಾಯವನ್ನು ಒದಗಿಸಿದಂತೆ ಆಗುತ್ತದೆ ಎಂದು ಜೆಡಿಎಸ್ ಯುವ ಮುಖಂಡ ಅಶೋಕ್ ಹೇಳಿದರು .

ತಾಲ್ಲೂಕಿನ ಹೆಬ್ಬಣಿ ಪಂ ಹೆಚ್. ಬೈಪ್ಪನಹಳ್ಳಿ ಗ್ರಾಮದಲ್ಲಿ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಆಯ್ಕೆಯಾದ ಅಧ್ಯಕ್ಷ ಉಪಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದರು. ಇಲ್ಲಿನ ಡೈರಿ ಸುಮಾರು ವರ್ಷಗಳಿಂದ ಇದ್ದು, ಅಂದಿನಿಂದ ಇದುವರೆಗೂ ಸಹ ಯಾವುದೇ ರೀತಿಯ ಗಲಾಟೆಗೆ ಆಸ್ಪದ ನೀಡಿದೇ ಗ್ರಾಮಸ್ಥರ ಸಮ್ಮುಖದಲ್ಲಿ ಸಹಕಾರ ಸಂಘಕ್ಕೆ ಅಧ್ಯಕ್ಷರನ್ನು ಆಯ್ಕೆ ಮಾಡಿಕೊಳ್ಳುವ ಸಂಪ್ರದಾಯ ಮುಂದುವರಿದಿದೆ. ಇದೇ ರೀತಿ ಮುಂದಿನ ದಿನಗಳಲ್ಲಿ ನಡೆಯಬೇಕೆಂದು ಕೋರಿದರು.



ಚುನಾವಣೆಯಿಂದ ಬರುವ ಅಧಿಕಾರ ಶಾಶ್ವತವಲ್ಲ. ಆದ್ದರಿಂದ ಯಾರೂ ಸಹ ಅಧಿಕಾರದ ಹಿಂದೆ ಹೋಗುವುದನ್ನು ಮೊದಲಿಗೆ ಕೈ ಬಿಡುವುದು ತುಂಬಾ ಉತ್ತಮವಾದ ಕೆಲಸ. ಅಧಿಕಾರವನ್ನು ಪಡೆದವರು ಎಲ್ಲರ ವಿಶ್ವಾಸವನ್ನು ತೆಗೆದುಕೊಂಡು ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದಾಗ ಮಾತ್ರ ಆ ಸ್ಥಾನಕ್ಕೆ ಗೌರವ, ಯಶಸ್ಸು ಸಿಗುತ್ತದೆ ಎಂದು ತಿಳಿಸಿದರು.

ಯುವ ಮುಖಂಡ ಬಿ.ಕೆ ಅಶೋಕ್ ಮಾತನಾಡಿ, ಗ್ರಾಮದಲ್ಲಿ ಸಹಕಾರ ಸಂಘದಲ್ಲಿ ಎಲ್ಲಾ ಸಮುದಾಯದ ಜನಾಂಗದವರಿಗೂ ಸಹ ಅವಕಾಶವನ್ನು ಕಲ್ಪಿಸಿ ಕೊಡಲಾಗಿದೆ. 12 ಮಂದಿ ನಿರ್ದೇಶಕರ ಸಹಮತದಿಂದ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಮಾಡಲಾಗಿದೆ. ಇದೇ ರೀತಿಯಲ್ಲಿ ಮುಂದಿನ ದಿನಗಳಲ್ಲಿಯೂ ಸಹ ಸಹಕಾರ ಸಂಘದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಹೆಚ್. ಬೈಪ್ಪನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಸಿ. ವೆಂಕಟರೆಡ್ಡಿ , ಉಪಾಧ್ಯಕ್ಷ ಹೆಚ್. ನಾಗೇಶ್ , ರವರನ್ನು ಸಂಘದ ಎಲ್ಲಾ ನಿರ್ದೇಶಕರು ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಚುನಾವಣಾಧಿಕಾರಿಗಳಾದ ಶಿವಶಂಕರ್, ಗ್ರಾಮಸ್ಥರು ಹಾಗೂ ಜೆಡಿಎಸ್ ಮುಖಂಡರಾದ ವಿ. ಅಶೋಕ್, ಬಿ. ಎನ್ನ. ಅಶೋಕ್, ಮಂಜುನಾಥ್, ವಿ. ಶಂಕರಪ್ಪ, ಹಿರಿಯ ಮುಖಂಡರಾದ ರೆಡ್ಡೆಪ್ಪ, ರಾಜುಲೂರು ಸತೀಶ್, ಸಂಘದ ಸಿಬ್ಬಂದಿ ವರ್ಗದವರಾದ ಕಾರ್ಯದರ್ಶಿಗಳು ಶ್ರೀನಿವಾಸ್, ಸಹಾಯಕರಾದ ಸುಬ್ರಮಣಿ ಮತ್ತಿತರರು ಇದ್ದರು.

# 'ದಶರಥಿ' ಚಲನಚಿತ್ರಕ್ಕೆ ಪೂಜೆ ಸಲ್ಲಿಕೆ



**ಶಿಡ್ಲಘಟ್ಟ:** ನಟನೆ ಮಾಡುವುದು ಅಷ್ಟು ಸುಲಭದ ಕೆಲಸವಲ್ಲ ಪ್ರತಿ ಹಂತದಲ್ಲು ಕಲಿಯುವ ನಟನಾ ಕೌಶಲ್ಯ ಮೆರೆದು ನಿರ್ದೇಶಕರ ಸೂಚನೆಗಳನ್ನು ಅರಿತು ನಟನೆ ಮಾಡಿದಾಗ ಮಾತ್ರ ಅದು ಸಾಧ್ಯವಾಗುತ್ತದೆ ಎಂದು ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ತಿಳಿಸಿದ್ದಾರೆ.

ನಗರದ ದಿಬ್ಬೂರಹಳ್ಳಿ ಬೈಪಾಸ್ ರಸ್ತೆ ಬಳಿಯ ಪೂಜಮ್ಮ ದೇವಸ್ಥಾನದಲ್ಲಿ' ಸೋಹನ್ ಅಭಿರಾಮ್' ನಟನೆಯ' ದಶರಥಿ' ಚಲನಚಿತ್ರಕ್ಕೆ ಪೂಜೆಸಲ್ಲಿಸಿ, ಕ್ಲಾಪ್ ನೆರವೇರಿಸಿ ಅವರು ಮಾತನಾಡಿದರು. ಶಿಡ್ಲಘಟ್ಟದ ಮಣ್ಣಿಗೂ ಸಿನಿಮಾಗೂಬಿಡಿಸ ಲಾರದ ನಂಟಿದೆ ಇಲ್ಲಿ ಹುಟ್ಟಿ ಬೆಳೆದ ಅನೇಕರು ಸಿನಿಮಾ ಕ್ಷೇತ್ರದ ನಾನಾ ವಿಭಾಗ ಗಳಲ್ಲಿ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿದ್ದು ಶ್ಲಾಘನೀಯವಾದದ್ದು ಎಂದು ಹೇಳಿದರು.

'ಸೋಹನ್ ಅಭಿರಾಮ್' ಒಂದು ಸಣ್ಣ ಹಳ್ಳಿಯಲ್ಲಿ ಹುಟ್ಟಿ ನಟನೆಯ ತರಬೇತಿ ಪಡೆದು ಇಂದು ಚಿತ್ರದ ನಾಯಕನಾಗಿ ನಟಿಸುತ್ತಿರುವುದು ಹೆಮ್ಮೆಯ ವಿಷಯ ದಶರತಿ ಚಿತ್ರವು ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುವಂತಾಗಲಿ ಎಂದು ಅವರು ಆಶಿಸಿದರು. ಇದೇ ವೇಳೆ ಶ್ರೀಪೂಜಮ್ಮ ದೇವಿಗೆ ಪೂಜೆ ಸಲ್ಲಿಸಿ ಮಹಾ ಮಂಗಳಾರತಿ ಮಾಡಿ ತೀರ್ಥ, ಪ್ರಸಾದವನ್ನು ವಿನಿಯೋಗಿಸಲಾಯಿತು.

ಚಿತ್ರದ ಚಿತ್ರೀಕರಣ ಸುಗಮವಾಗಿ ನಡೆಯಲಿ, ಚಿತ್ರ ಯಶಸ್ಸು ಕಾಣಲು ಅಮ್ಮನಬರ ಆಶೀರ್ವಾದ ಇರಲೆಂದು ನಾಯಕ ನಟ ಸೋಹನ್ ಅಭಿರಾಮ್ ಪೂಜಮ್ಮ ದೇವಿಗೆ ಕೈ ಮುಗಿದು ಪ್ರಾರ್ಥಿಸುವ ದೃಶ್ಯವನ್ನು ಚಿತ್ರೀಕರಿಸಲಾಯಿತು. ಈ ಸಂದರ್ಭದಲ್ಲಿ ನಾಯಕ ನಟ ಸೋಹನ್ ಅಭಿರಾಮ್, ನಿರ್ಮಾಪಕಿ ಎಸ್.ಎನ್.ಮಾಲ, ನಿರ್ದೇಶಕ ವೇಕ್ ವೀರ, ಬಿಜೆಪಿ ಗ್ರಾಮಾಂತರ ಮಂಡಲ ಅದ್ಯಕ್ಷರಾದ ಸೀಕಲ್ ಆನಂದಗೌಡ,ಪುರಸಭೆ ಮಾಜಿ ಅದ್ಯಕ್ಷರಾದ ಚಿಕ್ಕಮುನಿಯಪ್ಪ, ನಗರಸಭೆ ಸದಸ್ಯರಾದ ಅನಿಲ್ ಕುಮಾರ್, ನಾರಾಯಣಸ್ವಾಮಿ,ಮುಖಂಡರಾದ ಮನೋಹರ,ಕಂಬದಹಳ್ಳಿ ಎಸ್.ಸುರೇಂದ್ರ ಗೌಡ, ಮಧು, ಕುಂದಲಗುರ್ಕಿ ಅರುಣ್ ಕುಮಾರ್,ಅಜ್ಜಪ್ಪ, ಕೊತ್ತನೂರು ಜ್ಞಾನೇಶ್, ಭಗತ್ ಸುರೇಶ್, ರಾಮಚಂದ್ರಪ್ಪ, ನಾರಾಯಣಸ್ವಾಮಿ ಮತ್ತಿತರರು ಹಾಜರಿದ್ದರು.

# ಡಿವಿಜಿ ಜನ್ಮದಿನಾಚರಣೆ: ಸಕಲ ಸಿದ್ಧತೆ



**ಮುಳಬಾಗಿಲು:** ಜಿಲ್ಲಾ ಮಟ್ಟದ ಕಾರ್ಯಕ್ರಮಕ್ಕೆ ಡಿವಿಜಿ ಪ್ರತಿಷ್ಠಾನದಿಂದ ಎಲ್ಲಾ ರೀತಿಯ ಸೌಕರ್ಯಗಳನ್ನು ಮಾಡಿಕೊಡಲು ಸಿದ್ದರಿದ್ದೇವೆ ಎಂದು ಕೋಲಾರ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ಹೇಳಿದರು.

ಜಿಲ್ಲಾಡಳಿತದಿಂದ ಮಾರ್ಚ್ 17 ರಂದು ಡಿವಿಜಿಯವರ ಜನ್ಮದಿನದ ಆಚರಣೆ ಮಾಡಲು ಸಕಲ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲು ನಗರದ ತಾಲ್ಲೂಕು ಕಚೇರಿಯ ಸಭಾಂಗಣದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಡಿವಿಜಿಯವರ ಸಾಹಿತ್ಯವನ್ನು ಪರಿಚಯ ಮಾಡೋದು ನಮ್ಮ ಮೂಲ ಆಶಯವೆಂದರು.

ಇದಕ್ಕೆ ವೇದಿಕೆ ಕಾರ್ಯಕ್ರಮವನ್ನು ರೂಪಿಸುವಾಗ ಎಲ್ಲಾ ರೀತಿಯ ಸಹಕಾರಗಳನ್ನು ನೀಡುವುದರ ಜೊತೆಗೆ ಮೆರವಣಿಗೆ ತಂಡಗಳನ್ನು ನೀಡಲಾಗುವುದು ಹಾಗೆ ಮೆರವಣಿಗೆಗೆ ವಿದ್ಯಾರ್ಥಿಗಳನ್ನು ಈಗಾಗಲೇ ಚರ್ಚೆ ಮಾಡಿರುತ್ತೇವೆ ಎಂದರು.

ವೇದಿಕೆ ಕಾರ್ಯಕ್ರಮವನ್ನು ಡಿವಿಜಿ ಶಾಲೆಯಲ್ಲಿ ಮಾಡುವುದು ಹಾಗೆ ವಿಚಾರ ಸಂಕಿರಣವನ್ನು ರೂಪಿಸುವುದಕ್ಕೆ ಸಾಧ್ಯವಾದರೆ ವಿಚಾರ ಮಾಡಲಾಗುವುದು ಅಥವಾ ಉಪನ್ಯಾಸವನ್ನು ನೀಡಲು ಸಾಧ್ಯವಾದರೆ ಒಬ್ಬರನ್ನು ಉಪನ್ಯಾಸಕ್ಕೆ ಕರೆಯಲಾಗುವುದು ಎಂದರು.

ಈ ಸಮಯದಲ್ಲಿ ಕನ್ನಡ ಪರ ಸಂಘಟನೆಗಗಳ ಒಕ್ಕೂಟದ ಅಧ್ಯಕ್ಷರಾದ ಶಂಕರ್ ಕೇಸರಿಯವರು ಸಾಹಿತಿಗಳು, ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾದ ಜೆಜಿ ನಾಗರಾಜ್ ಅವರನ್ನು ಕರೆಯಬೇಕೆಂದಾಗ ಎಲ್ಲರೂ ಸಮ್ಮತಿ ಸೂಚಿಸಿದರು. ತಾಲೂಕು ಆಡಳಿತ ಕೆಇಬಿ ಕಚೇರಿ ಹತ್ತಿರ ಹತ್ತಕ್ಕೆ ಹತ್ತು ಜಾಗ ನೀಡಿದರೆ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಗೋಪಾಲಗೌಡರು ಸ್ವಂತ ಖರ್ಚಿನಲ್ಲಿ ಡಿವಿಜಿ ಪ್ರತಿಮೆಯನ್ನು ನಿರ್ಮಾಣ ಮಾಡಿಕೊಡುತ್ತಾರೆ. ಈಗ ತಹಸಿಲ್ದಾರವರು ಜಾಗವನ್ನು ಕೊಟ್ಟ ತಕ್ಷಣ ಮೂರು ತಿಂಗಳು ಒಳಗೆ ಪ್ರತಿಮೆ ನಿರ್ಮಾಣವಾಗುತ್ತದೆ ಎಂದರು.

ಇದೇ ತಾಲೂಕಿನವರಾದ ವಿ.ಗೀತಾ ಅವರು ತಹಶಿಲ್ದಾರರಾಗಿ ಬಂದಿರುವುದು ಹೆಮ್ಮೆಯ ಸಂಗತಿ ಅವರ ಅವಧಿಯಲ್ಲಿ ಡಿವಿಜಿ ಪ್ರತಿಮೆ ಆದರೆ ನಮ್ಮ ತಾಲೂಕಿಗೆ ಸಂತೋಷ ನಗರಸಭೆ ಕಸಾಪ ಜಿಲ್ಲಾಧ್ಯಕ್ಷರಾದ ಗೋಪಾಲಗೌಡರು ಡಿವಿಜಿಯವರು ನಮ್ಮ ಜಿಲ್ಕೆಯ ಹೆಮ್ಮೆಯ ಸಾಹಿತಿ ಅವರ ಪುತ್ಥಳಿ ಯನ್ನು ಮಾಡಿಕೊಡುವುದರ ಮೂಲಕ ನಾನು ನನ್ನ ಅಳಿಲು ಸೇವೆಯನ್ನು ಮಾಡುವೆ ಎಂದರು.

ಸಭೆಯಲ್ಲಿ ನಗರಸಭೆ ಪೌರಯುಕ್ತರಾದ ವಿ.ಶ್ರೀಧರ್, ಮುಳಬಾಗಿಲು ತಾಲೂಕಿನ ಕಾರ್ಯನಿರ್ವಾಹಣಾಧಿಕಾರಿಗಳಾದ. ಡಾ.ಸರ್ವೆಶ್ ಭಾಗವಹಿಸಿದ್ದರು. ಇದಕ್ಕೂ ಮೊದಲು ಡಿವಿಜಿ ಶಾಲೆಯ ಮುಖ್ಯೋಪಾಧ್ಯಾಯರಾದ ಸೊಣ್ಣಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮದ ರೂಪರೇಷೆಗಳನ್ನು ಯಾವ ರೀತಿ ಮಾಡಬೇಕೆಂದು ತಿಳಿಸಿದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ತಹಶಿಲ್ದಾರರಾ ಗೀತಾ ಅವರು ಡಿವಿಜಿ ಕಾರ್ಯಕ್ರಮಕ್ಕೆ ಸಂಪೂರ್ಣವಾಗಿ ಸಹಕಾರ ನೀಡುವುದಾಗಿ ತಿಳಿಸಿದರು.

ಪತ್ರಕರ್ತರ ಸಂಘದ ಅಧ್ಯಕ್ಷರು ಜಮ್ಮನಹಳ್ಳಿ ಕೃಷ್ಣ, ಕಸಾಪ ನಗರಾಧ್ಯಕ್ಷ ಮುರಳಿ,ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳಾದ ಹರೀಶ್ ಗೌಡ,ಶಾಹೀದ್ ಚಾಂದ್ ಪಾಶ,ಕೊಲದೇವಿ ರಯಾಜ್,ರೋಹನ್ ಗೌಡ ಡಿವಿಜಿ ಸಂಘದ ಅಧ್ಯಕ್ಷರಾದ ಮಧುಸೂಧನ್,ರೈತ ಸಂಘದ ನಂದಕುಮಾರ್,ಪ್ರಕಾಶಗೌಡ,ಆಟೋ ಚಾಲಕರ ಸಂಘದ ಕೆಎಂ ಮಂಜುನಾಥ್. ಮುಂತಾದವರು ಭಾಗವಹಿಸಿ ಸಲಹೆಗಳನ್ನು ನೀಡಿದರು.

# ತಾಲ್ಲೂಕು ಅಧ್ಯಕ್ಷರಾಗಿ ಶರಣಪ್ಪ ಆಯ್ಕೆ

**ಸಿರಗುಪ್ಪ:** ತಾಲ್ಲೂಕಿನ ಬಲಕುಂದಿ ಗ್ರಾಮದ ನಿವಾಸಿಯಾದ ಆರ್.ಶರಣಪ್ಪ ಅವರು ಕರ್ನಾಟಕ ಅಲ್ಪಸಂಖ್ಯಾತರ ಹಿಂದುಳಿದ ದಲಿತರ ಒಕ್ಕೂಟದ ಸಂಘಟನೆಯ ಸಿರಗುಪ್ಪ ತಾಲ್ಲೂಕು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘಟನೆಯ ರಾಜ್ಯದ್ಯಕ್ಷರಾದ ಪ್ರಭುಲಿಂಗ ಎಲ್. ದೊಡ್ಡಿಣಿ ಅವರು ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ.



ಕರ್ನಾಟಕ ಅಲ್ಪಸಂಖ್ಯಾತರ ಹಿಂದುಳಿದವರ ದಲಿತರ ಒಕ್ಕೂಟ ರಾಜ್ಯ ಘಟಕ ರಾಜ್ಯ ಸಮಿತಿಯ ಮುಂದಿನ ಆದೇಶದವರಿಗೆ ಆರ್ ಶರಣಪ್ಪ ಅವರಿಗೆ ಸಿರುಗುಪ್ಪ ತಾಲೂಕು ಅಧ್ಯಕ್ಷರನ್ನು ಮಾಡಿದ್ದೇವೆ. ಸಾಮಾಜಿಕ ಕಳಕಳಿಯ ಅಹಿಂದ ಒಕ್ಕೂಟದ ನಿಯಮಗಳಿಗೆ ಹಾಗೂ ಸವಿಂದನ ಬದ್ಧವಾಗಿ ತಮಗೆ ವಹಿಸಿದ ಪದಾಧಿಕಾರಿದ ಕರ್ತವ್ಯ ನಿರ್ವಹಿಸಬೇಕು. ಒಂದು ವೇಳೆ ಸವಿಂದನ ವಿರೋಧಿ ಕೆಲಸ ಹಾಗೂ ಅಹಿಂದ ಒಕ್ಕೂಟದ ಮೂಲ ಉದ್ದೇಶಗಳಿಗೆ ವಿರುದ್ಧವಾಗಿ ಕೆಲಸ ಮಾಡಿದರೆ, ಅಹಿಂದ ಒಕ್ಕೂಟದ ಪದಾಧಿಕಾರಿ ಹುದ್ದೆ ಮತ್ತು ಸದಸ್ಯತ್ವ ರದ್ದು ಮಾಡಲಾಗುತ್ತದೆ ಎಂದು ರಾಜ್ಯಧ್ಯಕ್ಷರು ತಿಳಿಸಿದರು.

# ರೈತರು ಸರ್ಕಾರದ ನೇರ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಲು ಸಲಹೆ



**ನಾಗಮಂಗಲ:** ರೈತರು ಸರ್ಕಾರದ ಸವಲತ್ತುಗಳನ್ನು ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ ನೇರವಾಗಿ ರೈತರೇ ರೈತ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಕರ್ನಾಟಕ ರಾಜ್ಯ ರೈತ ಉತ್ಪಾದಕರ ರಾಜ್ಯ ನಿರ್ದೇಶಕರಾದ ರಾಜೇಶ್ ಕರೆ ನೀಡಿದರು.

ಅವರು ನಾಗಮಂಗಲ ತಾಲ್ಲೂಕು ಎಪಿಎಂಸಿ ಆವರಣದಲ್ಲಿ ಆಯೋಜನೆ ಮಾಡಿದ್ದ ರಾಗಿ ಖರೀದಿ ಕೇಂದ್ರವನ್ನು ಆರಂಭಿಸಲು ಸಂಕೇತಿಕವಾಗಿ ಉದ್ಘಾಟನೆ ಮಾಡುತ್ತಾ ಮಾತನಾಡಿದರು.


ರೈತರಿಗೆ ಪ್ರತಿ ಬಾರಿಯೂ ಒಂದಲ್ಲ ಒಂದು ರೀತಿ ರಾಗಿ ಖರೀದಿ ಕೇಂದ್ರದಲ್ಲಿ ತೊಂದರೆಯಾಗಿದ್ದು ಈ ಬಾರಿ ರೈತರು ಯಾವುದೇ ಮಧ್ಯವರ್ತಿ ಹಾವಳಿಗಳನ್ನ ಇಲ್ಲದೆ ದಿನಕ್ಕೆ ಇಂತಿಷ್ಟು ನಿಗದಿ ಮಾಡುವ ಮುಖಾಂತರ ಪ್ರತಿಯೊಬ್ಬ ರೈತರನ್ನ ಕಾಯಿಸದೆ ರಾಗಿ ಖರೀದಿಸುವ ವ್ಯವಸ್ಥೆ ಜಾರಿಯಾಗಿದ್ದು ರೈತರು ಸಹಕರಿಸಬೇಕೆಂದು ತಿಳಿಸಿದರು.

ಖರೀದಿ ಕೇಂದ್ರದಲ್ಲಿ ರೈತರಿಗೆ ಅನುಕೂಲವಾಗುವ ವ್ಯವಸ್ಥೆ ಯಾಗಿದ್ದು ಮಧ್ಯವರ್ತಿಗಳಿಗೆ ಆಮಿಷಕ್ಕೆ ಒಳಗಾಗದೆ ಒಳಗಾಗದೆ ತಾವುಗಳು ತಮ್ಮ ಜಮೀನಿನ ಆರ್ ಟಿ ಸಿ ಗಳನ್ನು ತಾವೇ ಖುದ್ದು ಹಾಜರಾಗಿ ರಾಗಿ ನೀಡುವ ಮುಖಾಂತರ ಸರ್ಕಾರದ ಇಂತಹ ಯೋಜನೆಗಳನ್ನು ಬಳಸಿಕೊಳ್ಳುವಂತೆ ತಿಳಿಸಿದರು. ರೈತರು ಸಹಕಾರ ತಾಳ್ಮೆ ವಹಿಸುವ ಮುಖಾಂತರ ರೈತರ ಪ್ರತಿಯೊಬ್ಬರು ರಾಗಿ ಖರೀದಿ ಕೇಂದ್ರದಲ್ಲಿ ತೊಂದರೆಯಾಗದಂತೆ ತಾಲೂಕು ದಂಡಾಧಿಕಾರಿಗಳು ಈ ಬಾರಿ ಹೆಚ್ಚು ಗಮನ ನೀಡಲಿದ್ದು ರೈತರು ಈ ಯೋಜನೆಯನ್ನು ಸ ದ ು ಪ ಂ ಯ ೋ ಗ ಪ ಡ ಿ ಸ ಿ ಕ ೊ ಳ ್ಳ ು ವ ಂ ತ ೆ ತಿಮ್ಮರಾಯಗೌಡ ರವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳಾದ ಜಿ. ಆದರ್ಶ್ ಪುರಸಭೆ ಅಧ್ಯಕ್ಷರಾದ ಅಲಿ ಅನ್ಸರ್ ಪಾಷಾ, ಪುರಸಭೆ ಸದಸ್ಯ ಸಂಪತ್ತು, ಎಚ್. ಟಿ ಕೃಷ್ಣೇಗೌಡರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಮೂಡ್ಲಿಗೌಡ. ಇಲಾಖೆಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು

# ದಲಿತಪರ ಸಂಘಟನೆಗಳಿಂದ ಹೋರಾಟಕ್ಕೆ ಸಿದ್ಧ

**ಮಾಲೂರು;** ಜೈ ಭೀಮ್ ನಮೋ ಬುದ್ಧಾಯ ಹೋರಾಟದ ಒಡನಾಡಿಗಳೆ ಬುದ್ಧ ಗಯಾ ಟೆಂಪಲ್ ಆಕ್ಟ್ 1949 ರದ್ದತಿಗಾಗಿ ಬ್ರಾಹ್ಮಣ್ಯಶಾಹಿಗಳ ಹಿಡಿತದಿಂದ ಬೌದ್ಧ ವಿಹಾರಗಳ ವಿಮುಕ್ತಿಗೊಳಿಸುವಂತೆ ಒತ್ತಾಯಿಸಿ ಪ್ರತಿಭಟನೆ ಹೋರಾಟಕ್ಕೆ ಸಭೆಯನ್ನು ಕರೆಯಾಗಿದೆ ಎಂದು ದಸಂಸ ಜಿಲ್ಲಾ ಸಂಘಟನಾ ಸಂಚಾಲಕ ಲಕ್ಕೂರು ವೆಂಕಟೇಶ್ ಮನವಿಮಾಡಿದರು.



ತಾಲ್ಲೂಕಿನ ಎಲ್ಲಾ ದಲಿತಪರ, ಪ್ರಗತಿಪರ ಸಂಘಟನೆಗಳು, ಕನ್ನಡ ಪರ, ಚಿಂತಕರು, ಸಾಹಿತಿಗಳು ಸೇರಿದಂತೆ ಹಿರಿಯ ಮುಖಂಡರುಗಳು ಪೂರ್ವಭಾವಿ ಸಭೆಯಲ್ಲಿ ದಿನಾಂಕ: 22–03–2025 ರಂದು ಶನಿವಾರ 12 ಗಂಟೆಗೆ ಮಾಲೂರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಭೆ ಕರೆಯಲಾಗಿದೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯವಾದ ಸಲಹೆ ಸೂಚನೆಗಳನ್ನು ನೀಡಬೇಕಾಗಿ ಮನವಿ ಮಾಡಿದರು.

# ಪಂಚ ಪೀಠಗಳಲ್ಲಿ ರಂಭಾಪುರಿ ಪೀಠ ಅತ್ಯಂತ ಗಮನ ಸೆಳೆಯುವಂತಹದ್ದು

**ಹನೂರು:** ಪ್ರಾಚೀನ ಇತಿಹಾಸ ಇರುವಂತಹ ಪಂಚ ಪೀಠಗಳಲ್ಲಿ ಒಂದು ಶ್ರೀಶೈಲ ಪೀಠದ, ಕಾಶಿ ಪೀಠ, ಉಜ್ಜಯನಿ ಪೀಠ, ರಂಭಾಪುರಿ ಪೀಠ, ಕೇದಾರನಾಥ ಪೀಠ ಈ ಐದು ಪೀಠಗಳಲ್ಲಿ ಅತ್ಯಂತ ಗಮನ ಸೆಳೆಯುವಂತಹದ್ದು ರಂಭಾಪುರಿ ಪೀಠ, ಈ ಪೀಠದ ಅಧ್ಯಕ್ಷರಾಗಿ ಧರ್ಮದ ಬಗ್ಗೆ ಧಾರ್ಮಿಕ ವಿಚಾರಗಳನ್ನು ಪ್ರಚಾರಕ್ಕೆ ತಂದಂತ ಕೀರ್ತಿ ಶ್ರೀ ರೇಣುಕಾಚಾರ್ಯ ಸ್ವಾಮಿಯವರಿಗೆ ಸಲ್ಲುತ್ತದೆ ಎಂದು ಬಿಇಒ ಗುರುಲಿಂಗಯ್ಯ ತಿಳಿಸಿದರು.



ಹನೂರು ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ತಾಲೂಕು ಆಡಳಿತ ವತಿಯಿಂದ ಹಮ್ಮಿಕೊಂಡಿದ್ದ ಜಗದ್ಗುರು ರೇಣುಕಾಚಾರ್ಯ ಸ್ವಾಮಿಗಳ ಜಯಂತಿ ಆಚರಣೆಯಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯ ಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿ ಮಾತನಾಡಿದರು.

ದಾಸೋಹ ಪರಂಪರೆ ಮತ್ತು ಕಾಯಕ ತತ್ವ ಒಬ್ಬ ವ್ಯಕ್ತಿಗಿಂತ ಶ್ರೇಷ್ಠವಾದದ್ದು. ಚರಿತ್ರೆಗಿಂತ ಚಾರಿತ್ರ್ಯ ಮತ್ತೆ ಸ್ಥಾವರಕಿಂತ ಜಂಗಮಕ್ಕೆ ಹೆಚ್ಚು ಮನ್ನಣೆಯನ್ನ ಕೊಟ್ಟಂತಹ ಮಹಾಮಹಿಮರು ರೇಣುಕಾಚಾರ್ಯರು. ಅವರ ಜಯಂತಿಯನ್ನು ಕನ್ನಡ ಸಂಸ್ಕೃತಿ ಇಲಾಖೆಯಿಂದ ಕಳೆದ ಬಾರಿ ಚಾಮರಾಜನಗರದಲ್ಲಿ ಕೂಡಲ ಸಂಗಮ ಸ್ವಾಮೀಜಿಯವರನ್ನ ಕರೆಸಿ ವಿವಿಧ ಕಲಾ ತಂಡಗಳೊಂದಿಗೆ ಮೆರವಣಿಗೆ ಮಾಡುವುದರ ಮೂಲಕ ಅದ್ದೂರಿಯಾಗಿ ಆಚರಣೆ ಮಾಡಲಾಗಿತ್ತು.

ವೀರಶೈವ ಧರ್ಮ ಅನ್ನುವಂತಹ ಶಕ್ತಿ ವಿಶಿಷ್ಟ ಅದ್ವೈತ ಸಿದ್ಧಾಂತದ ಮೂಲಕ ಈ ವಿಚಾರಗಳನ್ನೆಲ್ಲ ಪರಂಪರಗತವಾಗಿ ಪ್ರಚಾರಕ್ಕೆ ತರುವುದರ ಮೂಲಕ ಧಾರ್ಮಿಕ ತತ್ವಗಳನ್ನು ಧಾರ್ಮಿಕ ನಿಷ್ಠೆಯಿಂದ ಧರ್ಮ ಪ್ರಚಾರಗಳನ್ನು ಮಾಡುವ ಮೂಲಕ ನಮ್ಮ ಶಿಸ್ತು ಬದ ಜೀವನ ಹೇಗೆ ಇರಬೇಕು ಎಂಬುದರ ಬಗ್ಗೆ ಮನವರಿಕೆಯನ್ನು ಮಾಡಿ ಕೊಟ್ಟಂತಹ ಮಹಾನ್ ಪುರುಷರು ಶ್ರೀ ರೇಣುಕಾಚಾರ್ಯ ಸ್ವಾಮಿಗಳು ಎಂದು ಸ್ಮರಿಸಿದರು.

ತಾಲ್ಲೂಕು ವೀರಶೈವ ಮಹಾಸಭಾ ಘಟಕ ಅಧ್ಯಕ್ಷ ಒಡೆಯರಪಾಳ್ಯ ಸೋಮಶೇಖರ್ ಅವರು ಮಾತನಾಡಿ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ. ಮಾನವ ಧರ್ಮಕ್ಕೆ ಜಯವಾಗಲಿ ಎಂಬ ಘೋಷಣೆಯೊಂದಿಗೆ ಸಮಾನತೆಯನ್ನು ಸಾರಿದರು. ಯಾವುದೇ ಒಂದು ಜಾತಿಗೆ ಸೀಮಿತವಾಗಿಲ್ಲ, ಎಲ್ಲರೂ ಒಂದೇ ಎಂಬ ತತ್ವವನ್ನು ಸಾರುತ್ತಾರೆ. ಅವರ ಮಾರ್ಗದರ್ಶನದಲ್ಲಿ ನಡೆದುಕೊಂಡು ಹೋದರೆ ನಮ್ಮ ಬದುಕಿನಲ್ಲಿ ಬೆಳಕನ್ನ ಚೆಲ್ಲಿದಂತೆ ಆಗುತ್ತದೆ ಎಂದು ತಿಳಿಸಿದರು.

ತಾಲ್ಲೂಕು ಪಂ. ಮಾಜಿ ಅಧ್ಯಕ್ಷ ಮುರುಡೇಶ್ವರ ಸ್ವಾಮಿ ಮಾತನಾಡಿ ತಾಲ್ಲೂಕು, ಜಿಲ್ಲಾ ಮಟ್ಟ, ರಾಜ್ಯ ಮಟ್ಟದಲ್ಲಿ ಆಚರಿಸುವಂತೆ ಸರ್ಕಾರ ಜಾರಿಗೆ ತಂದಿದೆ. ಕಳೆದ ಬಾರಿ ಚಾಮರಾಜನಗರದಲ್ಲಿ ಜಗದ್ಗುರು ರೇಣುಕಾಚಾರ್ಯ ಜಯಂತಿಯನ್ನ ಆಚರಿಸಲಾಯಿತು. ಕೊಳ್ಳೇಗಾಲದಲ್ಲಿ ಪೂರ್ವ ಭಾವಿ ಸಭೆ ನಡೆಸಲಾಯಿತು.

ಹನೂರಿನಲ್ಲಿ ಪೂರ್ವ ಭಾವಿ ಸಭೆ ಮಾಡಿಲ್ಲ ಮುಂದಿನ ದಿನಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಜಯಂತಿ ಆಚರಣೆ ಮಾಡಬೇಕು. ರೇಣುಕಾಚಾರ್ಯ ರವರ ಆಚಾರ, ವಿಚಾರ, ತತ್ವವನ್ನ ಜನಸಾಮಾನ್ಯರಲ್ಲಿ ಅರಿವು ಮೂಡಬೇಕು. ಯಾವುದೇ ಒಂದು ಜಾತಿಗೆ ಸೀಮಿತವಲ್ಲ, ಎಲ್ಲರೂ ಒಂದೆ ಎಂದು ಬಾವಿಸಿ ಎಲ್ಲ ಧರ್ಮದವರು ಅನುಸರಿಸುವಂತೆ ಮಾಡಬೇಕು.

ಈ ಸಂದರ್ಭದಲ್ಲಿ ಹೂಗ್ಯಂ ಮಠದ ಮಂಜು ಸ್ವಾಮಿಗಳು, ಮುರುಡೇಶ್ವರ ಸ್ವಾಮಿ, ಪ್ರಾಧಾನ ಕಾರ್ಯದರ್ಶಿ ಕುಮಾರ್, ಪಟ್ಟಣ ಘಟಕ ಅಧ್ಯಕ್ಷರು ಶಿವಕುಮಾರ್, ಆನಾಪುರ ಉಮೇಶ್, ಉದ್ದನೂರು ಸದಾಶೀವ ಮೂರ್ತಿ, ಜಗದೀಶ್, ಒಕ್ಕಲಿಗ ಸಂಘದ ಅಧ್ಯಕ್ಷ ನಾಗೇಂದ್ರ, ಸದಾಶಿವಮೂರ್ತಿ, ಜಗದೀಶ್, ರಾಜಣ್ಣ, ಪ್ರತಾಪ್, ಜಯಣ್ಣ, ಲೋಕೇಶ್, ಜಂಭು, ಜಯಣ್ಣ, ವಿನೋದ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಬಹಿರಂಗ ಚರ್ಚೆಗೆ ಆಹ್ವಾನ ನೀಡಿದ ಕಾಂಗ್ರೆಸ್ ಮುಖಂಡರಾದ ನಾರಾಯಣಮ್ಮ



**ಚಿಕ್ಕಬಳ್ಳಾಪುರ:** ನಗರದ 5ನೇ ವಾರ್ಡ್ ನ ಗ್ಯಾಸ್ ನಾಗರಾಜ್.ಜೆ ಶಾಸಕ ಪ್ರದೀಪ್ ಈಶ್ವರ್ ಹಾಗೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಬಗ್ಗೆ ಹಗುರವಾಗಿ ಮಾತನಾಡಿದ್ದನ್ನು ಪಕ್ಷದ ಮುಖಂಡಳಾಗಿ ಖಂಡಿಸಿದ್ದೇನೆ.

ಇದಕ್ಕೆ ಉತ್ತರ ನೀಡಬೇಕಾದ ಗ್ಯಾಸ್‌ನಾಗರಾಜ್ ಬದಲಿಗೆ ಮುಷ್ಟೂರಿನ ಗ್ರಾ.ಪಂ.ಸದಸ್ಯ ಶಿವಕುಮಾರ್, ಮತ್ತು ಹರೀಶ್ ಟೀಕೆ ಮಾಡಿರುವುದು ಸರಿಯಲ್ಲ ಎಂದು ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯೆ ನಾರಾಯಣಮ್ಮ ಕಿಡಿ ಕಾರಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆಸಿದ ಸುದ್ದಿಗೋಷ್ಟಿಯಲ್ಲಿ ಅವರು ಮಾತನಾಡಿದರು.

ಜನಪ್ರಿಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಗ್ಯಾರೆಂಟಿ ಯೋಜನೆಗಳ ಮೂಲಕ ದಲಿತ ಶೋಷಿತ ಸಮುದಾಯಗಳ ಏಳಿಗಾಗಿ ಶ್ರಮಿಸುತ್ತಿದ್ದಾರೆ.ಆರ್ಥಿಕ ತಜ್ಞರಾದ ಅವರ ಅನುಭವದಷ್ಟು ವಯಸ್ಸಿಲ್ಲದ ಗ್ಯಾಸ್ ನಾಗರಾಜ್ ಅಂಬೇಡ್ಕರ್ ಫೋಟೋ ಇಟ್ಕೊಂಡು ದಲಿತರಿಗೆ ಮೋಸ ಮಾಡ್ತಾರೆ ಅಂತ ಅವರನ್ನು ಹಗುರವಾಗಿ ಮಾತನಾಡಿದ್ದರಿಂದ ನಾನು ಮಾತನಾಡಿದ್ದೇನೆ.ನಮ್ಮ ಶಾಸಕ ಪ್ರದೀಪ್ ಈಶ್ವರ್ ಅವರು ದಲಿತರ ಏಳಿಗಾಗಿ ಸಾಕಷ್ಟು ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದು ಜನಪ್ರೀತಿಗೆ ಪಾತ್ರವಾಗಿದ್ದಾರೆ. ಇವರ ಬಗ್ಗೆ ಕೂಡ ಹಗುರವಾಗಿ ಮಾತನಾಡಿದ ಗ್ಯಾಸ್ ನಾಗರಾಜ್ ಸಾಮರ್ಥ್ಯ ಇದ್ದರೆ ಸ್ವಂತ ಹಣದಲ್ಲಿ ಬಡವರ ಸೇವೆ ಮಾಡಲಿ ಎಂದು ಹೇಳಿದರು. ಮುಷ್ಟೂರಿನ ಗ್ರಾಮಪಂಚಾಯಿತಿ ಸದಸ್ಯ ಶಿವಕುಮಾರ್ ನಾನು ಕುಡಿದು ಮಾತನಾಡುತ್ತೇವೆ ಎಂದು ಹೇಳಿದ್ದಾರೆ. ಅವರಿಗೆ ಹೇಳುತ್ತೇನೆ ನಿಮ್ಮ ಅಂಗಡಿಯಲ್ಲಿ ಮದ್ಯ ಮಾರಾಟ ಮಾಡುತ್ತಿರುವುದು, ಕುಡಿಸುವುದು ನಿಮಗೆ ಗೊತ್ತು. ನನಗಲ್ಲ.ನಾನು ಹರೀಶ್ ಎಂಬ ಎಳಸು ನನ್ನ ಆಭಿವೃದ್ಧಿ ಕೆಲಸದ ಬಗ್ಗೆ ಮಾತನಾಡಿದೆ. ನಾನು 87 ರಲ್ಲಿ ಜಿಲ್ಲಾ ಪಂಚಾಯತಿ ಸದಸ್ಯೆಯಾಗಿ ಏನು ಕೆಲಸ ಮಾಡಿದ್ದೇನೆ.ಎಷ್ಟು ರಸ್ತೆ,ಚರಂಡಿ ಮಾಡಿಸಿದ್ದೇನೆ ಎಂಬುದನ್ನು ಅವರ ತಾಯಿಗೆ ಕೇಳಿದರೆ ಗೊತ್ತಾಗುತ್ತದೆ ಎಂದ ಅವರು ನಾನು ಜಿ.ಪಂ.ಸದಸ್ಯೆ ಆಗಿದ್ದಾಗ ಈತನ ವಯಸ್ಸು ಎರಡೋ ಮೂರೋ ಇತ್ತು ಎಂದು ಗುಡುಗಿದರು.

ನನ್ನ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚಿಟಿಕೆ ಹಾಕಿ ಮಾತಾಡುವ ಹರೀಶ್ ಮುಷ್ಟೂರು ಗ್ರಾಮದಲ್ಲಿ ನೀನೇ ವೇದಿಕೆ ಸಿದ್ಧಮಾಡಿ ಚರ್ಚೆಗೆ ಕರೆದರೆ ವೇದಿಕೆಯಲ್ಲಿ ಬಂದು ನನ್ನ ಸಾಧನೆಗಳ ಬಗ್ಗೆ ಹೇಳುತ್ತೇನೆ ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆತರುವ ಧೈರ್ಯ ನಿನಗಿದೆಯೇ ಎಂದು ಪ್ರಶ್ನಿಸಿದರು.

ನಮ್ಮ ಗ್ರಾಮದ ಹಿರಿಯ ಮುಖಂಡರಾದ ನಾರಾಯಣಮ್ಮ ಅವರ ಬಗ್ಗೆ ಹಗುರವಾಗಿ ಕ್ಷುಲ್ಲಕವಾಗಿ ಮಾತನಾಡುವುದನ್ನು ನಿಲ್ಲಿಸಬೇಕು ಎಂದು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಮುನಿಕೃಷ್ಣಪ್ಪ ಹರೀಶ್ ಮತ್ತು ಶಿವಕುಮಾರ್ ಅವರಿಗೆ ಎಚ್ಚರಿಕೆ ನೀಡಿದರು.

ಈ ವೇಳೆ ಮಾಜಿ ಗ್ರಾಮ ಪಂಚಾಯತಿ ಸದಸ್ಯ ಮುನಿಕೃಷ್ಣಪ್ಪ,ಮುಖಂಡ ಶ್ರೀನಿವಾಸ, ಕಾಂಗ್ರೆಸ್ ಯುವ ಮುಖಂಡ ಡ್ರೈವರ್ ಶ್ರೀನಿವಾಸ್, ಕಾಂಗ್ರೆಸ್ ಹಿರಿಯ ಮುಖಂಡ ತಿರುಮಲಪ್ಪ, ಎಸ್ಡಿಎಂಸಿ ಮಾಜಿ ಅಧ್ಯಕ್ಷ ಗಂಗಾಧರ್, ಕಾಂಗ್ರೆಸ್ ಮುಖಂಡ ವೆಂಕಟರಾಯಪ್ಪ ಇದ್ದರು.

# ದೂರದರ್ಶನ ನೋಡುವುದು ಮಕ್ಕಳಿಗೆ ಜ್ಞಾನಾರ್ಜನೆಗೆ ಪೂರಕ

**ಶಿಡ್ಲಘಟ್ಟ:** ಬಾಲ್ಯದಲ್ಲಿ ಕಲಿತದ್ದು ಕಟ್ಟಡಕ್ಕೆ ಅಡಿಪಾಯದಂತೆ ಜೀವನದಲ್ಲಿ ಭವಿಷ್ಯಕ್ಕೆ ನೆರವಾಗುತ್ತದೆ ಮಕ್ಕಳಿಗೆ ಚಿಕ್ಕಂದಿನಿಂದಲೇ ಸಂಸ್ಕಾರ, ಮೌಲ್ಯಗಳನ್ನು ಕಲಿಸಬೇಕು, ಮನೆಯಲ್ಲಿ ದೂರದರ್ಶನ ನೋಡುವುದು ಮಕ್ಕಳಿಗೆ ಜ್ಞಾನಾರ್ಜನೆಗೆ ಪೂರಕವಾಗಿರಲಿ ಅವರು ದಾರಿತಪ್ಪುವಷ್ಟು ಅದನ್ನು ನೋಡದಿರಲಿ ಎಂದು ಆದಿಚುಂಚನಗಿರಿ ಚಿಕ್ಕಬಳ್ಳಾಪುರ ಶಾಖಾ ಮಠದ ಶ್ರೀಮಂಗಳನಾಥ ಸ್ವಾಮೀಜಿ ಅವರು ತಿಳಿಸಿದರು.



ತಾಲ್ಲೂಕಿನ ಸಾದಲಿ ಹೋಬಳಿಯ ದಿಬ್ಬೂರಹಳ್ಳಿಯ ಬಿಜಿಎಸ್ ಇಂಗ್ಲಿಷ್ ಶಾಲೆ ಮತ್ತು ವೆಂಕಟೇಶ್ವರ ಪ್ರೌಢಶಾಲೆಯಿಂದ ಶ್ರೀ ಆಂಜನೇಯಸ್ವಾಮಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಗ್ರಾಜುಯೇಷನ್ ಡೇ (ಪದವಿ ಪ್ರಧಾನ) ಹಾಗೂ "ಸ್ವಸ್ತಿ" ಎಂಬ ಮಾತಾ ಪಿತೃ ವಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಕ್ಕಳು ಶಾಲೆಯಲ್ಲಿ ಕಲಿಯುವುದಕ್ಕಿಂತ ಹೆಚ್ಚು ಮನೆ ಹಾಗೂ ಸಮಾಜದಿಂದ ಕಲಿಯುತ್ತವೆ ಹಾಗಾಗಿ ಉತ್ತಮ ನಡತೆ, ಆಚಾರ, ವಿಚಾರ ಮುಂತಾದ ಸಂಗತಿಗಳು ಸಿಗುವ ಹಾಗೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಹಿರಿಯರನ್ನು ಗೌರವಿಸುವ, ಕಲಿಯುವ, ತಿಳಿಯುವ ಗುಣ ಮಕ್ಕಳಿಗೆ ಕಲಿಸಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದರೊಂದಿಗೆ ಓದಲು ಒಳ್ಳೆಯ ವಾತಾವರಣವನ್ನು ಮನೆಯಲ್ಲಿ ಸೃಷ್ಟಿಸಿಕೊಡಬೇಕು ಎಂದರು.

ದಿಬ್ಬೂರಹಳ್ಳಿ ಪೊಲೀಸ್ ಠಾಣೆಯ ಪಿಎಸ್ಐ ಶ್ಯಾಮಲಾ ಮಾತನಾಡಿ, ತಾಯಿ ತಂದೆಗಿಂತ ಮಿಗಿಲಾದ ದೇವರಿಲ್ಲ, ಪ್ರತಿಯೊಬ್ಬ ಮಗುವೂ ತಾಯಿ ತಂದೆಯರನ್ನು ಗೌರವಿಸುವುದನ್ನು ಚಿಕ್ಕಂದಿನಿಂದಲೇ ಕಲಿತು ಮಾದರಿಯಾಗಿ, ಹಾಗೆಯೇ ಪೋಷಕರು ಸಹ ಮಕ್ಕಳಿಗೆ ಸಹನೆ ಹಾಗು ಗುರು ಹಿರಿಯರಿಗೆ ಕಲಿಸಬೇಕು ಎಂದರು.

ಇದೇ ವೇಳೆ ಕಾರ್ಯಕ್ರಮದಲ್ಲಿ ಪುಟಾಣಿ ಮಕ್ಕಳು ತಮ್ಮ ಮುದ್ದು ಮಾತಿನಲ್ಲಿ ನಿರೂಪಣೆ, ವಿವರಣೆ, ಪರಿಚಯ ಮತ್ತು ವಂದನೆ ನುಡಿಗಳನ್ನು ಹೇಳಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಶಾಲೆಗೆ ತಂದೆ ತಾಯಿಯನ್ನು ಕರೆ ತಂದಿದ್ದ ಪುಟಾಣಿ ಮಕ್ಕಳು ಅವರನ್ನು ಖುರ್ಚಿ ಮೇಲೆ ಕೂಡಿಸಿ ತಾಯಿ ತಂದೆಯರ ಪಾದ ತೊಳೆದು ಪುಷ್ಪ ಸಮರ್ಪಿಸಿ ನಮಸ್ಕರಿಸಿದರು.

ಪುಟಾಣಿ ಮಕ್ಕಳಿಂದ ನಿರೂಪಣೆ ಹಾಗೂ ಪದವಿ ಪ್ರಧಾನದ ಪ್ರತಿಜ್ಞಾ ಬೋಧನೆ ಮತ್ತಿತರ ಚಟುವಟಿಕೆಗಳು ವಿಶೇಷವಾಗಿತ್ತು.ವ್ಯಾಸಂಗ ಮುಗಿಸಿದ ಮಕ್ಕಳು ಸ್ವಾಮೀಜಿಯವರಿಂದ ಪ್ರಮಾಣಪತ್ರ ಸ್ವೀಕರಿಸಿದರು. ಪುಟಾಣಿಗಳು ವಿವಿಧ ನೃತ್ಯ ಮಾಡುವುದರೊಂದಿಗೆ ಕಾರ್ಯಕ್ರಮದಲ್ಲಿದ್ದ ಪೋಷಕರು ಹಾಗು ಶಿಕ್ಷಕರ ಮನ ತಣಿಸಿದರು.

ಈ ಸಂದರ್ಭದಲ್ಲಿ ಬಿಜಿಎಸ್ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಎನ್.ಶಿವರಾಮರೆಡ್ಡಿ, ಬಿಜಿಎಸ್ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಕೆ.ಮಹದೇವ್, ಮುಖಂಡರಾದ ಡಾ.ಧನಂಜಯರೆಡ್ಡಿ, ರಾಯಪ್ಪನಹಳ್ಳಿ ಅಶ್ವಥ್ ನಾರಾಯಣ ರೆಡ್ಡಿ, ದಿಬ್ಬೂರಹಳ್ಳಿ ಡಿ.ಎಸ್.ಎನ್. ರಾಜಣ್ಣ ಮುಂತಾದವರು ಹಾಜರಿದ್ದರು.

# ಹಕ್ಕಿ ಜ್ವರ: ಮೃತ ಕೋಳಿಗಳ ಮಾದರಿ ಪ್ರಯೋಗಾಲಯಕ್ಕೆ ರವಾನೆ

**ಚಿಕ್ಕಬಳ್ಳಾಪುರ:** ನಗರದಲ್ಲಿ ಬುಧವಾರ ಎರಡು ನಾಟಿಕೋಳಿ ಮೃತಪಟ್ಟಿದ್ದು, ಪಶು ಸಂಗೋಪನಾ ಇಲಾಖೆಯು ಕೋಳಿಗಳ ಮಾದರಿಯನ್ನು ಬೆಂಗಳೂರಿನ ಹೆಬ್ಬಾಳ ಪ್ರಯೋಗಾಲಯಕ್ಕೆ ರವಾನಿಸಿದೆ.



ಈ ಕೋಳಿಗಳು ಹಕ್ಕಿ ಜ್ವರ ದಿಂದ ಮೃತಪಟ್ಟಿವೆಯೇ ಅಥವಾ ಬೇರೆ ಯಾವುದಾದರೂ ಕಾರಣದಿಂದ ಮೃತಪಟ್ಟಿವೆಯೇ ಎಂದು ದೃಢಪಡಿಸಿಕೊಳ್ಳಲು ಕೋಳಿಗಳ ಮಾದರಿಯನ್ನು ಪರೀಕ್ಷೆಗೆ ಕಳುಹಿಸಿದ್ದೇವೆ ಎಂದು ಪಶುಸಂಗೋಪನಾ ಇಲಾಖೆಉಪನಿರ್ದೇಶಕ ರಂಗಪ್ಪ ಪತ್ರಿಕೆಗೆ ತಿಳಿಸಿದರು.

ಬೇಸಿಗೆಯಾದ ಕಾರಣ ಕೋಳಿಗಳು ಬಿಸಿಲಿನ ಧಗೆಯಿಂದ ಮೃತಪಟ್ಟಿರಬಹುದು. ಇಲ್ಲವೇ ಬೇರೆಕಾಯಿಲೆ ಯಿಂದ ಮೃತಪಟ್ಟಿರುವ ಸಾಧ್ಯತೆಯೂ ಇದೆ ಎಂದರು.

ನಗರದ 21ನೇ ವಾರ್ಡ್‌ನಶಾಂತಿನಗರದ ನೂರ್ ಜಾನ್ ಎಂಬುವರು ಸಾಕಿದ್ದ ಕೋಳಿಗಳನ್ನುತೀರಾ ಕಿರಿದಾದ ಪಂಜರದಲ್ಲಿಹಾಕಿಡಲಾಗಿತ್ತು. ಎರಡು ಕೋಳಿ ಪಂಜರದಲ್ಲಿ ಮೃತಪಟ್ಟ ಮಾಹಿತಿಯನ್ನು ಪಕ್ಕದ ಮನೆಯವರು ಪಶುಸಂಗೋಪನಾ ಇಲಾಖೆಗೆ ನೀಡಿದ್ದರು. ತಾಲ್ಲೂಕಿನ ವರದಹಳ್ಳಿಯಲ್ಲಿಹಕ್ಕಿಜ್ವರದಿಂದ 40ಕ್ಕೂ ಹೆಚ್ಚುಕೋಳಿ ಮೃತಪಟ್ಟಿದ್ದವು. ನಂತರ ಗ್ರಾಮದಲ್ಲಿದ್ದ 400ಕ್ಕೂ ಹೆಚ್ಚುನಾಟಿಕೋಳಿಗಳನ್ನು ಜ್ವರದ ಶಂಕೆ ಹಿನ್ನೆಲೆಯಲ್ಲಿ ವಧೆ ಮಾಡಲಾಗಿತ್ತು.

# ಬಾಣಂತಿ ಸಾವು: ಕೂಸು ಅನಾಥ

ಚಿಕ್ಕಬಳ್ಳಾಪುರ: 9 ದಿನಗಳ ಗಂಡು ಮಗುವನ್ನು ಬಿಟ್ಟು ಬಾಣಂತಿ ಅನಾರೋಗ್ಯದಿಂದ ಮೃತಪಟ್ಟಿರುವ ಘಟನೆ ಚಿಂತಾಮಣಿ ತಾಲ್ಲೂಕಿನ ಚೊಕ್ಕರೆಡ್ಡಿಹಳ್ಳಿಯಲ್ಲಿ ನಡೆದಿದೆ.

ಕುಟುಂಬ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿತ್ತು. ಸ್ಥಳದಲ್ಲಿ ಇದ್ದವರ ಕಣ್ಣಾಲಿಗಳಲ್ಲಿಯೂ ನೀರು ಜಿನುಗಿತ್ತು. ಗುಡಿಬಂಡೆ ತಾಲ್ಲೂಕಿನ ಅಪ್ಪಿರೆಡ್ಡಿಪಲ್ಲಿ ಗ್ರಾಮದ ಅನುಶ್ರೀ ಅವರು ಚಿಂತಾಮಣಿ ತಾಲ್ಲೂಕಿನ ಚೊಕ್ಕರೆಡ್ಡಿಹಳ್ಳಿಯ ಶೀನಾಥ್ ಅವರನ್ನು ವಿವಾಹವಾಗಿದ್ದರು. ಮಾರ್ಚ್ 3ರಂದು ಚಿಕ್ಕಬಳ್ಳಾಪುರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಹೆರಿಗೆಗೆ ದಾಖಲಾಗಿದ್ದರು.4ರಂದು ಅವರಿಗೆ 2.8 ಕೆ.ಜಿ ತೂಕದ ಗಂಡು ಮಗು ಜಪಿಸಿತ್ತು.ಐದು ದಿನ ಆಸ್ಪತ್ರೆಯಲ್ಲಿದ್ದ ಅವರು ನಂತರ ಮನೆಗೆ ತೆರಳಿದ್ದರು. ಮಾರ್ಚ್ 10ರಂದು ಜ್ವರ ಮತ್ತು ವಾಂತಿಯಾಗಿದ್ದು, ಅವರು ಮತ್ತೆ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಾಗಿದ್ದಾರೆ.11ರಂದು ಉಸಿರಾಟದ ಸಮಸ್ಯೆ ಕಾಣಿಸಿಕೊಂಡಿತ್ತು. ಆಗ ಹೃದಯ ಸಂಬಂಧಿ ಸಮಸ್ಯೆ ಇರುವುದು ಪರೀಕ್ಷೆಯಲ್ಲಿ ದೃಢಪಟ್ಟಿದೆ. ನಂತರ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗೆ ಕಳುಹಿಸಿಕೊಡಲಾಯಿತು. ಆದರೆ ಅವರು ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

# ಮಂಡಿಬೆಲೆ ಗ್ರಾ.ಪಂ.ಗೆ ಇಓ ಭೇಟಿ



**ದೇವನಹಳ್ಳಿ:** ತಾಲೂಕಿನ ಮಂಡಿಬೆಲೆ ಗ್ರಾಪಂ.ವ್ಯಾಪ್ತಿಯಲ್ಲಿ ಶಾಸಕರಿಗೆ ಸಾರ್ವಜನಿಕರು ಕುಡಿಯುವ ಆಹವಾಲು ಸಲ್ಲಿಸಿದ ಹಿನ್ನಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ BESCOM AEE ರವರ ಜೊತೆ ಮಾತನಾಡಿ ಅಧಿಕಾರಿಗಳನ್ನು ಕರೆಯಿಸಿ ವಿದ್ಯುತ್ ಸಂಪರ್ಕ ಮತ್ತು ಮೀಟರ್ ಆಳವಡಿಸಿ ಬೋರ್ವೇಲ್ ನಿಂದ ಓವರ್ ಹೆಡ್ ಟ್ಯಾಂಕ್‌ಗೆ ಸಂಪರ್ಕ ಕಲ್ಪಿಸಿ ಕುಡಿಯುವ ನೀರು ಸಮರ್ಪಕವಾಗಿ ಬಿಡಲು ಅನುವು ಮಾಡಿಕೊಟ್ಟರು.

ಊರಿನ ಜನರು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಧನ್ಯವಾದಗಳು ತಿಳಿಸಿದರು ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯರು ಮಂಜುಳಮ್ಮ ನಾರಾಯಣಸ್ವಾಮಿ, ದೇವರಾಜ್ ಆರ್‌ಡಬ್ಲ್ಯೂಎಸ್, ಬೆಸ್ಕಾಂ ಅಧಿಕಾರಿಗಳು ಲೈನ್ ಮ್ಯಾನ್, ಕಾರ್ಯದರ್ಶಿ ಸುಜಾತ ಖಿಂಇ,ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಪದಗ್ರಹಣ ಹಾಗೂ ಯುವ ಸಂಕಲ್ಪ; ಪೂರ್ವಭಾವಿ ಸಭೆ

**ಮಾಲೂರು:** ಕೋಲಾರ ನಗರದ ಹೊರವಲಯ ಖಾಸಗಿ ಹೋಟೆಲ್ ನಲ್ಲಿ ಕೋಲಾರ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯ ಯುವ ಕಾಂಗ್ರೆಸ್ ಉಪಾಧ್ಯಕ್ಷೆ ದಿವ್ಯ ಕೆ. ಆರ್ ರವರ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ ಗೌಡ ಕೆ ಎನ್‌ರವರ ನೇತೃತ್ವದಲ್ಲಿ ಯುವ ಕಾಂಗ್ರೆಸ್‌ನ ರಾಜ್ಯಾಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು ಹಾಗೂ ಅಧ್ಯಕ್ಷರುಗಳ ಪದಗ್ರಹಣ ಹಾಗೂ ಯುವ ಸಂಕಲ್ಪ ಸಮಾರಂಭದ ಪೂರ್ವಭಾವಿ ಸಭೆ ನಡೆಯಿತು.



ಈ ಸಮಯದಲ್ಲಿ ಯುವ ಕಾಂಗ್ರೆಸ್ ಉಪಾಧ್ಯಕ್ಷ ಲಕ್ಕೂರು ರಾಜೇಶ್, ತಾಲ್ಲೂಕು ಅಧ್ಯಕ್ಷ ಎಂ.ಎಂ.ತನ್ವೀರ್, ಮಾಸ್ತಿ ಬ್ಲಾಕ್ ಅಧ್ಯಕ್ಷ ದೊಡ್ಡಿ ಡಿ.ಟಿ.ವಸಂತ್, ಕಸಬಾ ಬ್ಲಾಕ್ ಅಧ್ಯಕ್ಷ ಅಕ್ಷಯ್, ಉಪಾಧ್ಯಕ್ಷರಾದ ಮಣಿಶೆಟ್ಟಹಳ್ಳಿ ನವೀನ್ ,ಮಾಸ್ತಿ ಪ್ರವೀಣ್, ಸಂಜು ಮೋನಿಷ್, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರು, ಉಪಾಧ್ಯಕ್ಷರು, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು, ವಿಧಾನಸಭಾ ಅಧ್ಯಕ್ಷರುಗಳು, ಬ್ಲಾಕ್ ಅಧ್ಯಕ್ಷರುಗಳು ಹಾಗೂ ಉಪಾಧ್ಯಕ್ಷರು ಹಾಜರಿದ್ದರು.

# ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಯುವಶಕ್ತಿ ಮಾಲೂರು ಸದಾ ಸಿದ್ಧ

**ಮಾಲೂರು:** ಯುವಶಕ್ತಿ ಮಾಲೂರು ವತಿಯಿಂದ ತಾಲ್ಲೂಕಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಪರಿಕರಗಳ ವಿತರಣೆ ಮಾಡುತ್ತಿದ್ದು, ಇಂದು ಮಾಸ್ತಿ ಹೋಬಳಿಯ ರಾಜೇನಹಳ್ಳಿ, ಹಸಾಂಡಹಳ್ಳಿ, ಕೆಸರಗೆರೆ, ದಿನ್ನಹಳ್ಳಿಯ ಶಾಲೆಗಳ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ವಿತರಣೆ ಮಾಡಿದರು.

ಯುವಶಕ್ತಿ ಮಾಲೂರು ಸಮಿತಿ ಖಜಾಂಚಿ ಬೆಳ್ಳಾವಿ ಮಂಜುನಾಥ್ ಮಾತನಾಡಿ, ನಮ್ಮ ಸಮಿತಿ ವತಿಯಿಂದ ಸರ್ಕಾರಿ ಶಾಲೆಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಸಹಕಾರ ನೀಡುತ್ತಾ ಬಂದಿದ್ದು, ಕಳೆದ ಬಾರಿ ಕನ್ನಡಕೆ ಸಂಬಂಧಿಸಿದಂತೆ ಸಾಮಾನ್ಯ ಜ್ಞಾನ ಪರೀಕ್ಷೆ ಮಾಡಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಲಾಗಿತ್ತು, ನಂತರ ವಿವಿಧ ರೀತಿಯಲ್ಲಿ ಸಹಕಾರ ನೀಡುತ್ತಾ ಬಂದಿದ್ದು, ಇದೀಗ ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಪರಿಕರಗಳನ್ನು ವಿತರಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕಾರ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಟೇಕಲ್ ಬಾಬು, ಮುನೆಯ್ಯ ಯುವಶಕ್ತಿ ಮಾಲೂರು ಸಮಿತಿಯ ಅಧ್ಯಕ್ಷ ಜಕ್ಕಸಂದ್ರ ಸಂತೋಷ್ ಕುಮಾರ್, ಉಪಾಧ್ಯಕ್ಷರ ಮಡಿವಾಳ ಭದ್ರ, ಅನಿಲ್ ಕುಪ್ಪೂರು, ರಾಜೇನಹಳ್ಳಿ ಶಿವಕುಮಾರ್, ಗೊಲ್ಲಹಳ್ಳಿ ಮಾದೇಶ್ , ತಿಪ್ಪಸಂದ್ರ ಹನುಮಂತು, ಸುರೇಶ್ ಇದ್ದರು



# ಮಂತ್ರಾಲಯ ಪರಿಮಳ ಪ್ರಶಸ್ತಿ ಪ್ರಧಾನ

**ಶಿಡ್ಲಘಟ್ಟ:** ವಿಧಾನಸಭಾ ಕ್ಷೇತ್ರದ ಯುವ ನಾಯಕ ಎಚ್. ಆರ್.ಸಂದೀಪ್ ರೆಡ್ಡಿ ಅವರಿಗೆ ಮಂತ್ರಾಲಯದಲ್ಲಿ "ಮಂತ್ರಾಲಯ ಪರಿಮಳ ಪ್ರಶಸ್ತಿ" ಪ್ರಧಾನ ಮಾಡಲಾಗಿದೆ ಕ್ಷೇತ್ರದ ಮಾಜಿ ಶಾಸಕರಾದ ದಿವಂಗತ ಎಸ್.ಮುನಿಸ್ವಾಮಪ್ಪ ರವರ ಮೊಮ್ಮಗ ಹಾಗು ಮಾನವ ಹಕ್ಕು ಮತ್ತು ಸಂಸ್ಕೃತಿ ರಕ್ಷಣಾ ಸಮಿತಿ ಗೌರವಾಧ್ಯಕ್ಷರಾದ ಎಚ್.ಆರ್.ಸಂದೀಪ್ ರೆಡ್ಡಿ ರವರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿ ಹಾಗು ಬೆಂಗಳೂರಿನಲ್ಲಿ ಮಾಡಿರುವಂಥಹ ಸಮಾಜಮುಖಿ ಕಾರ್ಯಗಳನ್ನು ಗುರ್ತಿಸಿ ಅವರ ತಾತ ಮಾಜಿ ಶಾಸಕಾರದ ದಿವಂಗತ ಎಸ್. ಮುನಿಶ್ಯಾಮಪ್ಪ ಅವರ



ಹೆಸರನ್ನು ಉಳಿಸಿ, ಬೆಳೆಸಲು ಪಡುತ್ತಿರುವ ಶ್ರಮವನ್ನು ಗುರುತಿಸಿ ಪುಣ್ಯಕ್ಷೇತ್ರ ಮಂತ್ರಾಲಯದಲ್ಲಿ ಶ್ರೀಸುಭುದೇಂದ್ರ ತೀರ್ಥರ ಸಾನಿಧ್ಯದಲ್ಲಿ ಯುವನಾಯಕ ಎಚ್.ಆರ್. ಸಂದೀಪ್ ರೆಡ್ಡಿ ಅವರಿಗೆ ""ಮಂತ್ರಾಲಯ ಪರಿಮಳ ಪ್ರಶಸ್ತಿ"" ನೀಡಿ ಗೌರವಿಸಲಾಗಿದೆ.

ಮಂತ್ರಾಲಯದಲ್ಲಿ ಈ ಬಾರಿ ನಡೆದ ಶ್ರೀಮಂತ್ರಾಲಯ ಪರಿಮಳ ಪ್ರಶಸ್ತಿ-2025ರ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯದಿಂದ 25 ಮಂದಿಯನ್ನು ಆಯ್ಕೆ ಮಾಡಿದ್ದು, ಶಿಡ್ಲಘಟ್ಟ ತಾಲ್ಲೂಕಿನಿಂದ ಎಚ್.ಆರ್.ಸಂದೀಪ್ ರೆಡ್ಡಿ ಅವರನ್ನು ಆಯ್ಕೆ ಮಾಡಿ 'ಮಂತ್ರಾಲಯ ಪರಿಮಳ ಪ್ರಶಸ್ತಿ' ನೀಡಿ ಗೌರವಿಸಿರುವುದು ಅವರ ಅಭಿಮಾನಿಗಳಿಗೆ ಹಾಗು ಕ್ಷೇತ್ರದ ಜನತೆಗೆ ಸಂತಸ ತಂದಿದೆ.

# ಮಾರಿಷಸ್ ಪ್ರವಾಸ ಮುಗಿಸಿ ಭಾರತಕ್ಕೆ ಮರಳಿದ ಮೋದಿ

**ನವದೆಹಲಿ:** ಎರಡು ದಿನಗಳ ಪ್ರವಾಸಕ್ಕಾಗಿ ಮಾರಿಷಸ್‌ಗೆ ತೆರಳಿದ್ದ ಪ್ರಧಾನಿ ನರೇಂದ್ರ ಮೋದಿ ಇಂದು ರಾಷ್ಟ್ರ ರಾಜಧಾನಿ ನವದೆಹಲಿಗೆ ಮರಳಿದರು. ಮಾರಿಷನ್‌ನ ರಾಷ್ಟ್ರೀಯ ದಿನದ ಮುಖ್ಯ ಅತಿಥಿಯಾಗಿ ಅವರು ಪಾಲ್ಗೊಂಡಿದ್ದರು. 2015ರಲ್ಲೂ ಕೂಡ ಆಹ್ವಾನದ ಮೇರೆಗೆ ಮೋದಿ ಮಾರಿಷಸ್‌ಗೆ ಭೇಟಿ ನೀಡಿದ್ದರು.



ಮಾರಿಷಸ್ ಪ್ರಧಾನಿ, ಜನರು ಮತ್ತು ಮಾರಿಷಸ್ ಸರ್ಕಾರದ ಪ್ರೀತಿಗಾಗಿ ಧನ್ಯವಾದ ಸಲ್ಲಿಸಿ ಮೋದಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಹಾಗೆಯೇ ತಮ್ಮ ಪ್ರವಾಸದ ವಿಡಿಯೋವನ್ನು ಹಂಚಿಕೊಂಡಿದ್ದಾರೆ.

ಈ ಪ್ರವಾಸದ ವೇಳೆ ಮೋದಿ ಮಾರಿಷಸ್‌ನಲ್ಲಿರುವ ಭಾರತೀಯ ಸಮುದಾಯದವರು ಹಾಗೂ ಮಾರಿಷಸ್ ನಾಯಕರ ಜೊತೆಗೆ ಸಭೆ ನಡೆಸಿದ್ದರು. ಅಲ್ಲಿನ ಗಂಗಾ ತಲಾವೊಗೆ ಭೇಟಿ ನೀಡಿ, ಮಹಾಕುಂಭದಿಂದ ತೆಗೆದುಕೊಂಡು ಹೋಗಿದ್ದ ಪವಿತ್ರ ಗಂಗಾ ಜಲವನ್ನು ಅದಕ್ಕೆ ಮಿಶ್ರಣ ಮಾಡಿದ್ದರು.

"ಮಾರಿಷಸ್‌ನ ಗಂಗಾ ತಲಾವೊನಲ್ಲಿ ತ್ರಿವೇಣಿ ಸಂಗಮದ ಪವಿತ್ರ ಜಲವನ್ನು ಅರ್ಪಿಸಿದೆ. ಜಗತ್ತಿನಲ್ಲಿರುವ ಲಕ್ಷಾಂತರ ಹಿಂದುಗಳಿಗೆ ತ್ರಿವೇಣಿ ಸಂಗಮದ ಜಲ ವಿಶೇಷವಾಗಿದೆ. ಈ ಬಾರಿಯ ಮಹಾ ಕುಂಭಮೇಳ ಮಾರಿಷಸ್ ಸೇರಿದಂತೆ ಜಗತ್ತಿನ ಎಲ್ಲೆಡೆಯ ಯಾತ್ರಿಕರನ್ನು ಸೆಳೆದಿದೆ. ಈ ನೀರನ್ನು ಸೇರಿಸುವ ಮೂಲಕ ಗಂಗಾ, ಯಮುನಾ ಮತ್ತು ಸರಸ್ವತಿಯ ಆಶೀರ್ವಾದ ನಿಮ್ಮ ಮೇಲೆ ಸದಾ ಉಳಿಯಲಿ" ಎಂದು ಮೋದಿ ಆಶಿಸಿದ್ದಾರೆ.

ಈ ಭೇಟಿಯಲ್ಲಿ ಪ್ರಧಾನಿಗೆ ಮಾರಿಷಸ್ ದೇಶದ ಅತ್ಯುನ್ನತ ಗೌರವ 'ಗ್ರಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದ ಸ್ಟಾರ್ ಆಯಂಡ್ ಕೀ ಆಫ್‌ದ ಇಂಡಿಯನ್ ಓಷನ್ ಪ್ರಶಸ್ತಿ' ನೀಡಿ ಪುರಸ್ಕರಿಸಲಾಯಿತು.

ಮಾರಿಷಸ್‌ನ ಅತ್ಯುನ್ನತ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪ್ರಧಾನಿ ಮೋದಿ, ಹೃದಯಪೂರ್ವಕ ಕೃತಜ್ಞತೆ ಸಲ್ಲಿಸಿದರು. "ಇದು ಕೇವಲ ನನಗೆ ನೀಡುತ್ತಿರುವ ಗೌರವವಲ್ಲ. 1.4 ಬಿಲಿಯನ್ ಭಾರತೀಯರಿಗೆ ಸಂದ ಗೌರವ. ಭಾರತ ಮತ್ತು ಮಾರಿಷಸ್ ನಡುವಿನ ಶತಮಾನಗಳಷ್ಟು ಹಳೆಯದಾದ ಸಂಸ್ಕೃತಿ ಮತ್ತು ಐತಿಹಾಸಿಕ ಬಂಧಗಳಿಗೆ ನೀಡುತ್ತಿರುವ ಕೊಡುಗೆ. ಪ್ರಾದೇಶಿಕ ಶಾಂತಿ, ಪ್ರಗತಿ ಮತ್ತು ಸುಸ್ಥಿರ ಅಭಿವೃದ್ಧಿಯ ಬದ್ಧತೆಯನ್ನು ಇದು ತಿಳಿಸುತ್ತದೆ. ಭರವಸೆ ಮತ್ತು ಜಾಗತಿಕ ದಕ್ಷಿಣದ ಆಕಾಂಕ್ಷೆಗಳ ಸಂಕೇತವಾಗಿದೆ" ಎಂದರು.

ಪ್ರವಾಸದಲ್ಲಿ ಮೋದಿ ಮತ್ತು ಮಾರಿಷಸ್ ಪ್ರಧಾನಿ ನವೀನ್ ಚಂದ್ರ ರಾಮ್‌ಗೋಲಂ ಜಂಟಿಯಾಗಿ ಅಟಲ್ ಬಿಹಾರಿ ವಾಜಪೇಯಿ ಸಾರ್ವಜನಿಕ ಸೇವೆ ಮತ್ತು ಅವಿಷ್ಕಾರ ಸಂಸ್ಥೆ ಉದ್ಘಾಟಿಸಿದರು. ಜೊತೆಗೆ, ದ್ವಿಪಕ್ಷೀಯ ಸಂಬಂಧ ಅಭಿವೃದ್ಧಿ ನಿಟ್ಟಿನಲ್ಲಿ ಹಲವು ಒಪ್ಪಂದಗಳಿಗೆ ಸಹಿ ಹಾಕಿದರು.

ಮಾರಿಷಸ್ ಪ್ರಧಾನಿ ಆಯೋಜಿಸಿದ್ದ ಔತಣಕೂಟದಲ್ಲಿ ಭಾಗಿಯಾದ ಮೋದಿ, ಎರಡು ದೇಶಗಳ ನಡುವಿನ ಸಂಬಂಧದಲ್ಲಿ ಯಾವುದೇ ಗಡಿಯಲ್ಲ. ಎರಡು ದೇಶದ ಜನರಿಗೆ ಹಾಗೂ ಶಾಂತಿ ಮತ್ತು ಭದ್ರತೆಗೆ ಕೆಲಸ ಮಾಡುವುದಾಗಿ ತಿಳಿಸಿದ್ದಾರೆ. ಮಾರಿಷಸ್‌ನಲ್ಲಿರುವ ಭಾರತೀಯ ಸಮುದಾಯದ ಕಾರ್ಯಕ್ರಮದಲ್ಲೂ ಭಾಗಿಯಾಗಿ ಮೋದಿ ಮಾತನಾಡಿದರು.

# ಪುಕ್ಕಟ್ಟೆ ಕೊಡುಗೆಗಳಿಂದ ಬಡತನ ನಿವಾರಣೆ ಅಸಾಧ್ಯ: ಎನ್.ಆರ್.ನಾರಾಯಣ ಮೂರ್ತಿ

**ಮುಂಬೈ:** 'ಕೇವಲ ಉಚಿತ ಕೊಡುಗೆಗಳನ್ನು ಕೊಡುವುದರಿಂದ ದೇಶದಲ್ಲಿನ ಬಡತನವು ನಿರ್ಮೂಲನೆ ಅಸಾಧ್ಯ. ಉದ್ಯೋಗ ಸೃಷ್ಟಿಯಿಂದ ಮಾತ್ರವೇ ಅಭಿವೃದ್ಧಿ ಹೊಂದಲು ಆಗುವುದು' ಎಂದು ಇನ್ಫೋಸಿಸ್ ಸಹ ಸಂಸ್ಥಾಪಕ ಎನ್.ಆರ್.ನಾರಾಯಣ ಮೂರ್ತಿ ಹೇಳಿದ್ದಾರೆ. ಈ ಮೂಲಕ ಉಚಿತ ಕೊಡುಗೆಗಳ ವಿರುದ್ಧ ದನಿ ಎತ್ತಿದ್ದಾರೆ. ಇಲ್ಲಿ ನಡೆದ ಟೈಕೂನ್ ಮುಂಬೈ 2025 ಸಮಾವೇಶದಲ್ಲಿ ಮಾತನಾಡಿದ ಮೂರ್ತಿ, 'ಜೊತೆಗೆ ಕೇವಲ ಉಚಿತ ಕೊಡುಗೆಗಳನ್ನು ಕೊಟ್ಟರೆ ಬಡತನ ಮಾಯವಾಗುತ್ತದೆ ಎಂದು ಅಂದುಕೊಂಡಿದ್ದರೆ, ಅದು ಅಸಾಧ್ಯ. ಇಲ್ಲಿವರೆಗೆ ಈ ರೀತಿ ಉಚಿತ ಕೊಡುಗೆಗಳನ್ನು ಕೊಟ್ಟಿರುವ ಯಾವ ದೇಶವೂ ಬಡತನದಿಂದ ಹೊರಬಂದಿಲ್ಲ' ಎಂದರು.



'ಇದರ ಬದಲು, ನಾವು ಹೆಚ್ಚೆಚ್ಚು ಉದ್ಯಮಗಳನ್ನು ಶುರು ಮಾಡಬೇಕು. ಈ ಮೂಲಕ ಹೆಚ್ಚು ಉದ್ಯೋಗ ಸೃಷ್ಟಿಸಬೇಕು. ಹೀಗಾದಲ್ಲಿ ಬಡತನವು ಬೆಳಗಿನ ಇಬ್ಬನಿಯಂತೆ ಮಾಯವಾಗುತ್ತದೆ ಎಂದು ಅಭಿಪ್ರಾಯ ಹೊರಹಾಕಿದರು. ಇನ್ನು 200 ಯೂನಿಟ್ ಉಚಿತ ವಿದ್ಯುತ್ ಉದಾಹರಣೆ ನೀಡಿದ ಮೂರ್ತಿ, ಉಚಿತ ವಿದ್ಯುತ್‌ನಿಂದ ಮಕ್ಕಳಲ್ಲಿ ಓದುವ ಹವ್ಯಾಸ ಹೆಚ್ಚಾಗಿದೆಯೇ ಅಥವಾ ಮಕ್ಕಳ ಮೇಲೆ ಪೋಷಕರ ಕಾಳಜಿ ಹೆಚ್ಚಿದೆಯೇ ಎಂಬುದನ್ನು ಅರಿಯಲು 6 ತಿಂಗಳಿಗೊಮ್ಮೆ ಸಮೀಕ್ಷೆ ನಡೆಸಬಹುದು ಎಂದು ಸಲಹೆ ನೀಡಿದರು.

ಪ್ರಸ್ತುತ, ಭಾರತವು ಮಾಸಿಕ ನಗದು ವರ್ಗಾವಣೆಯ ಮೂಲಕ 80 ಕೋಟಿ ಜನರಿಗೆ ಆಹಾರವನ್ನು ನೀಡುತ್ತಿದೆ. ಉಚಿತ ಕೊಡುಗೆಗಳು ಮತ್ತು ಅವುಗಳ ವೆಚ್ಚಗಳ ಕುರಿತು ಚರ್ಚೆ ನಡೆಯುತ್ತಿರುವಾಗ ಇನ್ಫೋಸಿಸ್ ನಾರಾಯಣ ಮೂರ್ತಿ ಅವರ ಈ ಹೇಳಿಕೆ ಬಂದಿದೆ. ಆ ಬಳಿಕ ಅವರು ರಾಜಕೀಯ ಅಥವಾ ಆಡಳಿತದ ಬಗ್ಗೆ ಹೆಚ್ಚು ತಿಳಿದಿಲ್ಲ ಎಂದು ಸ್ಪಷ್ಟಪಡಿಸಿದರು, ಆದರೆ ನೀತಿ ಚೌಕಟ್ಟಿನ ದೃಷ್ಟಿಕೋನದಿಂದ ಕೆಲವು ಶಿಫಾರಸುಗಳನ್ನು ನೀಡಿದರು.

# ತಿರುಮಲ ಅನ್ನಪ್ರಸಾದ ಟ್ರಸ್ಟ್‌ಗೆ ಹರಿದು ಬಂದ ದೇಣಿಗೆ

**ಆಂಧ್ರಪ್ರದೇಶ:** ತಿರುಮಲ ದೇಗುಲಕ್ಕೆ ಆಗಮಿಸುವ ಭಕ್ತರಿಗೆ ಶ್ರೀ ವೆಂಕಟೇಶ್ವರ ಅನ್ನಪ್ರಸಾದಂ ಟ್ರಸ್ಟ್‌ನಿತ್ಯ ಉಚಿತ ಅನ್ನದಾನ ಸೇವೆ ನೀಡುತ್ತಿರುವುದು ನಿಮಗೆಲ್ಲ ಗೊತ್ತೇ ಇದೆ. ಇದೀಗ ಈ ಟ್ರಸ್ಟ್‌ಗೆ 2,200 ಕೋಟಿ ರೂಗೆ ಮೀರಿ ದೇಣಿಗೆ ಹರಿದು ಬಂದಿದೆ. 1984ರಲ್ಲಿ ಮಾಜಿ ಮುಖ್ಯಮಂತ್ರಿ ಎನ್?ಟಿ ರಾಮ ರಾವ್ ವೆಂಕಟೇಶ್ವರ ನಿತ್ಯ ಅನ್ನದಾನಂ ಯೋಜನೆ ಅಡಿ ಭಕ್ತರಿಗೆ ಉಚಿತ ಆಹಾರ ಸೇವೆ ನೀಡುವ ಯೋಜನೆ ಜಾರಿಗೆ ತಂದಿದ್ದರು. ಆ ಬಳಿಕ ಈ ಯೋಜನೆಯನ್ನು ಶ್ರೀವೆಂಕಟೇಶ್ವರ ನಿತ್ಯ ಅನ್ನದಾನಂ ಟ್ರಸ್ಟ್ ಆಗಿ ಪರಿವರ್ತಿಸಲಾಯಿತು. 2014ರಲ್ಲಿ ಇದನ್ನು ಶ್ರೀ ವೆಂಕಟೇಶ್ವರ ಅನ್ನಪ್ರಸಾದಂ ಟ್ರಸ್ಟ್ ಆಗಿ ಮರು ನಾಮಕರಣ ಮಾಡಲಾಯಿತು.

ಆರಂಭದಲ್ಲಿ ಕೇವಲ 2 ಸಾವಿರ ಭಕ್ತರಿಗೆ ಉಚಿತ ಅನ್ನದಾನ ಸೇವೆಯನ್ನು ನೀಡಲಾಗುತ್ತಿತ್ತು. ಇದೀಗ ಲಕ್ಷಕ್ಕೂ ಮೀರಿದ ಭಕ್ತರಿಗೆ ಪ್ರತಿನಿತ್ಯ ಸೇವೆ ಒದಗಿಸಲಾಗುತ್ತಿದೆ. ಸದ್ಯ ಟ್ರಸ್ಟ್‌ನಲ್ಲಿ 9.7 ಲಕ್ಷ ದಾನಿಗಳು ಇದ್ದಾರೆ. ಇದರಲ್ಲಿ 139 ದಾನಿಗಳು 1 ಕೋಟಿ ಮತ್ತು ಅದಕ್ಕಿಂತ ಹೆಚ್ಚಿನ ದೇಣಿಗೆ ನೀಡಿದ್ದಾರೆ. 294 ದಾನಿಗಳಿಗಳು ತಲಾ 44 ಲಕ್ಷ ದೇಣಿಗೆ ಜೊತೆಗೆ ದಿನದ ಸಂಪೂರ್ಣ ಅನ್ನದಾನ ಸೇವೆಗೆ ದಾನ ಮಾಡಿದ್ದಾರೆ.



ಟ್ರಸ್ಟ್‌ನ ಈ ಮೈಲಿಗಲ್ಲಿನ ಸಾಧನೆ ಕುರಿತು ಟಿಟಿಡಿ ಅಧ್ಯಕ್ಷ ಬಿಆರ್ ನಾಯ್ಡು ಸಂತಸ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಭಕ್ತರ ಸದುದ್ದೇಶಕ್ಕಾಗಿ ಈ ರೀತಿಯ ಕಾರ್ಯಗಳನ್ನು ಮುಂದುವರೆಸುವುದಾಗಿ ತಿಳಿಸಿದ್ದಾರೆ.

ಇತ್ತೀಚಿಗಷ್ಟೇ ತಿರುಮಲ ತಿರುಪತಿ ದೇವಸ್ಥಾನಗಳ ಎಸ್‌ವಿ ಅನ್ನಪ್ರಸಾದ ಟ್ರಸ್ಟ್ ಶ್ರೀ ವೆಂಕಟೇಶ್ವರ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರಿಗೆ ಉಚಿತ, ಆರೋಗ್ಯಕರ ಮತ್ತು ಪೌಷ್ಟಿಕ ಆಹಾರವನ್ನು ಒದಗಿಸಲು ಒಂದು ದಿನದ ದಾನ ಯೋಜನೆಯನ್ನು ಪರಿಚಯಿಸಿತ್ತು. ದೇವಾಲಯದಲ್ಲಿ ಭಕ್ತರಿಗೆ ಅನ್ನದಾನ ಮಾಡಲು ಬಯಸುವ ದಾನಿಗಳು ಇನ್ನು ಮುಂದೆ ವೈಯಕ್ತಿಕವಾಗಿ ಅನ್ನಪ್ರಸಾದವನ್ನು ಬಡಿಸಬಹುದು.

ಟಿಟಿಡಿ ನೀಡಿದ್ದ ತನ್ನ ಹೇಳಿಕೆಯಲ್ಲಿ, "ವೆಂಗಮಾಂಬ ಅನ್ನಪ್ರಸಾದ ಭವನದಲ್ಲಿ ಪೂರ್ಣ ದಿನದ ಅನ್ನಪ್ರಸಾದ ವಿತರಣೆಯನ್ನು ಪ್ರಾಯೋಜಿಸಲು ದಾನಿಗಳು 44 ಲಕ್ಷ ದೇಣಿಗೆ ನೀಡಬಹುದು ಎಂದು ಘೋಷಿಸಿತ್ತು. ಜತೆಗೆ ದಾನಿಗಳು ವೈಯಕ್ತಿಕವಾಗಿ ಊಟ ಬಡಿಸುವ ಅವಕಾಶವನ್ನು ಸಹ ಹೊಂದಿರುತ್ತಾರೆ ಮತ್ತು ಅವರ ಹೆಸರುಗಳನ್ನು ಪ್ರದರ್ಶಿಸಲಾಗುತ್ತದೆ ಎಂದೂ ಪ್ರಕಟಿಸಿತ್ತು.

# ರೈಲು ಹೈಜಾಕ್: 21 ಪ್ರಯಾಣಿಕರು, 4 ಮಿಲಿಟರಿ ಸಿಬ್ಬಂದಿ ಹತ್ಯೆ

ಕರಾಚಿ/ಇಸ್ಲಾಮಾಬಾದ್: ಪಾಕಿಸ್ತಾನದ ಸಂಘರ್ಷಪೀಡಿತ ಪ್ರಾಂತ್ಯ ಬಲೂಚಿಸ್ತಾನದಲ್ಲಿ ಉಗ್ರರು ನಡೆಸಿದ ರೈಲು ಹೈಜಾಕ್‌ನಲ್ಲಿ 21 ಪ್ರಯಾಣಿಕರು ಮತ್ತು ನಾಲ್ವರು ಪ್ಯಾರಾಮಿಲಿಟರಿ ಯೋಧರು ಹತ್ಯೆಯಾಗಿದ್ದಾರೆ ಎಂದು ಬುಧವಾರ ಸೇನಾಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಪಾಕಿಸ್ತಾನದ ದುನಿಯಾ ನ್ಯೂಸ್ ಟಿವಿಗೆ ಲೆಫ್ಟಿನೆಂಟ್ ಜನರಲ್ ಅಹಮದ್ ಶರೀಫ್ ಪ್ರತಿಕ್ರಿಯಿಸಿ, "ರೈಲು ಅಪಹರಣದ ವಿರುದ್ಧದ ಸೇನಾ ಕಾರ್ಯಾಚರಣೆ ಮುಕ್ತಾಯಗೊಂಡಿದೆ. ಸ್ಥಳದಲ್ಲಿದ್ದ ಎಲ್ಲ ಒಟ್ಟು 33 ಉಗ್ರರನ್ನು ಸೇನೆ ಹತ್ಯೆ ಮಾಡಿದೆ" ಎಂದು ತಿಳಿಸಿದರು.

"ಪಾಕಿಸ್ತಾನದ ರೈಲು ಪ್ರಯಾಣಿಕರನ್ನು ಒತ್ತೆಯಾಳಾಗಿರಿಸಿಕೊಂಡ ಎಲ್ಲ 33 ಉಗ್ರರನ್ನು ಹತ್ಯೆ ಮಾಡಲಾಗಿದೆ. ಇದರೊಂದಿಗೆ ಕಾರ್ಯಾಚರಣೆ ತಾರ್ಕಿಕ ಅಂತ್ಯ ಕಂಡಿದೆ" ಎಂದು ಮಾಹಿತಿ ಖಾತೆ ಸಚಿವ ಅತ್ತಾವುಲ್ಲಾ ತರಾರ್ ದೃಢಪಡಿಸಿದ್ದಾರೆ.

"ರೈಲಿನಲ್ಲಿ ಒಟ್ಟು 440 ಪ್ರಯಾಣಿಕರಿದ್ದರು. ರಕ್ಷಣಾ ಕಾರ್ಯಾಚರಣೆಯಲ್ಲಿ ಪಾಕಿಸ್ತಾನ ಸೇನೆ, ಎಫ್‌ಸಿ ಮತ್ತು ವಾಯುಸೇನೆ ಉತ್ಕೃಷ್ಟ ಮಟ್ಟದ ಕೌಶಲ ಪ್ರದರ್ಶಿಸಿದರು" ಎಂದು ಅವರು ತಿಳಿಸಿದರು.

ಲೆ.ಜ.ಶರೀಫ್ ಮಾತನಾಡಿ, "ಬುಧವಾರ ಸಂಜೆ ಸೇನಾಪಡೆಗಳು ಯಶಸ್ವಿಯಾಗಿ ರಕ್ಷಣಾ ಕಾರ್ಯಾಚರಣೆ ಮುಕ್ತಾಯಗೊಳಿಸಿವೆ.



ಎಲ್ಲ ಉಗ್ರರನ್ನು ಕೊಂದು ಹಾಕಲಾಗಿದೆ. ಅದೇ ರೀತಿ ಎಲ್ಲ ಪ್ರಯಾಣಿಕರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ" ಎಂದರು. "ಮಂಗಳವಾರ ಉಗ್ರರು ರೈಲಿನ ಮೇಲೆ ದಾಳಿ ನಡೆಸಿದ್ದು, 21 ಪ್ರಯಾಣಿಕರು ಹತ್ಯೆಯಾಗಿದ್ದಾರೆ. ಇದೇ ವೇಳೆ ನಾಲ್ವರು ಪ್ಯಾರಾ ಮಿಲಿಟರಿ ಪಡೆಯ ಫ್ರಂಟಿಯರ್ ಕಾರ್ಪ್ಸ್‌ನ ಸಿಬ್ಬಂದಿ ಅಸುನೀಗಿದ್ದಾರೆ" ಎಂದರು.

440 ಪ್ರಯಾಣಿಕರೊಂದಿಗೆ 9 ಕೋಚ್‌ಗಳಿದ್ದ ಜಾಫರ್ ಎಕ್ಸ್‌ಪ್ರೆಸ್ ರೈಲು ಮಂಗಳವಾರ ಕ್ವೆಟ್ಟಾದಿಂದ ಪೇಶಾವರಕ್ಕೆ ಸಂಚರಿಸುತ್ತಿತ್ತು. ಕ್ವೆಟ್ಟಾದಿಂದ ಸುಮಾರು 160 ಕಿ.ಮೀ ದೂರದ ಗುಡಲರ್ ಮತ್ತು ಪಿರು ಕುನ್ರಿ ಪರ್ವತ ಪ್ರದೇಶದ ಸುರಂಗ ಮಾರ್ಗದಲ್ಲಿ ರೈಲು ಸಂಚರಿಸುತ್ತಿದ್ದಾಗ ಉಗ್ರರು ಸ್ಫೋಟಕಗಳ ಮೂಲಕ ರೈಲಿನ ಹಳಿ ತಪ್ಪಿಸಿದ್ದಾರೆ, ನಂತರ ರೈಲನ್ನು ಹೈಜಾಕ್ ಮಾಡಿದ್ದಾರೆ. ಬಲೂಚಿ ಲಿಬರೇಶನ್ ಆರ್ಮಿ ದಾಳಿಯ ಹೊಣೆ ಹೊತ್ತುಕೊಂಡಿತ್ತು ಮತ್ತು 6 ಮಂದಿ ಸೇನಾ ಸಿಬ್ಬಂದಿಯನ್ನು ಹತ್ಯೆ ಮಾಡಿರುವುದಾಗಿಯೂ ಘೋಷಿಸಿತ್ತು.

# ಎರಡನೇ ಮದುವೆಯಾಗಲು ಅಡ್ಡಿ ಮಗನ ಶೂಟ್ ಮಾಡಿ ಕೊಂದ ತಂದೆ

ರಾಜ್‌ಕೋಟ್: ಗುಜರಾತ್‌ನ ರಾಜ್‌ಕೋಟ್‌ನಲ್ಲಿ ಆಘಾತಕಾರಿ ಘಟನೆ ನಡೆದಿದ್ದು, ತನ್ನ ಎರಡನೇ ಮದುವೆಗೆ ವಿರೋಧಿಸಿದ್ದಕ್ಕೆ 76 ವರ್ಷದ ವ್ಯಕ್ತಿಯೊಬ್ಬರು 52 ವರ್ಷದ ಮಗನನ್ನು ಗುಂಡಿಕ್ಕಿ ಕೊಂದಿದ್ದಾರೆ. ಎನ್‌ಡಿಟಿವಿ ವರದಿಯ ಪ್ರಕಾರ, ಆರೋಪಿ ರಂಭಾಯಿ ಅಲಿಯಾಸ್ ರಾಮ್‌ಕುಭಾಯಿ ಬೋರಿಚಾ ಮಾರ್ಚ್ 9ರ ಭಾನುವಾರ ಬೆಳಿಗ್ಗೆ 10 ಗಂಟೆ ಸುಮಾರಿಗೆ ತನ್ನ ಮಗ ಪ್ರತಾಪ್ ಬೋರಿಚಾ ಜೊತೆ ತೀವ್ರ ವಾಗ್ವಾದ ನಡೆಸಿದ್ದಾರೆ. ತನ್ನ ತಂದೆ ಮರು ಮದುವೆ ಮಾಡಿಕೊಳ್ಳಲು ಪ್ರತಾಪ್ ಆಕ್ಷೇಪಿಸಿದ್ದರಿಂದ ಈ ಭಿನ್ನಾಭಿಪ್ರಾಯ ಉಂಟಾಗಿದೆ. ಕೋಪಗೊಂಡ ರಾಮ್‌ಭಾಯಿ ಬಂದೂಕನ್ನು ಹೊರತೆಗೆದು ತನ್ನ ಮಗನ ಮೇಲೆ ಎರಡು ಗುಂಡುಗಳನ್ನು ಹಾರಿಸಿದ್ದು, ಆತ ಸ್ಥಳದಲ್ಲೇ ಸಾವನ್ನಪ್ಪಿದನು.



ಶಬ್ದ ಕೇಳಿ ಪಕ್ಕದ ಮನೆಯವರು ಬಂದು ನೋಡಿದಾಗ ರಾಮ್‌ಭಾಯಿ ತನ್ನ ಮಗನ ಮೃತದೇಹದ ಬಳಿ ಕುಳಿತಿದ್ದರು. ಆತನಿಗೆ ಯಾವುದೇ ಪಶ್ಚಾತ್ತಾಪವೂ ಇರಲಿಲ್ಲ. ಈ ಭಯಾನಕ ಕೃತ್ಯವು ಸ್ಥಳೀಯ ಸಮುದಾಯವನ್ನು ಆಘಾತಕ್ಕೆ ದೂಡಿದೆ. ಈ ಘಟನೆಯ ನಂತರ ಪ್ರತಾಪ್ ಅವರ ಪತ್ನಿ ಜಯಾ ಜಸ್ದಾನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು.

ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಂಡು, ಅದೇ ದಿನ ರಾಮ್‌ಭಾಯಿಯನ್ನು ಬಂಧಿಸಿದರು. ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ನಂತರ ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಯಿತು.

# ಪಾರ್ಕಿಂಗ್‌ಗೆ ವಿಚಾರಕ್ಕೆ ಬಲಿ

ಮೊಹಾಲಿ: ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಎಜುಕೇಶನ್ ಅಂಡ್ ರಿಸರ್ಚ್‌ನಲ್ಲಿ ಕೆಲಸ ಮಾಡುತ್ತಿದ್ದ ವಿಜ್ಞಾನಿಯೊಬ್ಬರು ಪಾರ್ಕಿಂಗ್ ಗಲಾಟೆಗೆ ಬಲಿಯಾಗಿರುವ ಘಟನೆ ನಡೆದಿದೆ.

ಇಲ್ಲಿನ ಸೆಕ್ಟರ್ 67 ರಲ್ಲಿರುವ ತಮ್ಮ ಬಾಡಿಗೆ ಮನೆಯ ಬಳಿ ಪಾರ್ಕಿಂಗ್ ವಿವಾದವು ಹಿಂಸಾತ್ಮಕವಾಗಿ ಮಾರ್ಪಟ್ಟ ನಂತರ ವಿಜ್ಞಾನಿ ಡಾ.ಅಭಿಷೇಕ್ ಸ್ವರ್ಣಕರ್ ಸಾವನ್ನಪ್ಪಿದ್ದಾರೆ.ನಿನ್ನೆ ರಾತ್ರಿ ನೆರೆಮನೆಯ ಮಾಂಟಿಯೊಂದಿಗೆ ವಾಗ್ವಾದ ನಡೆಸಿದರು ಮತ್ತು ನಂತರ ಅವರನ್ನು ನೆಲಕ್ಕೆ ತಳ್ಳಿ ಗುದ್ದಿದ್ದಾರೆ ಎಂದು ಆರೋಪಿಸಲಾಗಿದೆ. ಮೂಲತಃ ಜಾರ್ಖಂಡ್‌ನ ಧನ್‌ಬಾದ್‌ನವರಾದ ಡಾ.ಸ್ವರ್ಣಕರ್ ಅವರು ಖ್ಯಾತ ವಿಜ್ಞಾನಿಯಾಗಿದ್ದು, ಅವರ ಕೆಲಸವು ಅಂತರರಾಷ್ಟ್ರೀಯ ನಿಯತಕಾಲಿಕೆಗಳಲ್ಲಿ ಕಾಣಿಸಿಕೊಂಡಿದೆ. ಅವರು ಸ್ವಿಟ್ಸರ್ಲೆಂಡ್‌ನ್ನಲ್ಲಿ ಕೆಲಸ ಮಾಡುತ್ತಿದ್ದರು ಮತ್ತು ಇತ್ತೀಚೆಗೆ ಭಾರತಕ್ಕೆ ಮರಳಿದ್ದರು ಮತ್ತು ಐಐಎಸ್ ಇಆರ್‌ಗೆ ಯೋಜನಾ ವಿಜ್ಞಾನಿಯಾಗಿ ಸೇರಿದ್ದರು.

ವಿಜ್ಞಾನಿ ಇತ್ತೀಚೆಗೆ ಮೂತ್ರಪಿಂಡ ಕಸಿಗೆ ಒಳಗಾಗಿದ್ದರು ಮತ್ತು ಅವರ ಸಹೋದರಿ ತನ್ನ ಮೂತ್ರಪಿಂಡಗಳಲ್ಲಿ ಒಂದನ್ನು ದಾನ ಮಾಡಿದ್ದರು. ಅವರು ಡಯಾಲಿಸಿಸ್ ನಲ್ಲಿದ್ದರು. ಹಲ್ಲೆಯ ನಂತರ, ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ಅವರು ನಿಧನರಾಗಿದ್ದಾರೆ.

# ಬೇಡಿಕೆ ಈಡೇರಿಸದಿದ್ದರೆ ಒತ್ತೆಯಾಳುಗಳನ್ನು ಗಲ್ಲಿಗೇರಿಸುತ್ತೇವೆ: ಬಲೂಚಿಸ್ತಾನದಿಂದ ಎಚ್ಚರಿಕೆ

**ಕ್ವೆಟ್ಟಾ:** ಪಾಕಿಸ್ತಾನಿ ಪಡೆಗಳ ಡ್ರೋನ್ ದಾಳಿ ಮತ್ತು ಫಿರಂಗಿ ಶೆಲ್ ದಾಳಿಗೆ ಪ್ರತೀಕಾರವಾಗಿ ಬಲೂಚ್ ಲಿಬರೇಶನ್ ಆರ್ಮಿ 10 ಪಾಕಿಸ್ತಾನಿ ಒತ್ತೆಯಾಳುಗಳನ್ನು ಗಲ್ಲಿಗೇರಿಸುವುದಾಗಿ ಬೆದರಿಕೆ ಹಾಕಿದೆ. ಬಲೂಚಿಸ್ತಾನದಲ್ಲಿ ಮಿಲಿಟರಿ ದಾಳಿಯ ನಂತರ ಪಾಕಿಸ್ತಾನಿ ಒತ್ತೆಯಾಳುಗಳನ್ನು ಗಲ್ಲಿಗೇರಿಸುವುದಾಗಿ ಬಿಎಲ್‌ಎ ಬೆದರಿಕೆ ಹಾಕಿದೆ. ಪಾಕಿಸ್ತಾನಕ್ಕೆ 48 ಗಂಟೆಗಳ ಗಡುವು ಕೂಡ ನೀಡಿದೆ. ಬಲೂಚಿಸ್ತಾನದ ಬೋಲಾನ್ ಜಿಲ್ಲೆಯಲ್ಲಿ ನಡೆಯುತ್ತಿರುವ ಒತ್ತೆಯಾಳು ಪರಿಸ್ಥಿತಿಯ ನಡುವೆಯೂ, ಬಲವಂತವಾಗಿ ವಶಕ್ಕೆ ಪಡೆದ ಕಾರ್ಯಕರ್ತನನ್ನು ಬಿಡುಗಡೆ ಮಾಡುವಂತೆ ಪಾಕಿಸ್ತಾನಕ್ಕೆ ಒತ್ತಾಯಿಸಿ 48 ಗಂಟೆಗಳ ಗಡುವು ನೀಡಿದೆ ಎಂದು ಬಲೂಚಿಸ್ತಾನ್ ಪೋಸ್ಟ್ ವರದಿ ಮಾಡಿದೆ. ಹೈಜಾಕ್ ಮಾಡಲಾದ ಜಾಫರ್ ಎಕ್ಸ್‌ಪ್ರೆಸ್ ರೈಲಿನ ಬಳಿ ಡ್ರೋನ್ ದಾಳಿ ಮತ್ತು ಫಿರಂಗಿ ಶೆಲ್ ದಾಳಿ ನಡೆಸಲಾಗಿದ್ದು, ಬಿಎಲ್‌ಎ ಉಗ್ರರನ್ನು ಹಿಡಿಯಲು ಪ್ರಯತ್ನ ಮುಂದುವರೆದಿದೆ.

ಇಂದಿನ ಪಾಕ್ ಸೇನೆಯ ಬಾಂಬ್ ದಾಳಿಗೆ ಪ್ರತಿಕ್ರಿಯೆ ಯಾಗಿ ನಾವು 10 ಒತ್ತೆಯಾಳುಗಳನ್ನು ತಕ್ಷಣವೇ ಗಲ್ಲಿಗೇರಿಸ ಬೇಕಾಗುತ್ತದೆ. ಪಾಕಿಸ್ತಾನಿ ಪಡೆಗಳು ಮತ್ತೊಂದು ದಾಳಿಯನ್ನು ಪ್ರಾರಂಭಿಸಿದರೆ ಒತ್ತೆಯಾಳುಗಳನ್ನು ತಕ್ಷಣವೇ ಗಲ್ಲಿಗೇರಿಸಲಾಗುತ್ತದೆ ಎಂದು ಹೇಳಲಾಗಿದೆ. ಉಗ್ರರು 200 ಪಾಕಿಸ್ತಾನಿ ಮಿಲಿಟರಿ, ಅರೆಸೈನಿಕ, ಪೊಲೀಸ್ ಮತ್ತು ಗುಪ್ತಚರ ಸಿಬ್ಬಂದಿಯನ್ನು ಒತ್ತೆಯಾಳು ಗಳಾಗಿ ತೆಗೆದುಕೊಂಡರು. ಬಂಧಿತ ಬಲೂಚ್ ರಾಜಕೀಯ ಕೈದಿಗಳು, ಬಲವಂತವಾಗಿ ಕಣ್ಮರೆಯಾದ ಕಾರ್ಯಕರ್ತರು ಮತ್ತು ಸೆರೆಹಿಡಿಯಲಾದ ಪ್ರತಿರೋಧ ಹೋರಾಟಗಾರರನ್ನು ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಬಿಎಲ್‌ಎ ಸಂಘಟನೆ 48 ಗಂಟೆಗಳ ಗಡುವು ನೀಡಿದೆ.



ಬಂಧಿತ ಬಲೂಚ್ ರಾಜಕೀಯ ಕೈದಿಗಳು, ಬಲವಂತವಾಗಿ ಕಣ್ಮರೆಯಾದ ಕಾರ್ಯಕರ್ತರು ಮತ್ತು ಸೆರೆಹಿಡಿಯಲಾದ ಪ್ರತಿರೋಧ ಹೋರಾಟಗಾರರನ್ನು ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಬಿಎಲ್‌ಎ 48 ಗಂಟೆಗಳ ಗಡುವು ನೀಡಿದೆ. "ನಮ್ಮ ಬೇಡಿಕೆಗಳನ್ನು ಉಳಿದಿರುವ ಸಮಯದೊಳಗೆ ಈಡೇರಿ ಸದಿದ್ದರೆ ಅಥವಾ ಪಾಕಿಸ್ತಾನಿ ಪಡೆಗಳು ಯಾವುದೇ ಹೆಚ್ಚಿನ ಮಿಲಿಟರಿ ಹಸ್ತಕ್ಷೇಪಕ್ಕೆ ಪ್ರಯತ್ನಿಸಿ ದರೆ ಎಲ್ಲಾ ಯುದ್ಧ ಕೈದಿಗಳನ್ನು ಗಲ್ಲಿಗೇರಿಸಲಾಗುತ್ತದೆ ಮತ್ತು ವಶಪಡಿಸಿಕೊಂಡ ರೈಲನ್ನು ಸಂಪೂರ್ಣವಾಗಿ ನಾಶಪಡಿಸ ಲಾಗುತ್ತದೆ ಎಂದು ಜೀಯಾಂಡ್ ಬಲೋಚ್ ಎಚ್ಚರಿಸಿದ್ದಾರೆ.

# ಹುಬ್ಬಳ್ಳಿ ಫ್ಲೈ ಓವರ್ ಕಾಮಗಾರಿ ವೇಗಕ್ಕೆ ಗಡ್ಕರಿ ಸೂಚನೆ

ನವದೆಹಲಿ: ಹುಬ್ಬಳ್ಳಿ ಹೃದಯ ಭಾಗದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದ ಬಳಿ ಮಂದಗತಿಯಲ್ಲಿ ಸಾಗಿರುವ ಫ್ಲೈ ಓವರ್ ಕಾಮಗಾರಿ ಪ್ರಗತಿ ಕುರಿತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಜಿಲ್ಲಾಡಳಿತದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಸಭೆ ನಡೆಸಿದರು.

ನವದೆಹಲಿಯ ತಮ್ಮ ಕಚೇರಿಯಿಂದಲೇ ಧಾರವಾಡ ಸಂಸದರು ಮತ್ತು ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ ಅವರ ಸಮ್ಮುಖದಲ್ಲಿಯೇ ಅಧಿಕಾರಿಗಳ ಜತೆ ಚರ್ಚೆ ನಡೆಸಿದ ಸಚಿವ ಗಡ್ಕರಿ, ಫ್ಲೈಓವರ್ ಕಾಮಗಾರಿ ಪ್ರಗತಿಯ ಸಂಪೂರ್ಣ ಮಾಹಿತಿ ಪಡೆದು ತ್ವರಿತ ವೇಗ ನೀಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಸ್ಥಳೀಯ ಆಡಳಿತಕ್ಕೆ ಗಡ್ಕರಿ ಚಾಟಿ: ವಾಣಿಜ್ಯ ನಗರಿ ಹುಬ್ಬಳ್ಳಿ ಹೃದಯ ಭಾಗದಲ್ಲಿ ನಿರ್ಮಿಸುತ್ತಿರುವ ಈ 3.61 ಕೀ.ಮೀ.ವಿಸ್ತೀರ್ಣದ ಈ ಎಲಿವೇಟೆಡ್ ರಸ್ತೆ (ಎತ್ತರದ ಕಾರಿಡಾರ್) ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅಗತ್ಯ ಅನುದಾನ ನೀಡುತ್ತಿದ್ದರೂ ಕಾಮಗಾರಿ ವಿಳಂಬ ಕಾಣುತ್ತಿದೆಯಲ್ಲ ಎಂದು ರಾಜ್ಯ ಸರ್ಕಾರ ಮತ್ತು ಸ್ಥಳೀಯ ಅಧಿಕಾರಿಗಳಿಗೆ ಗಡ್ಕರಿ ಚಾಟಿ ಬೀಸಿದರು.

ಫ್ಲೈ ಓವರ್ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಹಣ ಒದಗಿಸಿದರೂ ಕಾಮಗಾರಿ ಇನ್ನೂ ಅರ್ಧದಷ್ಟೂ ಪೂರ್ಣಗೊಂಡಿಲ್ಲ. ರಾಜ್ಯ ಸರ್ಕಾರ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ತೋರಿದ ವಿಳಂಬ ನೀತಿಯೇ ಕಾರಣ ಎಂದು ಸಚಿವರಿಬ್ಬರೂ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಪ್ರಲ್ಹಾದ ಜೋಶಿ ಒತ್ತಾಸೆಯಂತೆ ಹೆಚ್ಚುವರಿ ಆರ್ಥಿಕ ನೆರವಿಗೆ ಗಡ್ಕರಿ ಸಮ್ಮತಿ: ಹುಬ್ಬಳ್ಳಿಯಲ್ಲಿ 3.61 ಕೀ.ಮೀ. ಉದ್ದದ ಈ ಫ್ಲೈ ಓವರ್ ಕಾಮಗಾರಿಗೆ ಸಿವಿಲ್ ಕಾಸ್ಟ್ ಆಗಿ □196.99 ಕೋಟಿ ನಿಗದಿಪಡಿಸಿದ್ದು, ಇದಕ್ಕೆ ಹೆಚ್ಚುವರಿ 35.76 ಕೋಟಿ ರೂ. ಸೇರಿಸಿ 232.75 ಕೋಟಿ ನಿಗದಿಪಡಿಸಲಾಗಿತ್ತು. ಒಟ್ಟು ಯೋಜನಾ ವೆಚ್ಚ 298 ಕೋಟಿ ನಿಗದಿಪಡಿಸಲಾಗಿತ್ತು. ಸಚಿವ ಪ್ರಲ್ಹಾದ ಜೋಶಿ ಅವರ ಒತ್ತಾಸೆಯಂತೆ ಈಗದಕ್ಕೆ 51.49 ಕೋಟಿ ಹೆಚ್ಚುವರಿ ಅನುದಾನ ನೀಡಲು ಕೇಂದ್ರ ಹೆದ್ದಾರಿ ಸಚಿವ ಗಡ್ಕರಿ ಸಮ್ಮತಿಸಿದ್ದಾರೆ. ಅದರಂತೆ ಒಟ್ಟು ಯೋಜನಾ ವೆಚ್ಚ ಈಗ 349.49 ಕೋಟಿ ತಲುಪಿದೆ.

ಹೆಚ್ಚುವರಿ ಹಣಕಾಸು ನೆರವು ನೀಡಲು ಸಿದ್ಧ: ಆರ್ಥಿಕ ಸಮಸ್ಯೆ ಎದುರಿಸುತ್ತಿದ್ದರೆ ಈ ಕಾರಿಡಾರ್ ಕಾಮಗಾರಿಗಾಗಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಮೂಲಕ ವಿಶೇಷ ಹಣಕಾಸು ನೆರವು ನೀಡುವುದಾಗಿ ಸಚಿವ ನಿತಿನ್ ಗಡ್ಕರಿ ಇದೇ ವೇಳೆ ಭರವಸೆ ನೀಡಿದರು. ಅಲ್ಲದೇ, ಕೂಡಲೇ ಕಾಮಗಾರಿಗೆ ವೇಗ ನೀಡಿ ಎಂದು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ಸಹ ನೀಡಿದರು. ಸಕಾಲದಲ್ಲಿ ಯೋಜನೆ ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಿ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ಸಹ ನೀಡಿದರು.

ಫ್ಲೈ ಓವರ್ ಕಾಮಗಾರಿ ಇತಿಹಾಸ: ವಾಣಿಜ್ಯ ನಗರಿ ಹುಬ್ಬಳ್ಳಿಯ ಹೃದಯ ಭಾಗದಲ್ಲಿ ತೀವ್ರ ಜನಸಂದಣಿ, ಟ್ರಾಫಿಕ್ ತೀವ್ರವಾಗಿದ್ದರಿಂದ ಸುಗಮ ಸಂಚಾರ ವ್ಯವಸ್ಥೆಗಾಗಿ ಕಿತ್ತೂರು ರಾಣಿ ವೃತ್ತದ ಬಳಿ ಫ್ಲೈ ಓವರ್ ಕಾಮಗಾರಿ ನಿರ್ಮಾಣಕ್ಕೆ 2020 ಆಗಸ್ಟ್ 31 ರಂದೇ ಮಂಜೂರಾತಿ ನೀಡಿ, 2021ರ ಜೂನ್ 4ರಂದು ಚಾಲನೆ ನೀಡಲಾಗಿತ್ತು. 2024 ರ ಮಾರ್ಚ್ 20ರೊಳಗೆ ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿತ್ತು.

ಅರ್ಧದಷ್ಟು ಕಾಮಗಾರಿ ಮಾತ್ರ ಪೂರ್ಣ: ಎನ್‌ಹೆಚ್ 63, ಎನ್‌ಹೆಚ್ 4 ಮತ್ತು ಎನ್‌ಹೆಚ್ 218ರಿಂದ ಸಂಪರ್ಕ ಕಲ್ಪಿಸಲು ಒಟ್ಟು 3.61 ಕಿ.ಮೀ. ಉದ್ದದ ಎತ್ತರದ ಕಾರಿಡಾರ್ ನಿರ್ಮಾಣ ಕಾಮಗಾರಿ ನಡೆಸಲಾಗುತ್ತಿದೆ. ಆದರೆ ಕಾಮಗಾರಿ ಕೈಗೊಂಡು ನಾಲ್ಕು ವರ್ಷ ಕಳೆದರೂ ಶೇ.50 ರಷ್ಟು ಮಾತ್ರ ಪೂರ್ಣಗೊಂಡಿದೆ. ಭೂ ಸ್ವಾಧೀನ ವಿಳಂಬ, ಪರ್ಯಾಯ ಮಾರ್ಗ ವ್ಯವಸ್ಥೆ ಹೀಗೆ ವಿವಿಧ ತೊಡಕುಗಳ ಕಾರಣಗಳಿಂದಾಗಿ ಇನ್ನೂ ಶೇ.50ರಷ್ಟು ಕಾಮಗಾರಿ ಬಾಕಿ ಉಳಿದಿದೆ. ಧಾರವಾಡ ಸಂಸದ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಈ ಬಗ್ಗೆ ವಿಶೇಷ ಆಸಕ್ತಿ ವಹಿಸಿ ಕೇಂದ್ರದ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಚರ್ಚೆ ನಡೆಸಿ ಗಮನ ಸೆಳೆದಿದ್ದರಲ್ಲದೆ, ಹೆಚ್ಚುವರಿ ಅನುದಾನ ಘೋಷಿಸುವಲ್ಲಿ ಸಫಲರಾಗಿದ್ದಾರೆ.

ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು, ಹುಬ್ಬಳ್ಳಿ–ಧಾರವಾಡದ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್, ಮಹಾನಗರ ಪಾಲಿಕೆ ಆಯುಕ್ತ ರುದ್ರೇಶ್ ಗಾಳಿ ಹಾಗೂ ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿ ಮತ್ತು ಓಊಕಘಆ ಮುಖ್ಯ ಎಂಜಿನಿಯರ್ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಪಘಾತದಲ್ಲಿ ದಂಪತಿ ಸಾವು: ನಿರ್ಮಲಾ ಸಂಬಂಧಿ ಬಂಧನ

ಚೆನ್ನೈ: ಚೆನ್ನೈನಲ್ಲಿ ಸಂಭವಿಸಿದ ಕಾರ್ ಅಪಘಾತದಲ್ಲಿ ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ. ಅಪಘಾತಕ್ಕೆ ಕಾರಣನಾದ ವ್ಯಕ್ತಿಯು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಸಂಬಂಧಿ ಎಂದು ತಿಳಿದುಬಂದಿದೆ. ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಚೆನ್ನೈನಲ್ಲಿ ಕಾರ್ ಅಪಘಾತದಲ್ಲಿ ಒಬ್ಬರು ಸಾವು. ಅಪಘಾತಕ್ಕೆ ಕಾರಣನಾದ ವ್ಯಕ್ತಿ ನಿರ್ಮಲಾ ಸೀತಾರಾಮನ್ ಅವರ ಸಂಬಂಧಿ ಎಂದು ತಿಳಿದುಬಂದಿದೆ. ಚೆನ್ನೈನ ಆಳ್ವಾರ್ ತಿರುನಗರದ ಐಟಿ ಕಂಪನಿಯಲ್ಲಿ ಕೆಲಸ ಮಾಡುವ ಅರವಿಂದ್ ರವಿಚಂದ್ರನ್, ಕಳೆದ 9 ರಂದು ಚೆನ್ನೈನಿಂದ ವಿಲ್ಲುಪುರಂಗೆ ಆಡಿ ಕಾರಿನಲ್ಲಿ ಹೋಗುತ್ತಿದ್ದಾಗ ವಿಲ್ಲುಪುರಂ ಜಿಲ್ಲೆಯ ದಿಂಡಿವನಂ ಬಳಿಯ ಓಂಗೂರು ಸೇತುವೆ ಹತ್ತಿರ ನಾರಾಯಣಸಾಮಿ (39), ಮೀನಾ (31) ದ್ವಿಚಕ್ರ ವಾಹನದಲ್ಲಿ ಮೇಲ್ಮಲಯನೂರ್ ಕಡೆಗೆ ಹೋಗುತ್ತಿದ್ದರು.

ಆಗ ಕಾರು ಅವರಿಗೆ ಡಿಕ್ಕಿ ಹೊಡೆದು ಇಬ್ಬರೂ ಎಸೆಯಲ್ಪಟ್ಟರು. ಇದರಿಂದ ನಾರಾಯಣನ್ ಸ್ಥಳದಲ್ಲೇ ಮೃತಪಟ್ಟರು. ಗಂಭೀರವಾಗಿ ಗಾಯಗೊಂಡ ಅವರ ಪತ್ನಿ ಮೀನಾ ಅವರನ್ನು ಅಚಿರಪಕ್ಕಂ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಯಿತು. ಅಪಘಾತ ಮಾಡಿದ ಅರವಿಂದ್ ಕಾರನ್ನು ನಿಲ್ಲಿಸದೆ ವಿಲ್ಲುಪುರಂಗೆ ಹೋಗದೆ ಮತ್ತೆ ಚೆನ್ನೈಗೆ ವಾಪಸಾಗಿದ್ದಾರೆ.

ಈ ಅಪಘಾತದ ಬಗ್ಗೆ ಮೃತ ನಾರಾಯಣಸಾಮಿಯ ಸಹೋದರ ಕೃಷ್ಣನ್ (44) ಒಲಕ್ಕೂರು ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಈ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಅಪಘಾತಕ್ಕೆ ಕಾರಣವಾದ ವಾಹನ ಯಾವುದು ಎಂದು ತಿಳಿಯದೆ ಪೊಲೀಸರು ತಡಕಾಡುತ್ತಿದ್ದರು. ಓಂಗೂರು ಟೋಲ್ ಗೇಟ್ ಸಿಸಿಟಿವಿಯನ್ನು ಪರಿಶೀಲಿಸಿದಾಗ ಅರವಿಂದ್ ಕಾರ್ ವಿಲ್ಲುಪುರಂ ಕಡೆಗೆ ಹೋಗಿ ಕೂಡಲೇ ಚೆನ್ನೈಗೆ ವಾಪಸಾಗಿದ್ದು ತಿಳಿದುಬಂದಿದೆ. ನಂತರ ದೂರವಾಣಿ ಮೂಲಕ ಅರವಿಂದ್ ಅವರನ್ನು ಸಂಪರ್ಕಿಸಿ ವಿಚಾರಿಸಿದ ಪೊಲೀಸರು ಅಪಘಾತವನ್ನು ಖಚಿತಪಡಿಸಿಕೊಂಡಿದ್ದಾರೆ.

ನಂತರ ಪೊಲೀಸರು ಆತನನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಸಂಬಂಧಿ ಎಂದು ತಿಳಿದುಬಂದಿದೆ. ಅರವಿಂದ್ ಅವರ ತಾಯಿಯ ಚಿಕ್ಕಮ್ಮನ ಮಗಳು ನಿರ್ಮಲಾ ಸೀತಾರಾಮನ್ ಎಂದು ಹೇಳಲಾಗಿದೆ. ಅಪಘಾತದಲ್ಲಿ ಮೃತಪಟ್ಟವರು ತಿರುವಣ್ಣಾಮಲೈ ಜಿಲ್ಲೆಯ ಕೀಳ್ಪೆನ್ನತ್ತೂರು ಗೆಂಗಣಂದಲ್ ಪ್ರದೇಶದವರು ನಾರಾಯಣಸಾಮಿ ಎಂಬುದು ಗಮನಾರ್ಹ.

ಕ್ರೀಡೆ - ಸಿನಿಮಾ
ಮುಸ್ಸಂಜೆ



ವುಮೆನ್ಸ್ ಪ್ರೀಮಿಯರ್ ಲೀಗ್‌ನಲ್ಲಿ ಮುಂಬೈ ಇಂಡಿಯನ್ಸ್ ಆಟಗಾರ್ತಿ ನ್ಯಾಟ್ ಸಿವರ್–ಬ್ರಂಟ್ ಹೊಸ ಇತಿಹಾಸ ರಚಿಸಿದ್ದಾರೆ. ಅದು ರನ್ ರಾಶಿಯನ್ನು ಪೇರಿಸುವ ಮೂಲಕ ಎಂಬುದು ವಿಶೇಷ. ಫಕಐ ಸೀಸನ್–3 ರ ಕೊನೆಯ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದ ಸಿವರ್ ಬ್ರಂಟ್ 35 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 9 ಫೋರ್‌ಗಳೊಂದಿಗೆ 69 ರನ್ ಬಾರಿಸಿದ್ದರು. ಈ 69 ರನ್‌ಗಳೊಂದಿಗೆ ನ್ಯಾಟ್ ಸಿವರ್–ಬ್ರಂಟ್ ಈ ಬಾರಿಯ ವುಮೆನ್ಸ್ ಪ್ರೀಮಿಯರ್ ಲೀಗ್‌ನಲ್ಲಿ 400+ ರನ್‌ಗಳನ್ನು ಕಲೆಹಾಕಿದ್ದಾರೆ. ಈ ಮೂಲಕ ಫಕಐ ಇತಿಹಾಸದಲ್ಲೇ ಒಂದೇ ಸೀಸನ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ದಾಖಲೆಯನ್ನು ಸಿವರ್ ಬ್ರಂಟ್ ತಮ್ಮದಾಗಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ದಾಖಲೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಸ್ಟಾರ್ ಆಟಗಾರ್ತಿ ಎಲ್ಲಿಸ್ ಪೆರ್ರಿ ಹೆಸರಿನಲ್ಲಿತ್ತು. 2024ರ ಫಕಐ ನಲ್ಲಿ ಪೆರ್ರಿ 347 ರನ್ ಬಾರಿಸಿ ಈ ದಾಖಲೆ ಬರೆದಿದ್ದರು. ಅಲ್ಲದೆ ಈ ಬಾರಿಯ ಟೂರ್ನಿಯಲ್ಲಿ 8 ಪಂದ್ಯಗಳಿಂದ ಪೆರ್ರಿ 372 ರನ್ ಬಾರಿಸಿ ತನ್ನದೇ ದಾಖಲೆಯನ್ನು ಮುರಿದಿದ್ದರು. ಆದರೀಗ ಮುಂಬೈ ಇಂಡಿಯನ್ಸ್ ತಂಡದ ಆಲ್‌ರೌಂಡರ್ ನ್ಯಾಟ್ ಸಿವರ್–ಬ್ರಂಟ್ 8 ಪಂದ್ಯಗಳಿಂದ ಒಟ್ಟು 416 ರನ್ ಕಲೆಹಾಕಿದ್ದಾರೆ. ಈ ಮೂಲಕ ವುಮೆನ್ಸ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲೇ ಒಂದೇ ಸೀಸನ್‌ನಲ್ಲಿ ಅತೀ ಹೆಚ್ಚು ರನ್‌ಗಳಿಸಿದ ಬ್ಯಾಟರ್ ಎನಿಸಿಕೊಂಡಿದ್ದಾರೆ. ಸದ್ಯ ಮುಂಬೈ ಇಂಡಿಯನ್ಸ್ ತಂಡವು ಎಲಿಮಿನೇಟರ್ ಸುತ್ತಿಗೆ ಪ್ರವೇಶಿಸಿದ್ದು, ಈ ಪಂದ್ಯದಲ್ಲಿ ನ್ಯಾಟ್ ಸಿವರ್–ಬ್ರಂಟ್ ಅಬ್ಬರಿಸಿ 84 ರನ್ ಕಲೆಹಾಕಿದರೆ ಆರೆಂಜ್ ಕ್ಯಾಪ್‌ನೊಂದಿಗೆ ಮತ್ತೊಂದಷ್ಟು ದಾಖಲೆಗಳನ್ನು ತಮ್ಮದಾಗಿಸಿಕೊಳ್ಳಬಹುದು. ಹೀಗಾಗಿ ಇಂದು ನಡೆಯಲಿರುವ ಗುಜರಾತ್ ಜೈಂಟ್ಸ್ ವಿರುದ್ಧದ ಪಂದ್ಯದಲ್ಲಿ ಸಿವರ್–ಬ್ರಂಟ್ ಪ್ರದರ್ಶನ ಹೇಗಿರಲಿದೆ ಎಂಬುದನ್ನು ಕಾದು ನೋಡೋಣ.



# ಬೆತ್ತಲೆ ಬೆನ್ನು ತೋರಿಸಿದ ಪ್ರಾಣಸಖಿ

ಒಂದಲ್ಲ ಎರಡಲ್ಲ ಬರೋಬ್ಬರಿ ಐವತ್ತು ಲಕ್ಷ ವೀಕ್ಷಣೆ ಕಂಡಿರೋ ನಟಿ ಭಾವನಾ ವೀಡಿಯೋವೊಂದು ಸೋಷಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ಸೆನ್ಸೇಶನ್ ಕ್ರಿಯೇಟ್ ಮಾಡಿದೆ.

ಖ್ಯಾತ ಎಂಟರ್‌ಟೇನ್‌ಮೆಂಟ್ ಚಾನೆಲ್‌ನ ಸಂಗೀತ ರಿಯಾಲಿಟಿ ಶೋದಲ್ಲಿ ಭಾವನಾ ಭಾಗಿಯಾಗಿದ್ದು ಅದರ ವೀಡಿಯೋ ಇದು. ಅಷ್ಟಕ್ಕೂ ಈ ವೀಡಿಯೋದಲ್ಲಿ ಭಾವನಾ ತನ್ನ ಬೆತ್ತಲೆ ಬೆನ್ನು ಪ್ರದರ್ಶನ ಮಾಡಿದ್ದೇ ಈ ಮಟ್ಟಿನ ಪಬ್ಲಿಸಿಟಿಗೆ ಕಾರಣವಾಗಿದೆ. ಅಷ್ಟಕ್ಕೂ ಭಾವನಾ ರಾಮಣ್ಣ ಎಷ್ಟೋ ಜನರಿಗೆ ಇವತ್ತಿಗೂ 'ಚಂದ್ರಮುಖಿ ಪ್ರಾಣಸಖಿ ಭಾವನಾ' ಅಂತಲೇ ಮನಸ್ಸಿಗೆ ಹತ್ತಿರವಾದವರು. ಈ ಸಿನಿಮಾದಲ್ಲಿ ಅವರು ಮಾಡಿರೋ ಪಾತ್ರ ಅವರಿಗೆ ಸಾಕಷ್ಟು ಹೆಸರು ತಂದುಕೊಟ್ಟಿತು.

ಇಪ್ಪತ್ತಾರು ವರ್ಷಗಳ ಹಿಂದೆ ಬಂದಿರೋ ಈ ಸಿನಿಮಾದಲ್ಲಿ ರಮೇಶ್ ನಾಯಕನಾಗಿ ನಟಿಸಿದರೆ ಪ್ರೇಮಾ ನಾಯಕಿಯಾಗಿದ್ದರು. ಎರಡನೇ ನಾಯಕಿಯಾಗಿ ಮಿಂಚಿದ್ದೇ ಈ ಭಾವನಾ. ಈ ಸಿನಿಮಾದಲ್ಲೂ ಇವರ ಪಾತ್ರದ ಹೆಸರು ಭಾವನಾ. ಈ ಸಿನಿಮಾ ಎರಡು ದಶಕಗಳ ಹಿಂದೆ ಎಷ್ಟು ಜನಪ್ರಿಯವಾಯ್ತೋ ಭಾವನಾ ಪಾತ್ರವೂ ಅಷ್ಟೇ ಸಕ್ಸಸ್‌ಫುಲ್ ಆಯ್ತು.

ಭಾವನಾ ಇತ್ತೀಚೆಗೆ ತನ್ನ ಹೇಳಿಕೆಯೊಂದರ ಮೂಲಕವೂ ಸುದ್ದಿಯಾಗಿದ್ದರು. ಅದು ಕಾಸ್ಟಿಂಗ್ ಕೌಚ್‌ಗೆ ಸಂಬಂಧಿಸಿದ ಹೇಳಿಕೆ. ಮಲಯಾಳಂನಲ್ಲಿ ಹೇಮಾ ಸಮಿತಿ ಅಲ್ಲಿನ ಚಿತ್ರರಂಗದಲ್ಲಿನ ಕಾಸ್ಟಿಂಗ್ ಕೌಚ್‌ನ ವಿರಾಟ್ ರೂಪವನ್ನು ಬಯಲಿಗೆಳೆದಿತ್ತು. ಈ ಮೂಲಕ ಜಗತ್ತಿನಾದ್ಯಂತ ಸುದ್ದಿ ಮಾಡಿತು. ಅನೇಕ ಜನಪ್ರಿಯ ನಟಿಯರು ಧೈರ್ಯದಿಂದ ತಮಗಾದ ಅನ್ಯಾಯದ ವಿರುದ್ಧ ಧ್ವನಿ ಎತ್ತಿದ್ದರು. ಪರಿಣಾಮ ಅನ್ಯಾಯ ಮಾಡಿದ ಸ್ಟಾರ್ ನಟರೂ ಜೈಲು ಕಂಬಿ ಎಣಿಸುವಂಥಾಯ್ತು. ಈ ವೇಳೆ ಇಂಥದ್ದೇ ಸಮಿತಿ ಕನ್ನಡದಲ್ಲೂ ಬರಬೇಕು ಅನ್ನೋ ಮಾತು ಬಹಳ ತೀವ್ರವಾಗಿ ಕೇಳಿಬಂತು. ಅನೇಕ ಜನಪ್ರಿಯ ತಾರೆಯರು ಇದಕ್ಕೆ ಪರ ವಿರೋಧ ವ್ಯಕ್ತಪಡಿಸಿದರು. ಈ ವೇಳೆ ನಟಿ ಭಾವನಾ ಅವರೂ ತನ್ನ ಅಭಿಪ್ರಾಯವನ್ನು ವ್ಯಕ್ತಪಡಿಸಿ ಅವರು ಟ್ರೋಲಿಗೊಳಗಾಗುವಂತೆ ಮಾಡಿತು. 'ಹೆಣ್ಣು ಅಂದಮೇಲೆ ಕೆಲವು ಸಮಸ್ಯೆಗಳು ಇದ್ದೆ ಇರುತ್ತವೆ.

ಈಗೆಲ್ಲ ನೂರು ಮದುವೆಗಳಲ್ಲಿ ಹತ್ತು ಮದುವೆ ಉಳಿದರೆ ಅದೇ ದೊಡ್ಡದು. ಒಂದು ವೇಳೆ ಚಿತ್ರರಂಗದಲ್ಲಿ ಅಂಥಾ ಕೆಟ್ಟ ಚಾಳಿ ಇದ್ದರೆ ಅದನ್ನು ಬೆಂಬಲಿಸಬೇಡಿ. ಕಾಸ್ಟಿಂಗ್ ಕೌಚ್ ಕೂಗು ನಮ್ಮ ಇಂಡಸ್ಟ್ರಿಯಲ್ಲಿ ಇಲ್ಲ' ಎಂದುಬಿಟ್ಟಿದ್ದರು. ಅದನ್ನು ಬಹಳ ಮಂದಿ ವ್ಯಂಗ್ಯ ಮಾಡಿದ್ದರು. ಆಮೇಲೆ ಇದೆಲ್ಲ ಹಿನ್ನೆಲೆಗೆ ಸರಿಯಿತು.

ಈ ನಡುವೆ ಈ ನಟಿ ಜನಪ್ರಿಯ ಚಾನೆಲ್ ಒಂದರ ಪ್ರಸಿದ್ಧ ಸಂಗೀತ ರಿಯಾಲಿಟಿ ಶೋಗೆ ಗೆಸ್ಟ್ ಆಗಿ ಹೋಗಿದ್ದಾರೆ. ಹೋಗೋದೇನೋ ಹೋಗಿದ್ದಾರೆ. ಆದರೆ ಬೆತ್ತಲೆ ಬೆನ್ನು ಪ್ರದರ್ಶಿಸುವಂತೆ ಸೀರೆ ಉಟ್ಟು ಹೋಗಿದ್ದಾರೆ. ಇದರಲ್ಲೇ ರಾಜೇಶ್ ಕೃಷ್ಣನ್ ಅವರೊಂದಿಗೆ ಡ್ಯಾನ್ಸ್ ಮಾಡಿ ಕ್ಯಾಮರ ಎದುರಿಗೂ ತನ್ನ ಬೆತ್ತಲೆ ಬೆನ್ನಿನ ಪ್ರದರ್ಶನ ಮಾಡಿದ್ದಾರೆ. ಇದನ್ನು ಆ ಚಾನೆಲ್ ತನ್ನ ಪ್ರೋಮೋದಲ್ಲಿ ಪ್ರಸಾರ ಮಾಡಿದೆ. ಇದಕ್ಕೆ ಐವತ್ತು ಲಕ್ಷಕ್ಕೂ ಅಧಿಕ ವೀಕ್ಷಣೆ ಆಗಿದೆ. ಇನ್ನೇನು ಒಂದು ದಿನ ಕಳೆದರೆ ಅದು ಅರವತ್ತು ಲಕ್ಷಕ್ಕೆ ಏರಿಕೆ ಆಗಬಹುದು. ಇದು ಕೇವಲ ಇನ್‌ಸ್ಟಾ ಒಂದರಲ್ಲೇ ಆಗಿರುವ ವೀಕ್ಷಣೆ. ಇನ್ನು ಫೇಸ್‌ಬುಕ್, ಯೂಟ್ಯೂಬ್, ಜೀ ಫೈವ್ ಎಲ್ಲ ಸೇರಿಸರೆ ಈ ವೀಕ್ಷಣೆ ಹತ್ತಿರರತ್ತಿರ ಕೋಟಿ ಸಮೀಪಿಸಬಹುದು. ಇದಕ್ಕೆ ಜನ ಬಾಯಿಗೆ ಬಂದಂಗೆ ಕಾಮೆಂಟ್ ಮಾಡಿದ್ದಾರೆ. 'ಎಲ್ಲ ಜಾಲಿ ಜಾಲಿ' ಎಂದು ಒಬ್ಬರು ಕಾಮೆಂಟ್ ಮಾಡಿದರೆ, ನೂರಾರು ಮಂದಿ, 'ಬ್ಲೌಸ್ ಹಾಕ್ಕೊಂಡು ಬನ್ರೀ...' ಎಂದು ನೇರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ತೀರಾ ಅಶ್ಲೀಲ ಕಾಮೆಂಟ್‌ಗಳೂ ಬಂದಿವೆ.

# 'ಎಸ್‌ಎಸ್‌ಎಂಬಿ29' ಸಿನಿಮಾ ರಾಮಾಯಣದ ಆಧಾರಿತವೇ?




ಸೂಪರ್ ಸ್ಟಾರ್ ಮಹೇಶ್ ಬಾಬು ಜೊತೆ ನಿರ್ದೇಶಕ ರಾಜಮೌಳಿ ನಿರ್ಮಿಸುತ್ತಿರುವ ಸಿನಿಮಾ ಖಖಒಃ29. '#ಎಸ್‌ಎಸ್‌ಎಂಬಿ29' ವರ್ಕಿಂಗ್ ಟೈಟಲ್. ಚಿತ್ರೀಕರಣ ಪ್ರಾರಂಭವಾದಾಗಿನಿಂದ ಪ್ರೇಕ್ಷಕರಲ್ಲಿ ಆಸಕ್ತಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ರೆಗ್ಯುಲರ್ ಶೂಟಿಂಗ್ ಕೆಲವು ದಿನಗಳ ಹಿಂದೆ ಒಡಿಶಾದಲ್ಲಿ ಪ್ರಾರಂಭವಾಯಿತು. ಈ ಭಾರಿ ಬಜೆಟ್ ಫಾರೆಸ್ಟ್ ಅಡ್ವೆಂಚರಸ್ ಆಕ್ಷನ್ ಫಿಲ್ಮ್‌ನಲ್ಲಿ ಕಥೆ ಏನು ಎಂಬುದು ಹೊರಗೆ ಬರದಿದ್ದರೂ, ಅವರವರಿಗೆ ತೋಚಿದ ಊಹೆಗಳನ್ನು ಮಾಡುತ್ತಿದ್ದಾರೆ.

ಮಹೇಶ್ ಬಾಬು, ಪೃಥ್ವಿರಾಜ್ ಸುಕುಮಾರನ್ ಅವರು ಭಾಗವಹಿಸಿದ್ದು, ರಾಜಮೌಳಿ ಪ್ರಮುಖ ಸನ್ನಿವೇಶಗಳನ್ನು ಚಿತ್ರೀಕರಿಸುತ್ತಿದ್ದಾರೆ. ಈ ನಡುವೆ ಒಂದು ಹೊಸ ಕಥೆ ಮಾಧ್ಯಮಗಳಲ್ಲಿ ವೈರಲ್ ಆಗುತ್ತಿದೆ. ಅದರ ಪ್ರಕಾರ ರಾಮಾಯಣದ ಒಂದು ಶ್ರೇಷ್ಠ ಎಪಿಸೋಡ್ ಆಧಾರಿತವಾಗಿದೆ ಎಂದು ಹೇಳುತ್ತಿದ್ದಾರೆ. ಹಾಗಾದರೆ ಆ ಎಪಿಸೋಡ್ ಯಾವುದು?

ಈ ಚಿತ್ರಕ್ಕೆ ಪೌರಾಣಿಕ ಟಚ್ ಇದೆ, ರಾಮಾಯಣದ ಕೆಲವು ಮುಖ್ಯ ಘಟನೆಗಳನ್ನು ಸ್ಫೂರ್ತಿಯಾಗಿ ತೆಗೆದುಕೊಂಡು, ಇಂದಿನ ಆಧುನಿಕ ಕಾಲಕ್ಕೆ ಅನ್ವಯಿಸಿ, ಈ ಕಥೆಯನ್ನು ವಿಜಯೇಂದ್ರ ಪ್ರಸಾದ್ ರೆಡಿ ಮಾಡಿದ್ದಾರೆ ಎಂಬ ಮಾಹಿತಿ ಇದೆ. ರಾಮಾಯಣದಲ್ಲಿನ ಪ್ರಮುಖ ಘಟ್ಟವಾದ ಲಕ್ಷ್ಮಣನನ್ನು ಬದುಕಿಸಲು ಸಂಜೀವಿನಿಗಾಗಿ ಹನುಮಂತ ಹೋದ ಎಪಿಸೋಡ್. ಆ ಕಾನ್ಸೆಪ್ಟ್ ಅನ್ನು ಆಧಾರವಾಗಿಟ್ಟುಕೊಂಡು ಮಾಡರ್ನ್ ಕಾಲಕ್ಕೆ ತಕ್ಕಂತೆ ಬದಲಾಯಿಸಿದಂತೆ ಕಾಣುತ್ತದೆ.

ಈ ಕಥೆಯಲ್ಲಿ ಕೂಡ ಒಂದು ಜೀವವನ್ನು ಉಳಿಸಲು ಸಂಜೀವನಿಯಂತಹ ಮೆಡಿಸಿನ್ ಹುಡುಕುತ್ತಾ ಮಹೇಶ್ ಬಾಬು ಈ ಜರ್ನಿಯನ್ನು ಮಾಡುತ್ತಾನೆ ಎಂದು ಹೇಳಿಕೊಳ್ಳುತ್ತಿದ್ದಾರೆ. ಕಥೆಯಲ್ಲಿ ಕಾಶಿ ನಗರಕ್ಕೂ ಪ್ರಾಮುಖ್ಯತೆ ಇದೆಯಂತೆ. ಇದರಲ್ಲಿ ನಿಜವೆಷ್ಟೋ ತಿಳಿಯಲು ಇನ್ನೂ ಕೆಲವು ದಿನ ಕಾಯಬೇಕಿದೆ. ಅದಕ್ಕಾಗಿ ಕಾಶಿ ನಗರವನ್ನು ಹೋಲುವ ಸೆಟ್ ಅನ್ನು ಹೈದರಾಬಾದ್‌ನಲ್ಲಿ ಹಾಕಲು ಯೂನಿಟ್ ಆಲೋಚಿಸುತ್ತಿದೆ ಎಂದು ತಿಳಿದುಬಂದಿದೆ.

ಇನ್ನು ಮಹೇಶ್ ಗ್ಲೋಬಲ್ ಟ್ರೋಟಿಂಗ್ (ಪ್ರಪಂಚ ಸುತ್ತುವ ಮನುಷ್ಯ) ಕಾನ್ಸೆಪ್ಟ್‌ನೊಂದಿಗೆ ಸಿನಿಮಾ ಮಾಡುತ್ತಿದ್ದಾರೆ ಎಂದು ಹೇಳಿರುವುದರಿಂದ ಆಡಿಯೆನ್ಸ್‌ನಲ್ಲಿರುವ ನಿರೀಕ್ಷೆಗಳು ಅಷ್ಟಿಷ್ಟಲ್ಲ. ಪ್ರಸ್ತುತ ಈ ಸಿನಿಮಾದ ಶೂಟಿಂಗ್ ಒಡಿಶಾದಲ್ಲಿ ನಡೆಯುತ್ತಿದೆ. ಮಹೇಶ್, ಪೃಥ್ವಿರಾಜ್, ಪ್ರಿಯಾಂಕಾ ಅವರ ಕಾಂಬಿನೇಷನ್ ಸೀನ್ಸ್‌ಗಳನ್ನು ಚಿತ್ರೀಕರಿಸಲಾಗುತ್ತಿದೆ. ಈ ಸಿನಿಮಾದ ಶೂಟಿಂಗ್‌ನ ಒಂದು ವಿಡಿಯೋ ಹೊರಬಂದಿದೆ. ಇದರಿಂದ ಇನ್ನೂ ಹೆಚ್ಚಿನ ಬಿಗಿ ಭದ್ರತೆಯೊಂದಿಗೆ ಈ ಸಿನಿವಾದ ಚಿತ್ರೀಕರಣ ನಡೆಯುತ್ತಿದೆ ಎಂದು ತಿಳಿದುಬಂದಿದೆ. ಈ ತಿಂಗಳ 28ರವರೆಗೆ ತೋಲೋಮಾಲಿ, ದೇವ್‌ಮಾಲಿ, ಮಾಚ್‌ಖಂಡ್ ಪ್ರದೇಶಗಳಲ್ಲಿನ ಆಯ್ಕೆ ಮಾಡಿದ ಸ್ಥಳಗಳಲ್ಲಿ ಚಿತ್ರೀಕರಣ ನಡೆಯಲಿದೆ. ತೋಲೋಮಾಲಿ ಪರ್ವತದ ಮೇಲೆ ದೊಡ್ಡ ಸೆಟ್ ಹಾಕಲಾಗಿದೆ. ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿರುವ ಪ್ರಿಯಾಂಕಾ ಚೋಪ್ರಾ ಇನ್ನೂ ಕೆಲವು ದಿನಗಳಲ್ಲಿ ಶೂಟಿಂಗ್‌ನಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿದುಬಂದಿದೆ.



# ಪಾಕಿಸ್ತಾನ್ ಕ್ರಿಕೆಟ್ ಐಸಿಯುನಲ್ಲಿದೆ

ಚಾಂಪಿಯನ್ಸ್ ಟ್ರೋಫಿಯಲ್ಲಿನ ಹೀನಾಯ ಸೋಲಿನ ಬೆನ್ನಲ್ಲೇ ಇದೀಗ ಪಾಕಿಸ್ತಾನ್ ತಂಡ ಟಿ20 ಸರಣಿಗಾಗಿ ಸಜ್ಜಾಗುತ್ತಿದೆ. ನ್ಯೂಝಿಲೆಂಡ್ ವಿರುದ್ಧದ 5 ಪಂದ್ಯಗಳ ಸರಣಿಗಾಗಿ ಈಗಾಗಲೇ ತಂಡವನ್ನು ಘೋಷಿಸಲಾಗಿದೆ. ಈ ತಂಡದಲ್ಲಿ ಶಾದಾಬ್ ಖಾನ್ ಕಾಣಿಸಿಕೊಂಡಿರುವುದು ಪಾಕ್ ತಂಡದ ಮಾಜಿ ನಾಯಕ ಶಾಹಿದ್ ಅಫ್ರಿದಿಯ ಕಣ್ಣು ಕೆಂಪಾಗಿಸಿದೆ.




ಟಿ20 ವಿಶ್ವಕಪ್ ಬಳಿಕ ಪಾಕಿಸ್ತಾನ್ ತಂಡದಿಂದ ಹೊರಬಿದ್ದಿದ್ದ ಶಾದಾಬ್ ಖಾನ್ ಅವರನ್ನು ಯಾವ ಅರ್ಹತೆ ಮೇಲೆ ತಂಡಕ್ಕೆ ಆಯ್ಕೆ ಮಾಡಲಾಗಿದೆ ಎಂದು ಶಾಹಿದ್ ಅಫ್ರಿದಿ ಪ್ರಶ್ನಿಸಿದ್ದಾರೆ. ಅಲ್ಲದೆ ಶಾದಾಬ್ ಅವರನ್ನು ಉಪನಾಯಕನ್ನಾಗಿ ನೇಮಿಸಿರುವುದಕ್ಕೆ ಅಚ್ಚರಿಯನ್ನು ಸಹ ವ್ಯಕ್ತಪಡಿಸಿದ್ದಾರೆ.

ಈ ವಿಚಾರವಾಗಿ ಮಾಧ್ಯಮದೊಂದಿಗೆ ಮಾತನಾಡಿದ ಅಫ್ರಿದಿ, ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ತೆಗೆದುಕೊಳ್ಳುತ್ತಿರುವ ತಪ್ಪು ನಿರ್ಧಾರಗಳಿಂದಾಗಿ ಇಂದು ಪಾಕ್ ಕ್ರಿಕೆಟ್ ಐಸಿಯುನಲ್ಲಿದೆ. ನಮ್ಮ ತಂಡವು ಚೇತರಿಸಿಕೊಳ್ಳುವುದನ್ನು ಎದುರು ನೋಡುತ್ತಲೇ ಇರಬೇಕು. ಆದರೆ ಪಿಸಿಬಿ ಕಡೆಯಿಂದ ಉತ್ತಮ ತಂಡವನ್ನು ನಿರೀಕ್ಷಿಸುವಂತಿಲ್ಲ ಎಂದು ಅಫ್ರಿದಿ ಆಕ್ರೋಶ ಹೊರಹಾಕಿದ್ದಾರೆ.

# ಚಿರಂಜೀವಿ ಫೋಟೋ ಇಟ್ಟುಕೊಂಡು ಮಲಗುವ ನಟಿ!

ಮೆಗಾಸ್ಟಾರ್ ಚಿರಂಜೀವಿ ಜೊತೆ ನಟಿಸುವುದು ಒಂದು ಕಾಲದಲ್ಲಿ ಬಹಳಷ್ಟು ನಟಿಯರ ಕನಸಾಗಿತ್ತು. ಮೆಗಾಸ್ಟಾರ್ ಸಿನಿಮಾದಲ್ಲಿ ಚಾನ್ಸ್ ಬಂದರೆ ಯಾರೂ ಬಿಟ್ಟುಕೊಳ್ತಾ ಇರಲಿಲ್ಲ. 90ರ ದಶಕದಲ್ಲಿ ಮಿಂಚಿದ ಕ್ರೇಜಿ ನಟಿಯರೆಲ್ಲಾ ಮೆಗಾಸ್ಟಾರ್ ಜೊತೆ ನಟಿಸಿದ್ದಾರೆ. ಒಂದಿಬ್ಬರು ಮಿಸ್ ಆದ್ರು ಅಷ್ಟೇ. ಅವರಲ್ಲಿ ಪ್ರಮುಖವಾಗಿ ಆಮನಿ ಹೆಸರು ಕೇಳಿ ಬರುತ್ತೆ. ಆಮನಿ ಸ್ಟಾರ್ ನಟಿಯರಿಗೆ ಏನೂ ಕಮ್ಮಿ ಇರಲಿಲ್ಲ. ಅವರ ಕೆರಿಯರ್‌ನಲ್ಲಿ 'ಶುಭಲಗ್ನಂ' ಸಿನಿಮಾ ಒಂದು ಕ್ಲಾಸಿಕ್ ಆಗಿ ಉಳಿದು ಹೋಗುತ್ತೆ. ಆ ಸಿನಿಮಾದಲ್ಲಿ ಆಮನಿ ಅವರ ನಟನೆಯನ್ನು ತೆಲುಗು ಪ್ರೇಕ್ಷಕರು ಯಾವತ್ತೂ ಮರೆಯೋಕೆ ಸಾಧ್ಯವಿಲ್ಲ. ದುಡ್ಡು ವ್ಯಾಮೋಹಕ್ಕೆ ಗಂಡನ್ನೇ ಮಾರಿಕೊಂಡ ಹೆಂಡತಿಯಾಗಿ ಅವರ ನಟನೆ ಅದ್ಭುತವಾಗಿತ್ತು. ಬಾಲಕೃಷ್ಣ, ನಾಗಾರ್ಜುನ ಜೊತೆ ಆಮನಿ ನಟಿಸಿದ್ದಾರೆ. ಆದರೆ ಚಿರಂಜೀವಿ, ವೆಂಕಟೇಶ್ ಜೊತೆ ನಟಿಸುವ ಚಾನ್ಸ್ ಅವರಿಗೆ ಸಿಗಲಿಲ್ಲ. ಇದರ ಬಗ್ಗೆ ನಟಿ ಆಮನಿ ಒಂದು ಸಂದರ್ಶನದಲ್ಲಿ ರಿಯಾಕ್ಟ್ ಮಾಡಿದ್ದಾರೆ.






ಚಿರಂಜೀವಿ ಅವರ ಜೊತೆ ನಟಿಸಬೇಕು ಅನ್ನೋದು ನನ್ನ ಕನಸಾಗಿತ್ತು. ಆದರೆ ಅದು ನೆರವೇರಲಿಲ್ಲ. ಒಂದೆರಡು ಸಲ ಚಾನ್ಸ್ ಬಂತು. ಒಂದು ಸಲ ಹೀರೋಯಿನ್ ಆಗಿ ಚಾನ್ಸ್ ಬಂತು. ನನ್ನನ್ನು ಹೀರೋಯಿನ್ ಆಗಿ ಫೈನಲ್ ಮಾಡಿದ್ದರು. ಡೇಟ್ಸ್ ಕೂಡಾ ತೆಗೆದುಕೊಂಡರು. ಚಿರಂಜೀವಿ ಅವರ ಜೊತೆ ಮಾತಾಡಿ ನನ್ನ ಖುಷಿಯನ್ನು ಹೇಳಿಕೊಂಡೆ. ಆದರೆ ಕೊನೆ ಗಳಿಗೆಯಲ್ಲಿ ಏನಾಯ್ತೋ ಗೊತ್ತಿಲ್ಲ, ನನ್ನನ್ನು ತೆಗೆದು ಇನ್ನೊಬ್ಬ ಹೀರೋಯಿನ್ ಅನ್ನು ತೆಗೆದುಕೊಂಡರು. ಹಾಗೆ ಯಾಕೆ ಆಯ್ತೋ ನನಗೆ ಗೊತ್ತಿಲ್ಲ.

ಮತ್ತೊಂದು ಸಂದರ್ಭದಲ್ಲಿ ಅವರಿಗೆ ತಂಗಿಯಾಗಿ ನಟಿಸುವ ಅವಕಾಶ ಬಂತು ಅಂತ ಆಮನಿ ಹೇಳಿದ್ದಾರೆ. ಆದರೆ, ಚಿರಂಜೀವಿ ಅವರ ಪಕ್ಕದಲ್ಲಿ ನಟಿಸಿದರೆ ಹೀರೋಯಿನ್ ಆಗಿನೇ ನಟಿಸ್ತೀನಿ, ಸಿಸ್ಟರ್ ಪಾತ್ರದಲ್ಲಿ ಸತ್ತರೂ ನಟಿಸಲ್ಲ ಅಂತ ಹೇಳಿಬಿಟ್ಟರು. ತನಗೆ ಚಿರಂಜೀವಿ ಎಂದರೆ ಹುಚ್ಚು ಅಭಿಮಾನ ಇದೆ. ತನ್ನ ರೂಮ್ ಪೂರ್ತಿ ಮೆಗಾಸ್ಟಾರ್ ಫೋಟೋಗಳೇ, ಪೋಸ್ಟರ್‌ಗಳೇ ಇರುತ್ತಿದ್ದವು ಅಂತ ಆಮನಿ ಹೇಳಿದ್ದಾರೆ. ಚಿರಂಜೀವಿ ಅವರ ಫೋಟೋ ದಿಂಬಿನ ಕೆಳಗೆ ಇಟ್ಟು ಮಲಗುತ್ತಿದ್ದೆ. ಅವರೆಂದರೆ ಅಷ್ಟೊಂದು ಅಭಿಮಾನ ಅಂತ ಹೇಳಿದ್ದಾರೆ.

ನನಗೆ ಈಗಲೂ ರಾಮ್ ಚರಣ್‌ಗೆ ತಾಯಿಯಾಗಿ ನಟಿಸೋಕೆ ಓಕೆ, ಆದರೆ ಚಿರಂಜೀವಿ ಪಕ್ಕದಲ್ಲಿ ತಂಗಿಯಾಗಿ ಮಾತ್ರ ನಟಿಸಲ್ಲ ಅಂತ ಆಮನಿ ಹೇಳಿದ್ದಾರೆ. 'ಜಂಬಲಕಿಡಿ ಪಂಬ' ಸಿನಿಮಾ ಮೂಲಕ ಆಮನಿ ಟಾಲಿವುಡ್‌ಗೆ ಎಂಟ್ರಿ ಕೊಟ್ಟರು. ಈ ಸಿನಿಮಾ ಸೂಪರ್ ಹಿಟ್ ಆಯಿತು. 'ಮಿಸ್ಟರ್ ಪೆಳ್ಳಾಂ', 'ಶುಭಲಗ್ನಂ', 'ವಂಶಾನಿಕೊಕ್ಕಡು', 'ಮಾವಿಚಿಗುರು' ರೀತಿಯ ಹಿಟ್ ಚಿತ್ರಗಳಲ್ಲಿ ಆಮನಿ ನಟಿಸಿದ್ದಾರೆ.

# ಯಶ್ ಗುಣಗಾನ ಮಾಡಿದ ಹಾಲಿವುಡ್ ತಂತ್ರಜ್ಞ



'ಟಾಕ್ಸಿಕ್' ಚಿತ್ರ ಯಾವ ರೀತಿಯಲ್ಲಿ ಸಿದ್ಧವಾಗುತ್ತಿದೆ ಎನ್ನುವ ಮುನ್ಸೂಚನೆ ಸಿಗುತ್ತಲೇ ಇದೆ. ಈ ಚಿತ್ರಕ್ಕೆ ಇಂಗ್ಲಿಷ್ ಹಾಗೂ ಕನ್ನಡದಲ್ಲಿ ಒಟ್ಟಾಗಿ ಶೂಟಿಂಗ್ ಮಾಡಲಾಗುತ್ತಿದ್ದು, ಅಭಿಮಾನಿಗಳಲ್ಲಿ ನಿರೀಕ್ಷೆ ಹೆಚ್ಚಿದೆ.

ಈ ರೀತಿ ಕನ್ನಡ ಹಾಗೂ ಇಂಗ್ಲಿಷನ್‌ನಲ್ಲಿ ಚಿತ್ರವನ್ನು ಒಟ್ಟಿಗೆ ಶೂಟ್ ಮಾಡುತ್ತಿರುವುದು ಸ್ಯಾಂಡಲ್‌ವುಡ್ ಇತಿಹಾಸದಲ್ಲಿ ಇದೇ ಮೊದಲು ಅನ್ನೋದು ವಿಶೇಷ. ಈಗ ಸಿನಿಮಾ ಬಗ್ಗೆ, ಯಶ್ ಬಗ್ಗೆ ಅಮೆರಿಕದ ಸಾಹಸ ನಿರ್ದೇಶಕ ಜೆಜೆ ಪೆರ್ರಿ ಅವರು ಮಾತನಾಡಿದ್ದಾರೆ.

ಅವರು ಯಶ್ ಅವರನ್ನು ಹೊಗಳಿದ್ದಾರೆ. ಹಾಲಿವುಡ್‌ನಲ್ಲಿ ಬೇರೆಯದೇ ಅಲೆ ಸೃಷ್ಟಿಸಿದ 'ಐರನ್ ಮ್ಯಾನ್', 'ಎಕ್ಸ್ ಮ್ಯಾನ್', 'ಜಾನ್ ವಿಕ್ 2' ಸೇರಿ ಹಲವಾರು ಚಿತ್ರಗಳಲ್ಲಿ ಜೆಜೆ ಪೆರ್ರಿ ಅವರು ಕೆಲಸ ಮಾಡಿದ್ದಾರೆ. ಈಗ 'ಟಾಕ್ಸಿಕ್' ಸಿನಿಮಾಗೆ ಆಕ್ಷನ್ ದೃಶ್ಯಗಳನ್ನು ಇವರು ಸಂಯೋಜನೆ ಮಾಡಿದ್ದಾರೆ.

ಎಲ್ಲಾ ಫೈಟ್‌ಗಳು ಭಿನ್ನವಾಗಿ ಇವೆ ಎನ್ನಲಾಗಿದೆ. ಅವರು ಯಶ್ ಬಗ್ಗೆ ಮೆಚ್ಚುಗೆಯ ಮಾತನ್ನು ಆಡಿದ್ದಾರೆ. 'ಟಾಕ್ಸಿಕ್' ಸಿನಿಮಾದ ಶೂಟಿಂಗ್ ಅನುಭವ ಹೇಗಿತ್ತು ಎಂಬುದನ್ನು ಇವರು ವಿವರಿಸಿದ್ದಾರೆ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878